ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

KB 12 YEARS 2013

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 51

6-8-2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 51

## ಹೈಕೋರ್ಟ್ ಛೀಮಾರಿ: ಸಾರಿಗೆ ಮುಷ್ಕರ ಮುಂದೂಡಿಕೆ

**ಬೆಂಗಳೂರು :** ರಾಜ್ಯಾದ್ಯಂತ ಸರ್ಕಾರಿ ಸಾರಿಗೆ ನಿಗಮಗಳ ನೌಕರರ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ತಡೆಯಾಜ್ಞೆ ನೀಡಿದ್ದ ಮಧ್ಯಂತರ ಆದೇಶವನ್ನು ವಿಸ್ತರಿಸಿರುವ ಕರ್ನಾಟಕ ಹೈಕೋರ್ಟ್, ನ್ಯಾಯಾಲಯದ ಆದೇಶ ಉಲ್ಲಂಘಿಸಿ ಮುಷ್ಕರ ಮುಂದುವರಿಸಿದರೆ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸುವುದಾಗಿ ಮಂಗಳವಾರ ಎಚ್ಚರಿಸಿದೆ. ಒಂದು ದಿನ ಮುಷ್ಕರ ಮುಂದೂಡುವಂತೆ ಹೈಕೋರ್ಟ್ ಸೂಚನೆ ನೀಡಿದ ನಂತರವೂ ಸಾರಿಗೆ ನೌಕರರು ಇಂದು ಮುಷ್ಕರ ನಡೆಸಿದ್ದರು. ಇದರಿಂದ ಗರಂ ಆದ ಹೈಕೋರ್ಟ್ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯನ್ನು ತರಾಟೆಗೆ ತೆಗೆದುಕೊಂಡಿತು. ಎಸ್ಮಾ ಕಾಯ್ದೆಯಡಿ ಸರ್ಕಾರ ಸಂಘಟನೆಯ ಪದಾಧಿಕಾರಿಗಳನ್ನು ಬಂಧಿಸಬಹುದು ಎಂದು ಖಡಕ್ ಎಚ್ಚರಿಕೆ ನೀಡಿತು. ನಾಳೆ ಮುಷ್ಕರ ನಿಂತಿರುವ ಬಗ್ಗೆ ಮಾಹಿತಿ ನೀಡಬೇಕೆಂದು ಹೈಕೋರ್ಟ್ ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ಪರ ವಕೀಲರಿಗೆ ಸೂಚಿಸಿ, ಮುಂದಿನ ವಿಚಾರಣೆಯನ್ನು ಆಗಸ್ಟ್ 7ಕ್ಕೆ ಮುಂದೂಡಿದೆ. ಇನ್ನು ಹೈಕೋರ್ಟ್ ಎಚ್ಚರಿಕೆ ಬೆನ್ನಲ್ಲೇ ಸಾರಿಗೆ ನೌಕರರು ಮುಷ್ಕರವನ್ನು ಮುಂದೂಡಿದ್ದಾರೆ. ಈ ಬಗ್ಗೆ ಮಾತನಾಡಿದ, ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಅನಂತ ಸುಬ್ಬರಾವ್ ಸಾರಿಗೆ ನೌಕರರ ಮುಷ್ಕರವನ್ನು ಮುಂದೂಡಿರುವುದಾಗಿ ಘೋಷಿಸಿದ್ದು, ಎಲ್ಲಾ ಸಾರಿಗೆ ನೌಕರರು ಈ ಕ್ಷಣದಿಂದಲೇ ಕರ್ತವ್ಯಕ್ಕೆ ಹಾಜರಾಗಬೇಕು ಎಂದು ತಿಳಿಸಿದರು.

## ರಾಜ್ಯದಲ್ಲಿ ಮುಂದಿನ ಮೂರು ದಿನ ಗಾಳಿ ಸಹಿತ ಭಾರೀ ಮಳೆ

**ಬೆಂಗಳೂರು :** ಬೆಂಗಳೂರಿನಲ್ಲಿ ನಿನ್ನೆ ಧಾರಾಕಾರ ಮಳೆಯಾಗಿದ್ದು ಮುಂದಿನ ಮೂರು ದಿನಗಳ ಕಾಲ ನಗರ ಸೇರಿದಂತೆ ದಕ್ಷಿಣ ಕರ್ನಾಟಕದಾದ್ಯಂತ ಗಾಳಿ ಸಹಿತ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ನಗರದಲ್ಲಿ ಕಳೆದ ರಾತ್ರಿ ಸುರಿದ 45 ಮಿಮೀ ಮಳೆಯಿಂದ ಕಸ್ತೂರಿನಗರದ ಬಿಡಿಎ ಲೇಔಟ್‌ನಲ್ಲಿ 20 ಕ್ಕೂ ಹೆಚ್ಚು ಮನೆಗಳಿಗೆ ನೀರು ನುಗ್ಗಿತು. ಮಳೆಯಿಂದಾಗಿ ಮುಖ್ಯ ರಸ್ತೆಗಳು ಜಲಾವೃತಗೊಂಡವು, ಹೊಸಕೋಟೆಗೆ ಹೋಗುವ ರಾಮಮೂರ್ತಿ ನಗರ ರಸ್ತೆ ಮತ್ತು ಹೊಸೂರು ರಸ್ತೆಯ ಬಳಿಯ ವೀರಸಂದ್ರದಲ್ಲಿ ಸಂಚಾರಕ್ಕೆ ಅಡ್ಡಿಯಾಯಿತು. ಕಸ್ತೂರಿನಗರ ನಿವಾಸಿಗಳ ಪ್ರಕಾರ, ಮಧ್ಯರಾತ್ರಿ ಜಾವ 12.30 ರ ಸುಮಾರಿಗೆ ಚರಂಡಿಗಳಿಂದ ನೀರು ಹೊರಬಂದು ರಸ್ತೆಗಳಿಗೆ ಮತ್ತು ಮನೆಗಳಿಗೆ ನುಗ್ಗಿ, ಸಂಪ್‌ಗಳು, ನೆಲಮಾಳಿಗೆಗಳು, ಲಿಫ್ಟ್‌ಗಳು ಮತ್ತು ಪೀಠೋಪಕರಣಗಳಿಗೆ ಹಾನಿಯಾಗಿದೆ.

## ಬಸ್‌ಗಳ ನಡುವೆ ಸಿಲುಕಿ ಆಟೋ ನಜ್ಜುಗುಜ್ಜು; ನಾಲ್ವರಿಗೆ ಗಂಭೀರ ಗಾಯ

**ಚಿತ್ರದುರ್ಗ :** ಚಿತ್ರದುರ್ಗದ ಪ್ರಧಾನ ಅಂಚೆ ಕಚೇರಿ ಬಳಿ ಎರಡು ಬಸ್ ಗಳ ನಡುವೆ ಸಿಲುಕಿ ಆಟೋವೊಂದು ನಜ್ಜುಗುಜ್ಜಾಗಿದು ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳು ನವೀನ್, ಪೂಜಾ, ನಿಂಗರಾಜು ಮತ್ತು ಮಹಾಂತೇಶ್ ಅವರಿಗೆ ಚಿತ್ರದುರ್ಗದ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಖಾಸಗಿ ಬಸ್ ಚಾಲಕನ ನಿರ್ಲಕ್ಷ್ಯವೇ ಅಪಘಾತಕ್ಕೆ ಕಾರಣ ಎಂದು ಸಂಚಾರಿ ಪೊಲೀಸರು ತಿಳಿಸಿದ್ದಾರೆ.

## ಸೆ. 13 ರಂದು ರಾಷ್ಟ್ರೀಯ ಲೋಕ ಅದಾಲತ್

**ಚಿಕ್ಕಮಗಳೂರು, ಆ.5:** ಸೆಪ್ಟಂಬರ್ 13 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಲಾಗಿದ್ದು, ಅದಾಲತ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸುವ ಕುರಿತು ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣದ ಪೂರ್ವಭಾವಿ ಲೋಕ ಅದಾಲತ್ ಬೈಠಕ್ ನಡೆಸಲಾಗುತ್ತಿದೆ. ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಈ ಅದಾಲತ್ ಅನ್ನು ಆಯೋಜಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ತಿಳಿಸಿದ್ದಾರೆ.

## ಸಾರಿಗೆ ನೌಕರರ ಮುಷ್ಕರ: ಯಾವುದೇ ಅಹಿತಕರ ಘಟನೆಗಳು ನಡೆದಿಲ್ಲ : ಜಿ.ಪರಮೇಶ್ವರ್

**ಬೆಂಗಳೂರು:** ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರು ಇಂದು ರಾಜ್ಯಾದ್ಯಂತ ನಡೆಸುತ್ತಿರುವ ಮುಷ್ಕರಿಂದ ಇಲ್ಲಿಯವರೆಗೂ ಯಾವುದೇ ದೊಡ್ಡ ಅಹಿತಕರ ಘಟನೆಗಳು ನಡೆದಿಲ್ಲ. ಪೊಲೀಸರು ಅಗತ್ಯ ಸುರಕ್ಷತಾ ಕ್ರಮ ಕೈಗೊಂಡಿದ್ದು, ಮುಷ್ಕರದ ಹೊರತಾಗಿ ಕೆಲವು ಬಸ್ ಗಳು ಓಡಾಡುತ್ತಿವೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ಎಎನ್ ಐ ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಅವರು, ಸಾರಿಗೆ ನೌಕರರ ಮುಷ್ಕರ ನಡೆಯುತ್ತಿದೆ. ಆದರೆ ಇಲ್ಲಿಯವರೆಗೂ ಯಾವುದೇ ದೊಡ್ಡ ಅಹಿತಕರ ಘಟನೆಗಳು ನಡೆದಿಲ್ಲ. ಪೊಲೀಸರು ಈಗಾಗಲೇ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ ಎಂದರು.

ಸಂಪೂರ್ಣ ಬಂದ್ ಆಗಿದ್ದರೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿತ್ತು. ಸಾರಿಗೆ ನೌಕರರ ಒಂದು ಒಕ್ಕೂಟ ಅಥವಾ ಗುಂಪೊಂದು ಬಸ್ ಗಳ ಕಾರ್ಯಾಚರಣೆ ಮಾಡುತ್ತಿದ್ದು, ಅಂತಹ ಯಾವುದೇ ತೊಂದರೆ ಆಗಿಲ್ಲ ಎಂದರು. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಎಲ್ಲಾ ಬಿಎಂಟಿಸಿ ಬಸ್ ಗಳು ಸಂಚರಿಸುತ್ತಿವೆ. ಮುಷ್ಕರದ ಹೊರತಾಗಿಯೂ ಶೇ. 40 ರಷ್ಟು ಕೆಎಸ್ ಆರ್ ಟಿಸಿ ಬಸ್ ಗಳು ಓಡಾಡುತ್ತಿವೆ. ಮುಷ್ಕರದ ಸಂಬಂಧ ಅರ್ಜಿಯನ್ನೊಂದರ ವಿಚಾರಣೆ ನಡೆಸಿದ ಹೈಕೋರ್ಟ್, ಮುಷ್ಕರವನ್ನು ಒಂದು ದಿನ ಮುಂದೂಡುವಂತೆ ಹೇಳಿತ್ತು. ಆದಾಗ್ಯೂ ಕೋರ್ಟ್ ಆದೇಶ ಉಲ್ಲಂಘಿಸಿ ಕೆಲ ನೌಕರರು ಮುಷ್ಕರ ನಡೆಸುತ್ತಿದ್ದಾರೆ.

### ಧರ್ಮಸ್ಥಳ ಪ್ರಕರಣಕ್ಕೆ ಬಿಗ್ ಟ್ವಿಸ್ಟ್:

# ಮಹಿಳೆ ಸೇರಿ ಮೂವರ ಅಸ್ಥಿಪಂಜರ ಪತ್ತೆ

**ಮಂಗಳೂರು:** ಧರ್ಮಸ್ಥಳ ಸಾಮೂಹಿಕ ಸಮಾಧಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕಳೆದ 6 ದಿನಗಳಿಂದ ಅನಾಮಿಕ ತೋರಿಸಿದ ಜಾಗದಲ್ಲಿ ಎಸ್‌ಐಟಿ ಅಧಿಕಾರಿಗಳು ಕಾರ್ಯಾಚರಣೆ ನಡೆಸುತ್ತಿದ್ದು, ಇದೀಗ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದೆ.

7ನೇ ದಿನವಾದ ಮಂಗಳವಾರವೂ ಉತ್ಖನನ ಕಾರ್ಯ ಪುನರಾರಂಭಿಸಿದ ವಿಶೇಷ ತನಿಖಾ ತಂಡ(ಖಖಖಿ)ಕ್ಕೆ ಯಾವುದೇ ಮಾನವ ಅಸ್ಥಿಪಂಜರದ ಅವಶೇಷಗಳು ಕಂಡುಬಂದಿಲ್ಲ ಎನ್ನಲಾಗಿದೆ.

ಭಾರೀ ಮಳೆಯ ನಡುವೆ ಸಾಕ್ಷಿ–ದೂರುದಾರ ತೋರಿಸಿರುವ 11 ಮತ್ತು 12ನೇ ಸ್ಥಳಗಳಲ್ಲಿ ಖಖಖಿಯ ತನಿಖಾಧಿಕಾರಿ ಮತ್ತು ಪುತ್ತೂರು ವಿಭಾಗದ ಸಹಾಯಕ ಆಯುಕ್ತ(ಂಅ) ಸ್ಟೆಲ್ಲಾ ವರ್ಗೀಸ್ ಅವರ ಮೇಲ್ವಿಚಾರಣೆಯಲ್ಲಿ ಇಂದು ಸಹ ಸಮಾಧಿ ಅಗೆಯುವ ಕಾರ್ಯ ನಡೆಸಲಾಯಿತು. ಆದರೆ ಯಾವುದೇ ಅವಶೇಷಗಳ ಕುರುಹು ಇಲ್ಲದ ಕಾರಣ ಖಖಖಿ ಯ ಪ್ರಯತ್ನಗಳು ಯಾವುದೇ ಫಲಿತಾಂಶ ನೀಡಿಲ್ಲ. ಇಲ್ಲಿಯವರೆಗೆ ಖಖಖಿ ಅಗೆದ 12 ಸ್ಥಳಗಳಲ್ಲಿ, ಕೇವಲ ಒಂದು ಸ್ಥಳದಲ್ಲಿ ಮಾತ್ರ ಮಾನವ ಅಸ್ಥಿಪಂಜರ



ಪತ್ತೆಯಾಗಿದೆ ಎನ್ನಲಾಗಿದೆ.

ಏತನ್ಮಧ್ಯೆ, ಧರ್ಮಸ್ಥಳದಲ್ಲಿ ದಶಕದ ಹಿಂದೆ ನಾಪತ್ತೆಯಾಗಿದ್ದರು ಎನ್ನಲಾದ ಎಂಬಿಬಿಎಸ್ ವಿದ್ಯಾರ್ಥಿನಿ ಅನನ್ಯ ಭಟ್ ಅವರ ತಾಯಿ ಸುಜಾತಾ ಭಟ್ ಅವರ ವಕೀಲರು, 'ಸೋಮವಾರ ದೂರುದಾರರು ತೋರಿಸಿದ ಸ್ಥಳಗಳನ್ನು ಅಗೆದ ನಂತರ ಮೂರು ಮಾನವ ಅಸ್ಥಿಪಂಜರಗಳು ಪತ್ತೆಯಾಗಿವೆ' ಎಂದು ಹೇಳಿಕೊಂಡಿದ್ದಾರೆ.

ಸೋಮವಾರ ಪಾಯಿಂಟ್ 11ರಿಂದ 100 ಮೀಟರ್ ದೂರದಲ್ಲಿ ಮೂರು ಮಾನವ ಅಸ್ಥಿಪಂಜರ ಅವಶೇಷಗಳು ಪತ್ತೆಯಾಗಿವೆ. ಅವುಗಳಲ್ಲಿ ಒಂದು ಮಹಿಳೆಯದ್ದಾಗಿತ್ತು. ಅದೇ ಸ್ಥಳದಲ್ಲಿ ಮಹಿಳೆಯ ಸೀರೆ ಕೂಡ ಪತ್ತೆಯಾಗಿದೆ ಸುಜಾತ ಭಟ್ ಪರ ವಕೀಲ ಮಂಜುನಾಥ್? ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿನ್ನೆಯ ಕಾರ್ಯಾಚರಣೆ ಯಶಸ್ವಿಯಾಗಿದೆ. ಏಕೆಂದರೆ ಎಸ್?ಐಟಿ ಅನಾಮಿಕ ದೂರುದಾರನಿಗೆ ಹೊಸ ಜಾಗ ತೋರಿಸಲು ಅವಕಾಶ ನೀಡಿದೆ. ಇದರಿಂದ ನಿನ್ನೆಯ ಅಸ್ಥಿಪಂಜರ ಅಗೆಯುವ ಕಾರ್ಯ ಯಶಸ್ವಿಯಾಗಿತ್ತು. ಎಸ್‌ಐಟಿ ಸಹಿತ ಶೋಧ ನಡೆಸುತ್ತಿರುವ ತಂಡದ ಕಾರ್ಯಾಚರಣೆ ಶ್ಲಾಘನೀಯ ಅಂತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"ದೂರುದಾರರು ಮೊದಲ ದಿನ ಮಾಡಿದ ಆರಂಭಿಕ ಅಳತೆಗೆ ಬದ್ಧರಾಗಿ, ಆ ಸ್ಥಳದಿಂದ ಮಾತ್ರ ಅವಶೇಷಗಳನ್ನು ಹೊರತೆಗೆಯಬೇಕೆಂದು ಒತ್ತಾಯಿಸುವುದು ಅವೈಜ್ಞಾನಿಕ ಮಾತ್ರವಲ್ಲ, ಅರ್ಥಹೀನವೂ ಆಗಿರುತ್ತದೆ. ಮೊದಲ ದಿನ ತೋರಿಸಿದ ಸ್ಥಳಗಳನ್ನು ಗುರುತಿಸುವ ಸ್ವಾತಂತ್ರ್ಯವಿರುವ ವ್ಯಕ್ತಿಗೆ, ಆರಂಭದಲ್ಲಿ ಗುರುತಿಸಿದ್ದು ನಂತರ ತಪ್ಪಾಗಿದೆ ಎಂದು ಕಂಡುಬಂದರೆ ತನ್ನನ್ನು ತಾನು ಸರಿಪಡಿಸಿಕೊಳ್ಳುವ ಸ್ವಾಭಾವಿಕ ಸ್ವಾತಂತ್ರ್ಯವೂ ಇರುತ್ತದೆ" ಎಂದು ಅವರು ಪ್ರತಿಪಾದಿಸಿದ್ದಾರೆ.

**ಎರಡನೇ ದೂರು ಎಸ್‌ಐಟಿಗೆ ಹಸ್ತಾಂತರ :** ಆಗಸ್ಟ್ 1 ರಂದು ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಮಾನವ ಅವಶೇಷಗಳ ಪತ್ತೆ ಪ್ರಕರಣ ಮತ್ತು ಆಗಸ್ಟ್ 4 ರಂದು ಜಯಂತ್ ಎಂಬ ವ್ಯಕ್ತಿ ದಾಖಲಿಸಿದ್ದ ದೂರನ್ನು ಎಸ್‌ಐಟಿಗೆ ಹಸ್ತಾಂತರಿಸಲಾಗಿದೆ.

ಪೊಲೀಸ್ ಮಹಾ ನಿರ್ದೇಶಕ ಎಂಎ ಸಲೀಂ ಅವರು ಧರ್ಮಸ್ಥಳ ಠಾಣೆಯಲ್ಲಿ ದಾಖಲಾಗಿದ್ದ ಯುಡಿಆರ್ ಪ್ರಕರಣವನ್ನು ಹಸ್ತಾಂತರಿಸಲು ಆದೇಶಿಸಿದ್ದಾರೆ ಎಂದು ದಕ್ಷಿಣ ಕನ್ನಡ ಎಸ್ಪಿ ಡಾ. ಅರುಣ್ ಕೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಎಂಎಫ್‌ಎಂ ಯೋಜನೆಯಡಿ 200 ಫಲಾನುಭವಗಳಿಗೆ 1652ಲಕ್ಷ ಸಾಲ ಮಂಜೂರು : ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್

**ದಾವಣಗೆರೆ:** ಜಿಲ್ಲೆಯಾದ್ಯಂತ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಯೋಜನೆಯಡಿ ಜಿಲ್ಲೆಯಾದ್ಯಂತ 653 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 200 ಅರ್ಜಿಗಳಿಗೆ ರೂ.1652 ಲಕ್ಷ ಸಾಲ ಮಂಜೂರು ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠಲರಾವ್ ಹೇಳಿದರು.

ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ಆತ್ಮನಿರ್ಭರ ಭಾರತ ಅಭಿಯಾನದ ಸಹಯೋಗದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ್‌ನ ಎಸ್.ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಆಯೋಜಿಸಲಾದ "ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಯೋಜನೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರೈತ ಕುಟುಂಬ, ಸಣ್ಣ ಮತ್ತು ಅತೀ ಸಣ್ಣ ಉದ್ದಿಮೆದಾರ ಹಾಗೂ ಮಹಿಳೆಯರನ್ನು ಬಲವರ್ದನೆಗೊಳಿಸಲು 2020 ರಲ್ಲಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಯೋಜನೆ ಅನುಷ್ಠಾನಗೊಳಿಸಲಾಗಿದೆ. ಇದು ಭಾರತ ಸರ್ಕಾರದ ಪ್ರಮುಖ ಪ್ರಾಯೋಜಿತ ಯೋಜನೆಯಾಗಿದೆ.

ರೈತ ಬೆಳೆದ ಬೆಳೆಗೆ ತಕ್ಕ ಬೆಂಬಲ ಬೆಲೆ ಸಿಗುವುದಿಲ್ಲ.




ಆದ್ದರಿಂದ ಈ ಯೋಜನೆ ಮೂಲಕ ರೈತ ತಾನು ಬೆಳೆದ ಬೆಳೆಗೆ ನಿಗದಿತ ಬೆಲೆ ತೆರುವ ಮುಖೇನ ಸ್ಥಳೀಯವಾಗಿ ಬೆಳೆದ ರೈತ ಉತ್ಪನ್ನ, ಸಿರಿ ಧಾನ್ಯ ಬಳಸಿ ಸಣ್ಣ ಉದ್ದಿಮೆದಾರ, ಸ್ವ–ಸಹಾಯ ಸಂಘದ ಮಹಿಳೆಯರು ತಾವು ತಯಾರಿಸಿದ ಉತ್ಪನ್ನಗಳನ್ನು ಮೌಲ್ಯವರ್ಧನೆಗೊಳಿಸಬೇಕು. ಆಗ ರೈತ ಬೆಳೆದ ಬೆಳೆಗೆ ಉತ್ಪನ್ನ ಮಾರಾಟಗಾರರಿಗೆ ಸಮನಾದ ಬೆಲೆ ಸಿಗಲಿದೆ. ಉತ್ಪಾದಕರು ತಯಾರಿಸಿದ ಉತ್ಪನ್ನಕ್ಕೆ ಬ್ರ್ಯಾಂಡಿಗ್, ಸ್ಥಳೀಯವಾಗಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿ ಬೆಂಬಲ ಬೆಲೆ ನೀಡಿ ವ್ಯಾಪಾರ ವಹಿವಾಟು ಹೆಚ್ಚಿಸಲು ಸಹಾಯ ಮಾಡಲಾಗುವುದು. ಪ್ರಮುಖವಾಗಿ ಮಹಿಳೆಯರನ್ನು ಸಬಲೀಕರಣಗೊಳಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಸಣ್ಣ ಉದ್ದಿಮೆದಾರರು, ರೈತರು ವಿಶೇಷವಾಗಿ ಯುವಕರು ಈ ಯೋಜನೆಯ ಸದುಪಯೋಗ ಪಡೆದುಕೊಂಡು ವಿನೂತನ ಶೈಲಿಯ ಉತ್ಪನ್ನಗಳ ತಯಾರಿಕೆಯಲ್ಲಿ ತೊಡಗಿಸಿಕೊಳ್ಳಬೇಕು. ಸ್ವಂತ ಉದ್ಯಮಿಗಳಾಗಿ ನಾಲ್ಕಾರು ಜನಕ್ಕೆ ಕೆಲಸ ನೀಡುವಂತಹ ಸಾಮರ್ಥ್ಯ ವೃದ್ದಿಸಿಕೊಳ್ಳಬೇಕೆಂದು ಕಿವಿ ಮಾತು ಹೇಳಿದರು.

ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಕೂಲಂಬೆ ಗ್ರಾಮದ ರೈತ ಪಿಎಂಎಫ್‌ಎಂ ಯೋಜನೆ ಮತ್ತು ಕೃಷಿ ಇಲಾಖೆಯ ಸಹಾಯದಿಂದ ಮಿಲೆಟ್ ಬಿಸ್ಕೆಟ್ ಉತ್ಪನ್ನ ಘಟಕ ಸ್ಥಾಪಿಸಿ ಯಶಸ್ವಿಯಾಗಿದ್ದಾರೆ. ಇಂದು ಅವರು ತಯಾರಿಸಿದ ಉತ್ಪನ್ನವನ್ನು ದೇಶ ವಿದೇಶಗಳಿಗೆ ರಫ್ತು ಮಾಡಲಾಗುವುದಲ್ಲದೇ, ವಿಮಾನಗಳಲ್ಲಿ ಮಿಲೆಟ್ ಬಿಸ್ಕೆಟ್‌ನ್ನು ಬಳಸಲು ಅವಕಾಶ ದೊರಕಿದೆ. ಅದೇ ರೀತಿ ಪ್ರತಿಯೊಬ್ಬರೂ ಸಿರಿಧಾನ್ಯ ಮತ್ತು ಇತರೆ ಧಾನ್ಯಗಳ ಸಂಸ್ಕರಣೆ ಬಳಸಿ ರೊಟಿ ತಯಾರಿ, ಬೆಲ್ಲ, ನಿಂಬೆ, ಬೇಕರಿ, ಮಸಾಲಾ, ತೆಂಗು ಮತ್ತು ಕುಕ್ಕುಟ ಉತ್ಪನ್ನ ಹಾಗೂ ಕೋಲ್ಡ್ ಪ್ರೆಸ್ಡ್ ಆಯಿಲ್, ಮೆಣಸಿನ ಪುಡಿ ಘಟಕ, ಶುಂಠಿ ಸಂಸ್ಕರಣ ಘಟಕ ಸೇರಿದಂತೆ ಇತರೆ ಉತ್ಪನ್ನಗಳ ತಯಾರಿಸಿ ಯಶಸ್ಸು ಕಾಣಬೇಕು. ಕೇವಲ ಗುಣಮಟ್ಟದ ಉತ್ಪನ್ನ ತಯಾರಿದರೆ ಸಾಲದು ಬ್ರ್ಯಾಂಡ್, ಪ್ಯಾಕೇಜ್ ಮತ್ತು ಮಾರುಕಟ್ಟೆ ಬಹಳ ಮುಖ್ಯ. ಸಣ್ಣ ಉದ್ದಿಮೆದಾರರಿಗೆ, ಸ್ವ–ಸಹಾಯ ಸಂಘಗಳು ತಯಾರಿಸುವ ಉತ್ಪನ್ನಗಳಿಗೆ ಬ್ರ್ಯಾಂಡಿಗ್‌ಗಾಗಿ ಅವರನ್ನು ಬಲವರ್ಧನೆಗೊಳಿಸಲು ರೂ.62 ಲಕ್ಷ ಹಣ ಇದೆ. ಅಕ್ಕ ಕೆಫೆ ರೀತಿಯಲ್ಲಿ ಉತ್ತಮ ಗುಣಮಟ್ಟ ಮತ್ತು ಆಕರ್ಷಕ ಬ್ರ್ಯಾಂಡ್, ಪ್ಯಾಕಿಂಗ್ ಮಾಡಿದಲ್ಲಿ ತಮ್ಮ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ದೊರೆಯಲಿದೆ. ಇದರಿಂದ ಉತ್ಪಾದಕ ಹೆಚ್ಚಿನ ಲಾಭಗಳಿಸುವುದರ ಜೊತೆಗೆ ರೈತನಿಗೆ ಉಪಯುಕ್ತವಾಗಲಿದೆ ಎಂದರು.

ಪ್ರಾಸ್ತಾವಿಕವಾಗಿ ಬೆಂಗಳೂರಿನ ಕೆಫೆಕ್ ಸಂಸ್ಥೆಯ ಚಂದ್ರಶೇಖರ್ ಮಾತನಾಡಿ, ರೈತ ಬೆಳೆ ಬೆಳೆದ ನಂತರ ಅದಕ್ಕೆ ಮೌಲ್ಯವರ್ಧನೆ ಸಿಗುವಂತೆ ಮಾರುಕಟ್ಟೆ ಸೌಲಭ್ಯ ಒದಗಿಸಿ ಸಹಾಯ ಮಾಡಲಾಗುತ್ತದೆ. ಸಣ್ಣ ಮತ್ತು ಅತೀ ಸಣ್ಣ ಉದ್ಯಮಗಳಿಗೆ ಪಿಎಂಎಫ್‌ಎಂಇ ಸಹಾಯಕವಾಗಿದೆ. ಮಹಿಳೆಯರು, ಯುವಕರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. 18 ವರ್ಷ ಮೆಲ್ಪಟ್ಟ ಪ್ರತಿಯೊಬ್ಬ ನಾಗರೀಕನೂಯೋಜನೆಯಫಲಾನುಭವಿಯಾಗಬಹುದು ಎಂದರು.

## ಮಾಸ್ಕ್ ಧರಿಸಿದ್ದ ಇಬ್ಬರು ವ್ಯಕ್ತಿಗಳಿಂದ ಹುಬ್ಬಳ್ಳಿ – ಹೊಸಪೇಟೆ ಬಸ್ ಮೇಲೆ ಕಲ್ಲು ತೂರಾಟ

**ಗದಗ:** ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಾರಿಗೆ ನೌಕರರು ಮಂಗಳವಾರದಿಂದ ಮುಷ್ಕರ ಆರಂಭಿಸಿದ್ದು, ಹುಬ್ಬಳ್ಳಿಯಿಂದ ಹೊಸಪೇಟೆಗೆ ಹೋಗುತ್ತಿದ್ದ ಬಸ್ ಮೇಲೆ ಮಾಸ್ಕ್ ಧರಿಸಿದ್ದ ಇಬ್ಬರು ವ್ಯಕ್ತಿಗಳು ಕಲ್ಲು ತೂರಾಟ ನಡೆಸಿದ್ದಾರೆ.

ಇಂದು ಬೆಳಗ್ಗೆ 7.15 ರ ಸುಮಾರಿಗೆ ಹುಬ್ಬಳ್ಳಿ – ಗದಗ ಬೈಪಾಸ್ ರಸ್ತೆಯಲ್ಲಿ ಈ ಘಟನೆ ನಡೆದಿದೆ.ಹುಬ್ಬಳ್ಳಿಯಿಂದ ಹೊಸಪೇಟೆಗೆ ಹೋಗುತ್ತಿದ್ದ ಬಸ್ ಅನ್ನು ಬೈಕ್‌ನಲ್ಲಿ ಹಿಂಬಾಲಿಸಿದ ಇಬ್ಬರು ಮುಸುಕುಧಾರಿ ವ್ಯಕ್ತಿಗಳು, ಬಸ್ ಮುಂದೆ ಬಂದು ಕಲ್ಲು ತೂರಾಟ ನಡೆಸಿ ಪರಾರಿಯಾಗಿದ್ದಾರೆ. ಅದೃಷ್ಟವಶಾತ್ ಬಸ್‌ನಲ್ಲಿ ಕೇವಲ 20–25 ಪ್ರಯಾಣಿಕರು ಮಾತ್ರ ಇದ್ದುದರಿಂದ ಯಾರಿಗೂ ಯಾವುದೇ ಗಾಯಗಳಾಗಿಲ್ಲ.

ಚಾಲಕ ಭಯಭೀತರಾಗಿದ್ದು, ಗದಗಕ್ಕೆ ಬಂದು ಬಸ್ ನಿಲ್ಲಿಸಿದ್ದಾರೆ. "ನಾವು ಹುಬ್ಬಳ್ಳಿಯಿಂದ ಗದಗಕ್ಕೆ ಬರುತ್ತಿದ್ದೆವು ಮತ್ತು ನಾವು ಹುಬ್ಬಳ್ಳಿ ಬೈಪಾಸ್ ತಲುಪಿದಾಗ, ಇಬ್ಬರು ವ್ಯಕ್ತಿಗಳು ಬೈಕ್‌ನಲ್ಲಿ ಬಂದರು ಮತ್ತು ಅವರು ಮುಖಕ್ಕೆ ಮಾಸ್ಕ್ ಧರಿಸಿದ್ದರು ಮತ್ತು ಅವರು ತುಂಬಾ ವೇಗವಾಗಿ ಬಂದು ಬಸ್ ಅನ್ನು ಹಿಂದಿಕ್ಕಿ ಮುಂಭಾಗದಿಂದ ಕಲ್ಲು ತೂರಿ, ಹೊರಟುಹೋದರು. ನಮಗೆ ಅವರ ಮುಖ ಕಾಣಿಸಲಿಲ್ಲ ಮತ್ತು ಅವರು ಯಾರೆಂದು ನಮಗೆ ಗುರುತಿಸಲು ಸಾಧ್ಯವಾಗಲಿಲ್ಲ. ಅನೇಕ ಪ್ರಯಾಣಿಕರು ವಾಹನದ ಸಂಖ್ಯೆಯನ್ನು ಸಹ ನೋಡಲಿಲ್ಲ. ನಂತರ ಸ್ಥಳಕ್ಕೆ ಬಂದ ಪೊಲೀಸರು, ನಿಧಾನವಾಗಿ ಹೋಗಿ ಗದಗ ಬಸ್ ನಿಲ್ದಾಣ ತಲುಪುವಂತೆ ಹೇಳಿದರು.

# ಚನ್ನಗಿರಿ ಪೋಲಿಸ್ ಉಪ ವಿಭಾಗದ ವತಿಯಿಂದ ಪ್ರತಿಭಟನೆ ತಡೆಗಟ್ಟುವ ಕುರಿತು ಅಣಕು ಪ್ರದರ್ಶನ

**ಚನ್ನಗಿರಿ:** ಚನ್ನಗಿರಿ ಪೋಲಿಸ್ ಉಪವಿಭಾಗದ ವತಿಯಿಂದ ಪ್ರತಿಭಟನೆಗಳನ್ನು ತಡೆಗಟ್ಟುವ ಕುರಿತು ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಮಂಗಳವಾರ ಎ.ಎಸ್.ಪಿ. ಸ್ಯಾಮ್ ವರ್ಗಿಸ್ ನೇತ್ರತ್ವದಲ್ಲಿ ಅಣಕು ಪ್ರದರ್ಶನವನ್ನು ಮಾಡಲಾಯಿತು.

ತಾಲೂಕು ಕ್ರೀಡಾಂಗಣದಲ್ಲಿ ರೈತರು ಗೊಬ್ಬರ ಬೇಡಿಕೆಗೆ ಆಗ್ರಹಿಸಿ ಹಮ್ಮಿಕೊಳ್ಳಲಾದ ಪ್ರತಿಭಟನೆ ಮತ್ತು ಅದನ್ನು ತಡೆಗಟ್ಟುವಂತಹ ವಿಧಾನವನ್ನು ಪ್ರಾತ್ಯಕ್ಷತೆ ನಡೆಸಲಾಯಿತು. ಮೊದಲು ರೈತರು ಪ್ರತಿಭಟನೆಗೆ ಮುಂದಾದಾಗ ಚನ್ನಗಿರಿ ಪೋಲಿಸ್ ಠಾಣಾ ಸಿಬ್ಬಂದಿಗಳು ಅದನ್ನು ತಡೆಯಲು ಮುಂದಾಗಿದ್ದು ಪರಿಸ್ಥಿತಿ ನಿಯಂತ್ರಣಕ್ಕೆ ಬಾರದೇ ಇದ್ದಾಗ ಸಂತೆಬೆನ್ನೂರು ಪಿ.ಐ, ಪಿ.ಎಸ್.ಐ. ಮತ್ತು ಸಿಬ್ಬಂದಿಗಳು ಬಸವಾಪಟ್ಟಣ ಪಿ.ಎಸ್.ಐ. ಮತ್ತು ಸಿಬ್ಬಂದಿಗಳು ಮತ್ತು 1 ಡಿ.ಎ.ಆರ್ ತುಕಡಿಗಳನ್ನು ಸಹ ಕರೆಸಲಾಗಿದ್ದು ಮೊದಲು ನಿಯಂತ್ರಣದ ಎಚ್ಚರಿಕೆ, ಪರಿಸ್ಥಿತಿ ನಿಯಂತ್ರನಕ್ಕೆ ಬಾರದೇ ಇದ್ದಾಗ ಮೇಲಾಧಿಕಾರಿಗಳಿಂದ ಟಿಯರ್ ಗ್ಯಾಸ್‌ನ ಬಳಕೆಗೆ ಅನುಮತಿ ಪಡೆದು ಟಿಯರ್ ಗ್ಯಾಸ್ ಬಳಕೆ ಮಾಡಲಾಯಿತು., ಅಗ್ನಿಶಾಮಕದಳದ



ವತಿಯಿಂದ ನೀರಿನ ಸ್ಪ್ರೇಯನ್ನು ಮಾಡಿ ನಂತರ ಚದುರದೇ ಇದ್ದಾಗ ಲಾಟಿ ಪ್ರಹಾರವನ್ನು ಸಹ ಮಾಡುವ ಮೂಲಕ ಗುಂಪನ್ನು ಚದುರಿಸುವ ಪ್ರಯೋಗ ಮಾಡಲಾಯಿತು. ಈ ಸಂದರ್ಭದಲ್ಲಿ ಚನ್ನಗಿರಿ ಪಟ್ಟಣದ ಯುವಕರು, ವಾಹನ ಚಾಲಕರು ಬಾಗವಹಿಸಿದ್ದರು. ಚನ್ನಗಿರಿ ಪಿ.ಐ. ರವೀಶ್, ಸಂತೆಬೆನ್ನೂರು ಪಿ.ಐ. ಲಿಂಗನಗೌಡ ನೆಗಳುರು ಇತರರು ಹಾಜರಿದ್ದರು. ಎ.ಎಸ್.ಪಿ. ಸ್ಯಾಮ್ ವರ್ಗಿಸ್ ಮಾತನಾಡಿ ಪ್ರತಿಭಟನೆಯ ಸಂದರ್ಭದಲ್ಲಿ ಪೋಲಿಸ್ ಇಲಾಖೆಯಿಂದ ತೆಗೆದುಕೊಳ್ಳುವ ಮುನ್ನಚ್ಚರಿಕೆ ಕ್ರಮಗಳ ಕುರಿತು ಈ ಪ್ರಾತ್ಯಕ್ಷತೆ ಹಮ್ಮಿಕೊಳ್ಳಲಾಗಿದ್ದು ಉಪವಿಬಾಗದ ಎಲ್ಲಾ ಸಿಬ್ಬಂದಿಗಳು ಬಾಗವಹಿಸಿದ್ದಾರೆ ಎಂದು ತಿಳಿಸಿದರು.

# ಸಾಹಿತ್ಯದ ಎಲ್ಲಾ ಪ್ರಕಾರಗಳು ನಿರಂತರ ಹರಿಯುತ್ತಿರಲಿ : ಬಿ. ವಾಮದೇವಪ್ಪ

**ಹರಿಹರ :** ಸಾಹಿತ್ಯದ ಎಲ್ಲಾ ಪ್ರಕಾರದ ರೂಪಗಳು ಕನ್ನಡದ ಸಾಹಿತ್ಯ ವೇದಿಕೆಗಳಲ್ಲಿ ನಿರಂತರವಾಗಿ ಹರಿಯುತ್ತಿರಬೇಕು, ಸಾಹಿತ್ಯಿಕ ಪರಿಣಿತರು ಸಾಹಿತ್ಯವನ್ನು ಪುರಸ್ಕರಿಸಿ ಕಾರ್ಯಕ್ರಮ ಗಳಲ್ಲಿ ಪಾಲ್ಗೊಳ್ಳಬೇಕೆಂದು ದಾವಣಗೆರೆ ಜಿಲ್ಲಾ ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ ಅಭಿಮತ ವ್ಯಕ್ತಪಡಿಸಿದರು.

ನಗರದ ಬಿರ್ಲಾಕಲ್ಯಾಣ ಮಂಟಪದಲ್ಲಿ ಪ್ರಗತಿಪರ ಬರಹಗಾರರ ಒಕ್ಕೂಟ ಚಿಂತನ, ಪ್ರತಿಷ್ಠಾನದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಒಕ್ಕೂಟದ 30ನೇ ವಾರ್ಷಿಕೋತ್ಸವ, ಜಿಲ್ಲಾಮಟ್ಟದ ಕವಿಗೋಷ್ಠಿ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದಅವರು, ಭಾರತೀಯರು ಸಮಯ ಪ್ರಜ್ಞೆ ಬೆಳೆಸಿ ಕೊಳ್ಳಬೇಕು. ಶಿಷ್ಟಚಾರ ಪಾಲಿಸಬೇಕು. ವ್ಯಕ್ತಿಗಿಂತ ಸಂಸ್ಥೆ ಹಿರಿದು ಎಂದರು.

ಸನ್ಮಾನಕ್ಕೆ ಭಾಜನರಾದ ಹಿ.ಗೂ. ದುಂಡ್ಯಪ್ಪನವರ ಸಾಧನೆಯನ್ನು ಪರಿಚಯಿಸಿ ಅವರ ಕಾರ್ಯವನ್ನು ಶ್ಲಾಘಿಸಿದರು.




ಹರಿಹರದ ಕನ್ನಡ ಸಾಹಿತ್ಯ ಕ್ಷೇತ್ರದ ದೊಡ್ಡಮ್ಮ ಶ್ರೀಮತಿ ಲಲಿತಮ್ಮ ಅವರ ಪರಿಶ್ರಮ ಮತ್ತು ಸಾಧನೆಯ ಜೊತೆಗೆ ಹರಿಹರದ ಎಲ್ಲಾ ಸಾಹಿತ್ಯಾಸಕ್ತರ ಬಗೆಗೆ ಮೆಚ್ಚುಗೆ ವ್ಯಕ್ತಪಡಿಸಿ ಶುಭಕೋರಿದರು.

ಇದೇ ವೇಳೆ ಸಮಾರಂಭದಲ್ಲಿ ಹರಿಹರದ ಹಿರಿಯ ಸಾಹಿತಿ ಹಿ.ಗೂ. ದುಂಡ್ಯಪ್ಪನವರಿಗೆ ಲಲಿತಶ್ರೀ–2025 ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಹಿ.ಗೂ.ದುಂಡ್ಯಪ್ಪನವರು ನಾನು ಮಾಡುವ ಕಾರ್ಯ ಬಹಳವಿದೆ.ಆದರೂ ನನಗೆ ಪ್ರಶಸ್ತಿ ನೀಡಿ ಗೌರವಿಸಿದ್ದಕ್ಕೆ ಧನ್ಯವಾದಗಳು ಕಾರ್ಯಕ್ರಮದಲ್ಲಿ ತಿಳಿಸಿದರು.

ದಾವಣಗೆರೆ ವನಿತಾ ಸಾಹಿತ್ಯ ವೇದಿಕೆಯ ಅಧ್ಯಕ್ಷೆ ಮಲ್ಲಮ್ಮ ನಾಗರಾಜ್ ಮಾತನಾಡಿ, ಹಿರಿಯರಾದ ದಿಂ.ನಾಗಮ್ಮ ಕೇಶವ ಮೂರ್ತಿ, ಟಿ.ಗಿರಿಜಾ ಹಾಗೂ ಲಲಿತಮ್ಮ ಡಾ.ಚಂದ್ರಶೇಖರ್ ಅವರ ಸಾಧನೆಯನ್ನು ಕುರಿತು ವಿವರಿಸಿದರು.ಹೆಣ್ಣು ಹೊಸಿಲು ದಾಟದೇ ಇರುವ ಕಾಲದಲ್ಲಿ ವನಿತಾ ಸಮಾಜ, ಮಹಿಳಾ ಸಮಾಜಗಳನ್ನು ಹುಟ್ಟುಹಾಕಿ ಮಹಿಳೆಯರನ್ನು ಸಾಮಾಜಿಕ, ಸಾಹಿತ್ಯಿಕ ಅಭಿವೃದ್ಧಿ ಕಾರ್ಯಗಳಲ್ಲಿ ಪಾಲ್ಗೊಳ್ಳುವಂತೆ ಮಾಡಿದ ಆ ದಿನಗಳನ್ನು ಸ್ಮರಿಸಿ ಅವರುಗಳು ಪಟ್ಟ ಶ್ರಮವನ್ನು ಎಳೆಎಳೆಯಾಗಿ ಬಿಡಿಸಿಟ್ಟ ಅವರು,

ಯುವ ಕವಿಗಳು, ಕವಯತ್ರಿಯರು ಆಸಕ್ತಿಯಿಂದ ಸಾಹಿತ್ಯವನ್ನು ಕೃಷಿಮಾಡಿ, ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಲು ಕರೆ ನೀಡಿದರು.

ದಾವಣಗೆರೆ ಜಿಲ್ಲಾ ಕಲೇಸಂ ಅಧ್ಯಕ್ಷೆ ವೀಣಾಕೃಷ್ಣಮೂರ್ತಿ ಮಾತನಾಡಿ, ಆಧುನಿಕ ಸಮಾಜದಲ್ಲಿ ಮಹಿಳೆಯ ಸ್ಥಾನಮಾನ ಪ್ರಗತಿಯತ್ತ ಸಾಗಿದೆ, ನಾಗಮ್ಮ ಕೇಶವಮೂರ್ತಿ, ಟಿ.ಗಿರಿಜಾ, ಶ್ರೀಮತಿ ಲಲಿತಮ್ಮನವರು ಸ್ತ್ರೀಯರಿಗೆ ಶಕ್ತಿ ತುಂಬಿದ ಮೂರು ರತ್ನಗಳೆಂದು ಪ್ರಶಂಶಿಸಿದರು.

ದಾವಣಗೆರೆ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಾಜಶೇಖರ ಗುಂಡಗಟ್ಟಿ ಮಾತನಾಡಿ, ಒಕ್ಕೂಟದ ಸದಸ್ಯರು ತುಂಬಾ ಆಸಕ್ತಿಯಿಂಥ ಕಾರ್ಯನಿರ್ವಹಿಸುತ್ತಿದೆ. ಹೊಸಬರಿಗೆ ಪ್ರೋತ್ಸಾಹ ನೀಡುತ್ತಿದೆ.ಇದಕ್ಕೆಲ್ಲ ಪ್ರೇರಣೆ ಲಲಿತಮ್ಮ ಡಾ.ಚಂದ್ರ ಶೇಖರ್ ಎಂದರು.

ಒಕ್ಕೂಟದ ಅಧ್ಯಕ್ಷ ಸುಬ್ರಹ್ಮಣ್ಯ ನಾಡಿಗೇರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಸರ್ವರಿಗೂ ಶುಭಕೋರಿದರು.

ಕಾರ್ಯಕ್ರಮದ ಪೂರ್ವದಲ್ಲಿ ತುಂಗಾಭದ್ರಾ ನದಿಗೆ ಒಕ್ಕೂಟ ಸದಸ್ಯರು ಬಾಗಿನ ಅರ್ಪಿಸಿದರು.

ಜಿಲ್ಲಾಮಟ್ಟದ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಜಿ.ಕೆ.ಕುಲಕರ್ಣಿ ಮಾತನಾಡಿ, ಕವಿಗಳಿಗೆ ಸ್ಫೂರ್ತಿ ತುಂಬಿದರು. ಕವಿಗಳು ಅಧ್ಯಯನ ಶೀಲರಾಗಬೇಕು, ಸಾಮಾಜಿಕ ಕಳಕಳಿಯಿರುವ ವಿಷಯ ತುಂಬಿದ ಕವಿತೆಗಳನ್ನು ರಚಿಸಿ ಉತ್ತಮ ಕವಿಗಳಾಗಲು ಹಾರೈಸಿದರು. ಕವಿಗಳ ಪ್ರಯತ್ನ ಚೆನ್ನಾಗಿದೆ. ಕವಿತೆಗಳು ಎದೆಯಿಂದ ಎದೆಗೆ ಸ್ಪರ್ಶಿಸುವಂತೆ ರಚನೆಯಾಗಬೇಕು ಎಂದರು.

ಕವಿಗೋಷ್ಠಿಯಲ್ಲಿ 26ಕ್ಕೂ ಹೆಚ್ಚು ಕವಿಗಳು ಕವಿತೆ ವಾಚಿಸಿದರು.

ಶ್ರೀಮತಿ ಎ.ಬಿ.ಮಂಜಮ್ಮ, ಶ್ರೀಮತಿ ಬಿ.ನಾಗರತ್ನ, ಜಯರಾಮನ್, ಶ್ರೀಮತಿ ಸೌಮ್ಯ, ಶ್ರೀಮತಿ ಚಂದನ ಉಪಸ್ಥಿತರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇತ್ತಿಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ- ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಇಂದು ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು. ಬಾಕಿಯಿರುವ ಮನೆಯ ಕೆಲಸ ಮುಗಿಸಲು ನಿಮ್ಮ ಸಂಗಾತಿಯ ಜೊತೆ ಏರ್ಪಾಡುಗಳನ್ನು ಮಾಡಿ.

### ವೃಷಭ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ. ನೀವು ಕೆಲಸದ ಜಾಗದಲ್ಲಿ ಅತಿಯಾಗಿ ಶ್ರಮಪಡುವುದರಿಂದ ಕೌಟುಂಬಿಕ ಅಗತ್ಯಗಳು ಮತ್ತು ಅವಶ್ಯಕತೆಗಳು ನಿರ್ಲಕ್ಷಿಸಲ್ಪಡುತ್ತವೆ ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ. ಉದ್ಯಮಶೀಲ ಜನರ ಸಹಭಾಗಿತ್ವದಲ್ಲಿ ಉದ್ಯಮಗಳನ್ನು ಪ್ರಾರಂಭಿಸಿ.

### ಮಿಥುನ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ನಿಮ್ಮ ಸಹೋದರ-ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಪ್ರೇಮ ವೈಫಲ್ಯದ ನೋವಿಗೆ ಇವತ್ತು ನಿದ್ರಿಸಲು ಸಾಧ್ಯವಾಗುವುದಿಲ್ಲ.

### ಕರ್ಕ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಬಹಳ ಪ್ರಯೋಜನಕಾರಿ ದಿನವಲ್ಲ- ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶಿಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ.

### ಸಿಂಹ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ನಿಮ್ಮ ತಾಯಿಯ ದುಂದುಗಾರಿಕೆಯನ್ನು ನೋಡಿ ನೀವು ಚಿಂತಿತರಾಗಬಹುದು ಮತ್ತು ಆದ್ದರಿಂದ ನೀವು ಅವರ ಕೋಪದ ಬೇಟೆಯಾಗಬಹುದು. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ. ಜನರು ನಿಮ್ಮ ಕೆಲಸದಲ್ಲಿನ ಪ್ರಯತ್ನಗಳಿಗೆ ನಿಮ್ಮನ್ನು ಗುರುತಿಸುತ್ತಾರೆ.

### ಕನ್ಯಾ ರಾಶಿ

ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು.

### ತುಲಾ ರಾಶಿ

ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಇಂದು ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿರುವಂತೆ ತೋರುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸಲು ಗಂಭೀರ ಪ್ರಯತ್ನಗಳನ್ನು ಮಾಡಿ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

### ಧನು ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸಂಗಾತಿ ಮತ್ತು ಮಕ್ಕಳು ಹೆಚ್ಚುವರಿ ಪ್ರೀತಿ ಮತ್ತು ಕಾಳಜಿ ತೋರಿಸುತ್ತಾರೆ.

### ಮಕರ ರಾಶಿ

ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ. ಯಾರೂ ನಿಮ್ಮ ಪ್ರೀತಿಯನ್ನು ಬೇರ್ಪಡಿಸಲಾಗದು. ಸ್ವಾಭಿಮಾನ ನಿರ್ಧಾರಕ್ಕೆ ಅಡ್ಡಪಡಿಸಲು ಬಿಡಬೇಡಿ ನಿಮ್ಮ ಕೈಕೆಳಗಿನವರು ಏನು ಹೇಳುತ್ತಾರೆಂದು ಕೇಳಿ.

### ಕುಂಭ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ.

ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ.

### ಮೀನ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು.

# ಅಸಂಘಟಿತ ಕಾರ್ಮಿಕರ ಹಿತಕಾಯಲು ಸರ್ಕಾರ ಬದ್ಧ

**ಶಿವಮೊಗ್ಗ :** ರಾಜ್ಯದಲ್ಲಿ ವಿವಿಧ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಕಲ್ಪಿಸುವ ಹಿನ್ನೆಲೆಯಲ್ಲಿ ಸರ್ಕಾರವು ಈಗಾಗಲೇ ಅನೇಕ ಮಹತ್ವದ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಿದ್ದು, ಇನ್ನಷ್ಟು ಯೋಜನೆಗಳನ್ನು ರೂಪಿಸಲಾಗುತ್ತಿದ್ದು, ಶೀಘ್ರದಲ್ಲಿ ಲೋಕಾರ್ಪಣೆಗೊಳಿಸಲಾಗುವುದು ಎಂದು ರಾಜ್ಯ ಕಾರ್ಮಿಕ ಸಚಿವ ಸಂತೋಷ್ .ಲಾಡ್ ವರು ಹೇಳಿದರು.

ಅವರು ಇಂದು ಭದ್ರಾವತಿ ನಗರದ ಹೊರವಲಯದಲ್ಲಿರುವ ಉಜ್ಜನಿಪುರದಲ್ಲಿ ಕರ್ನಾಟಕ ಕಾರ್ಮಿಕ ಮಂಡಳಿ ವತಿಯಿಂದ ನಿರ್ಮಿಸಲಾದ ಸಮುದಾಯ ಭವನವನ್ನು ಲೋಕಾರ್ಪಣೆಗೊಳಿಸಿ ಮಾತನಾಡುತ್ತಿದ್ದರು. ಆಡಳಿತಾರೂಢ ಘನ ಸರ್ಕಾರವು ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38ವರ್ಗಗಳು ಹಾಗೂ ಹಿಂದುಳಿದ ವರ್ಗ ಮತ್ತಿತರ ವರ್ಗಗಳ ಕುಲಕಸುಬಿನಲ್ಲಿ ತೊಡಗಿರುವ ಕಾರ್ಮಿಕರು ಸೇರಿದಂತೆ ಒಟ್ಟು 91ವರ್ಗಗಳ ಕಾರ್ಮಿಕರನ್ನು ನೋಂದಾಯಿಸಿಕೊಂಡು ಹಲವು ವಿಶೇಷ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್‌ಕಾರ್ಡ್‌ನ್ನೀಡಲಾಗುತ್ತಿದೆ ಎಂದರು.

ಈ ಯೋಜನೆಯಡಿ ಹೆಸರು ನೋಂದಾಯಿಸಿಕೊಂಡ ಕಾರ್ಮಿಕರ ಆಕಸ್ಮಿಕ ಮರಣ ಹೊಂದಿದ್ದಲ್ಲಿ ಅವರ ನಾಮನಿರ್ದೇಶಿತರಿಗೆ 1ಲಕ್ಷ ರೂ.ಗಳ ಪರಿಹಾರಧ ನೀಡಲಾಗುತ್ತಿದೆ. ಕಾರ್ಮಿಕರ ಸಹಜ ಮರಣ ಹೊಂದಿದ್ದಲ್ಲಿ ಪರಿಹಾರ ಮತ್ತು ಅಂತ್ಯಕ್ರಿಯೆಗಾಗಿ 10,000/-ರೂ.ಗಳ ಸಹಾಯಧನ ನೀಡಲಾಗುತ್ತಿದೆ ಎಂದ ಅವರು, ಇಂತಹ ಅನೇಕ ಸೌಲಭ್ಯಗಳಿಗಾಗಿ ಹೆಚ್ಚು ಸಂಖ್ಯೆಯ ಕಾರ್ಮಿಕರು ಹೆಸರು ನೋಂದಾಯಿಸಿಕೊಳ್ಳುವಂತೆ ಅವರು ಮನವಿ ಮಾಡಿದರು.

ಖಾಸಗಿ ಮತ್ತು ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಂಖ್ಯೆ ರಾಜ್ಯದಲ್ಲಿ 40ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿರುವ ಮಾಹಿತಿ ಇದ್ದು, ಅವರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸುವ ಸದುದ್ದೇಶದಿಂದ ಕ್ಷೇಮಾಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಿದೆ. ಈ ಮಂಡಳಿಯಲ್ಲಿ ಹೆಸರು ನೋಂದಾಯಿಸಿಕೊಂಡ ಫಲಾನುಭವಿಗಳಿಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಅಲ್ಲದೆ ಅವರ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಹಂತಹಂತವಾಗಿ ಆರ್ಥಿಕ ನೆರವನ್ನು ಒದಗಿಸಲಾಗುತ್ತಿದೆ. ಅಲ್ಲದೇ ಫಲಾನುಭವಿಗೆ ಹೆರಿಗೆ ಭತ್ಯೆಯೂ ಸಹ ದೊರೆಯಲಿದೆ ಎಂದರು.

ಕಾರ್ಮಿಕ ಇಲಾಖೆಯು ಖಾಸಗಿ ವಲಯದ ಉದ್ಯೋಗಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪರಿಶಿಷ್ಟರನ್ನು ನೇಮಿಸಿಕೊಳ್ಳಲು ಮಾಲೀಕರು ಅಥವಾ ಉದ್ಯೋಗದಾತರನ್ನು ಉತ್ತೇಜಿಸಲು ಮಹತ್ವಾಕಾಂಕ್ಷಿ ಆಶಾದೀಪ ಯೋಜನೆಯನ್ನು ರೂಪಿಸಿದ್ದು, ಈ ಯೋಜನೆಯಡಿ ಕಾರ್ಮಿಕರಿಗೆ ಮಾಲೀಕರು ಪಾವತಿಸುವ ವೇತನದಲ್ಲಿ ಶೇ.50ರಷ್ಟು ಮೊತ್ತವನ್ನು, ಮಾಸಿಕವಾಗಿ ರೂ.7000/- ಮಿತಿಯೊಳಗೆ ಎರಡು ವರ್ಷಗಳ ಅವಧಿಗೆ ಸರ್ಕಾರದ ವತಿಯಿಂದ ನೀಡಲಾಗುವುದು ಎಂದವರು ನುಡಿದರು.

ದೇಶದಲ್ಲಿಯೇ ಮೊದಲ ಬಾರಿಗೆ ಸರಕಾರವು ರಾಜ್ಯದಲ್ಲಿನ ಕಾರ್ಮಿಕರಿಗಾಗಿ ವಿಶಿಷ್ಟವಾದ ಗಿಗ್ವಿಮಾ ಯೋಜನೆಯನ್ನು ರೂಪಿಸಿದೆ. ಈ ಯೋಜನೆಯಡಿ ಹೆಸರು ನೋಂದಾಯಿಸಿಕೊಂಡ ಫುಡ್ಡಿಲವರಿ ಮಾಡುವ ಹಾಗೂ ಎಲ್ಲಾ ವಲಯಗಳ ಅಸಂಘಟಿತ ಕಾರ್ಮಿಕರು ಮರಣ ಹೊಂದಿದ್ದಲ್ಲಿ ರೂ.4.00ಲಕ್ಷಗಳ ವಿಮಾ ಪರಿಹಾರ ದೊರೆಯಲಿದೆ. ಅಲ್ಲದೇ ದಿನಪತ್ರಿಕೆ ವಿತರಣೆ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆಯನ್ನು ಜಾರಿಗೊಳಿಸಿದ್ದು, ಅವರ ಸುರಕ್ಷತೆ ಮತ್ತು ಕ್ಷೇಮಕ್ಕಾಗಿ ಆರ್ಥಿಕ ನೆರವು ಸೇರಿದಂತೆ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದ ಅವರು, ಡಿಲೆವರಿ ಬಾಯ್ಸ್ ಪತ್ರಿಕೆ ಹಾಕುವ ವಾಹನ ಚಾಲಕರು ಕಡ್ಡಾಯವಾಗಿ ಹೆಲ್ಮೆಟ್ಧರಿಸುವಂತೆ ಹಾಗೂ ಸಾರಿಗೆ ನಿಯಮಗಳನ್ನು ಪಾಲಿಸುವಂತೆಯೂ ಅವರು ಕರೆನೀಡಿದ ಅವರು, ಸಿನಿಮಾ ಕ್ಷೇತ್ರದ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುವ ಹಾಗೂ ಸಾರಿಗೆ ವಲಯಗಳಲ್ಲಿ ಕಾರ್ಯನಿರ್ವಹಿಸುವವರಿಗಾಗಿಯೂ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಿದೆ ಎಂದರು. ಕಟ್ಟಡ ಕಾರ್ಮಿಕರ ಮಕ್ಕಳಿಗೆ ಅಂತರಾಷ್ಟ್ರೀಯ ಗುಣಮಟ್ಟದ ಶಿಕ್ಷಣ, ತರಬೇತಿ ನೀಡುವುದಲ್ಲದೇ ವಿಶ್ವಮಾನ್ಯ ಪ್ರಮಾಣಪತ್ರ ನೀಡಲು ಉದ್ದೇಶಿಸಲಾಗಿದೆ. ಜನಪ್ರಿಯ ಹಾಗೂ ಜನಸಾಮಾನ್ಯರನ್ನು ಸಮಾಜದ ಮುಖ್ಯವಾಹಿನಿಗೆ ಪರಿಚಯಿಸುವ ಪಂಚ ಗ್ಯಾರಂಟಿ ಯೋಜನೆಗಳೊಂದಿಗೆ ಅಸಂಖ್ಯಾತ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗಿದೆ. ದೇಶದ ಆರ್ಥಿಕ ಪ್ರಗತಿಯಲ್ಲಿ ಸಿಂಹಪಾಲು ಕರ್ನಾಟಕ ಸರ್ಕಾರದ್ದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಬಿ.ಕೆ. ಸಂಗಮೇಷವರು ಮಾತನಾಡಿ, ಕಟ್ಟಡ ಕಾರ್ಮಿಕರಿಗೆ ಇ.ಎಸ್.ಐ.ಸೌಲಭ್ಯ, ಕೌಶಲ್ಯ ಕಿಟ್ಟಗಳಲ್ಲಿ ಆಧುನಿಕ ಹಾಗೂ ಗುಣಮಟ್ಟದ ಯಂತ್ರೋಪಕರಣಗಳನ್ನು ನೀಡುವುದು, ಅಪಘಾತ ವಿಮೆ, ವಿದ್ಯಾರ್ಥಿವೇತನ, ನಿವೇಶನ, ವಸತಿ ದುರಸ್ತಿಗೆ ಸಹಾಯಧನ, ಶವಸಂಸ್ಕಾರ ವೆಚ್ಚ, ಬೀದಿಬದಿ ವ್ಯಾಪಾರಿಗಳಿಗೆ ಆರ್ಥಿಕ ನೆರವು, ಉಚಿತ ಬಸ್ಪಾಸ್, ದ್ವಿಚಕ್ರ ವಾಹನ ಖರೀದಿಗೆ ಸಹಾಯಧನ ನೀಡುವಂತೆ ಸಚಿವರಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಕಾರ್ಮಿಕ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯಗಳ ಚೆಕ್ಕನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಶ್ರೀಮತಿ ಪಲ್ಲವಿ ಜಿ., ರಾಜ್ಯ ಬೋವಿ ನಿಗಮದ ಅಧ್ಯಕ್ಷ ಎಸ್. ರವಿಕುಮಾರ್, ನಗರಸಭೆ ಅಧ್ಯಕ್ಷೆ ಶ್ರೀಮತಿ ಜೆ.ಸಿ.ಗೀತಾರಾಜ್ಕುಮಾರ್, ಕಾರ್ಮಿಕ ಆಯುಕ್ತ ಡಾ|| ಗೋಪಾಲಕೃಷ್ಣ, ಸಿ.ಇ.ಓ. ಶ್ರೀಮತಿ ಭಾರತಿ ಡಿ., ಜಿ.ಪಂ. ಸಿ.ಇ.ಓ. ಹೇಮಂತ್., ಜಂಟಿ ಕಾರ್ಮಿಕ ಆಯುಕ್ತ ಡಾ|| ಎಸ್.ಬಿ.ರವಿಕುಮಾರ್, ಕಲ್ಯಾಣ ಆಯುಕ್ತ ಆಂಜನೇಯ ಟಿ., ಉಪಕಾರ್ಮಿಕ ಆಯುಕ್ತ ಹೆಚ್.ಎಲ್. ಗುರುಪ್ರಸಾದ್, ಜಿಲ್ಲಾ ಕಾರ್ಮಿಕ ಅಧಿಕಾರಿ ಎಂ.ಪಿ.ವೇಣುಗೋಪಾಲ್ಸೇರಿದಂತೆ ಕಾರ್ಮಿಕ ಸಂಘಟನೆಗಳ ಮುಖಂಡರು, ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಹಾಲುಮತ (ಕುರುಬ) ಸಮಾಜದ 7 ನೇ ರಾಜ್ಯಮಟ್ಟದ ವಧು-ವರರ ಸಮಾವೇಶ

## ಸಮಾವೇಶದಿಂದ ಪಾಲಕರಿಗೆ ಸಾಕಷ್ಟು ಅನುಕೂಲವಾಗಿದೆ



**ಗದಗ :** ಕುರುಬ ಸಮಾಜದಲ್ಲಿ ವಧು-ವರರ ಅನ್ವೇಷಣೆ ಇಂದು ಕಷ್ಟದಾಯಕವಾಗಿರುವದರಿಂದ ಇಂತಹ ಸಮಾವೇಶದಿಂದ ಪಾಲಕರಿಗೆ ಒಂದೆ ವೇದಿಕೆಯಲ್ಲಿ ಹಲವಾರು ಅವಕಾಶಗಳು ಹಾಗೂ ಹಣ ಮತ್ತು ಸಮಯದ ಉಳಿತಾಯವಾಗಲಿದೆ ಎಂದು ಕುರುಬರ ಸಂಘದ ಜಿಲ್ಲಾಧ್ಯಕ್ಷರಾದ ಫಕ್ಕಿರಪ್ಪ ಹೆಬಸೂರ ಅವರು ಹೇಳಿದರು.

ನಗರದ ಶ್ರೀ ಕನಕಭವನದಲ್ಲಿ ಹಾಲುಮತ ಮಹಾಸಭಾ ಜಿಲ್ಲಾ ಘಟಕ ಗದಗ ಹಾಗೂ ಕುರುಬರ ಸಂಘ ಜಿಲ್ಲಾ ಘಟಕ ಗದಗ ಇವರ ಸಹಯೋಗದಲ್ಲಿ ಜರುಗಿದ 7 ನೇ ರಾಜ್ಯಮಟ್ಟದ ವಧು-ವರರ ಸಮಾವೇಶದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಸಮಾವೇಶದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ನಿವೃತ್ತ ಪೊಲೀಸ್ ಅಧಿಕಾರಿ ಡಿ.ಡಿ.ಮಾಳಗಿ ಅವರು ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, ಈ ಸಮಾವೇಶ ಕೌಟುಂಬಿಕ ಕಾರ್ಯಕ್ರಮವಾಗಿದೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಗದಗ ಜಿಲ್ಲೆಯಲ್ಲಿ ಸಮಾಜ ಬಾಂಧವರು ವಧು-ವರರಿಗೆ ಉಡಿ ತುಂಬಿವ ಮೂಲಕ ಗೌರವಿಸುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದ ಅವರು ನಮ್ಮಲ್ಲಿ ಉಪ ಪಂಗಡಗಳಲ್ಲಿ ತಾರತಮ್ಯವಿದೆ. ಅದೇರೀತಿ ಬೇರೆ ಸಮುದಾಯದಲ್ಲಿ ಉಪ ಪಂಗಡಗಳನ್ನು ಮರೆತು ಒಂದಾಗುತ್ತಿರುವ ಸಮಯದಲ್ಲಿ ನಾವುಗಳ ಕೂಡಾ ತಾರತಮ್ಯ ಮರೆತು ನಾವೇಲ್ಲರೂ ಕುರುಬರು ಎಂದು ಸಮಾಜವನ್ನು ಗಟ್ಟಿಗೊಳಿಸಬೇಕು ಎಂದು ಹೇಳಿದರು.

ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಅವರು ಮಾತನಾಡಿ, ವಧುವಿಗೆ ವರ ಹಾಗೂ ವರನಿಗೆ ವಧುವಿನ ಆಯ್ಕೆ ಬದುಕಿನ ಪ್ರಮುಖ ಘಟ್ಟವಾಗಿದೆ. ಇದರಿಂದ ಪಾಲಕರಿಗೆ ಅನುಕೂಲವಾಗಲೆಂದು 7 ನೇ ಸಮಾವೇಶಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶದಲ್ಲಿ ಕುರಿಗಾರರಿಂದ ಉನ್ನತ ಅಧಿಕಾರಿಗಳು ವಧು-ವರರ ಆಯ್ಕೆಗಾಗಿ ಆಗಮಿಸಿದ್ದಾರೆ. ಈ ಕಾರ್ಯಕ್ರಮದ ಯಶಸ್ವಿಗೆ ಸಮಾಜದ ಗುರುಹಿರಿಯರ ಕೊಡುಗೆ ಸಾಕಷ್ಟಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಡಾ. ಬಿ.ಎಫ್ ದಂಡಿನ, ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸ್ಲಂ ಬೋರ್ಡನ ರಾಜ್ಯ ನಿರ್ದೇಶಕ ರಾಮಕೃಷ್ಣ ರೊಳ್ಳಿ ಅವರನ್ನು ಸನ್ಮಾನಿಸಲಾಯಿತು.

# ಅಯ್ಯನ ಕೆರೆಗೆ ಬಾಗಿನ

**ಚಿಕ್ಕಮಗಳೂರು:** ಬೆರಟಿಕೆರೆತುಂಬಿಸುವ ಕಾಮಗಾರಿಗೆಎದುರಾಗಿರುವ ಸಮಸ್ಯೆಯನ್ನುಎರಡೂಕಡೆರೈತರನ್ನು ವಿಶ್ವಾಸಕ್ಕೆತೆಗೆದುಕೊಂಡು ಬಗೆಹರಿಸಬೇಕುಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.

ಕೋಡಿ ಬಿದ್ದಅಯ್ಯನಕೆರೆಗೆ ಸೋಮವಾರ ಬಾಗಿನ ಅರ್ಪಿಸಿ ನಂತರ ಮಾತನಾಡಿದಅವರು, ಅಯ್ಯನಕೆರೆಕೋಡಿ ಬಿದ್ದ ನೀರನ್ನ ಲಿಫ್ಟ್ ಮಾಡಿ ಬೆರಟಿಕೆರೆತುಂಬಿಸುವ ಯೋಜನೆಗೆ ಹಿಂದೆ ಬಿಜೆಪಿ ಸರ್ಕಾರಇದ್ದಾಗ 9.90 ಕೋಟಿರೂ., ಮಂಜೂರು ಮಾಡಿಸಿದ್ದೆವು. ಈಗ ಕಾಮಗಾರಿ ಸಂದರ್ಭದಲ್ಲಿ ವಿವಾದವಾಗಿದೆ. ಇದಕ್ಕೆಕಾರಣಗೊತ್ತಿಲ್ಲ. ಯಾರಿಗೂತೊಂದರೆಆಗದಂತೆರೈತರಲ್ಲಿರುವಆತಂಕದೂರ ಮಾಡಲು ಸಮಸ್ಯೆ ಬಗೆಹರಿಸಿ ಕಾಮಗಾರಿ ಮಾಡಬೇಕು. ಯಾರನ್ನೂಭಯಕ್ಕೆದೂಡದೆಎಲ್ಲರನ್ನೂ ವಿಶ್ವಾಸಕ್ಕೆತೆಗೆದುಕೊಂಡುಕಾಮಗಾರಿ ಕೈಗೆತ್ತಿಕೊಳ್ಳುವ ಕೆಲಸವನ್ನಎರಡೂಕಡೆ ಶಾಸಕರು, ಸಚಿವರು, ಜಿಲ್ಲಾಡಳಿತ ಮಾಡಬೇಕುಎಂದು ವಿನಂತಿಸುತ್ತೇನೆಎಂದರು.

ನೀರುಜೀವ ಜಲ. ಅದು ಬದುಕು ಸುಡುವ ಬೆಂಕಿ ಆಗಬಾರದು. ಕೆಳಭಾಗದ ಜನರಿಗೆ ನಮ್ಮ ಪರಿಸ್ಥಿತಿ ಏನಾಗುತ್ತದೆಎನ್ನುವ ಭಯಇದೆಅದನ್ನು ನಿವಾರಿಸಬೇಕು. ಎಷ್ಟು ಪ್ರಮಾಣದ ನೀರುಯಾವಾಗತೆಗೆಯಲಾಗುತ್ತದೆಎನ್ನುವುದನ್ನು ಮನವರಿಕೆ ಮಾಡಿಕರಾರು ಪತ್ರ ಮಾಡಿಕೊಡಬೇಕುಎಂದರು.

ಕೆಳಬಾಗದಲ್ಲಿರುವವರು ರೈತರೇ, ಮೇಲ್ಭಾಗದಲಿರುವವರೂರೈತರೇ, ಎಲ್ಲರೂ ನಮ್ಮವರೇ, ಎಲ್ಲರೂ ಕಳ್ಳು ಬಳ್ಳಿ ಸಂಬಂಧಇರುವುದರಿಂದ ಸಮಸ್ಯೆ ಬಗೆಹರಿಸಲುಅಧಿಕಾರ ಬಳಸಬಾರದು. ಜನರನ್ನು ವಿಶ್ವಾಸಕ್ಕೆತೆಗೆದುಕೊಂಡು ಸಮಸ್ಯೆ ಪರಿಹರಿಸಬೇಕು. ಇದು ಬಗೆಹರಿಸಲಾಗದಸಮಸ್ಯೆಅಲ್ಲ, ಅಂತರಾಜ್ಯ ವಿವಾದಗಳನ್ನೇ ಬಗೆಹರಿಸುತ್ತೇವೆ. ಇದುಗ್ರಾಮ ಗ್ರಾಮಗಳ ನಡುವಿನ ಸಮಸ್ಯೆಎರಡೂಕಡೆಯವರಿಗೆಯಾವುದೇರೀತಿತೊಂದರೆಆಗದಂತೆಕ್ರಮ ತೆಗೆದುಕೊಳ್ಳಬೇಕು ಎಂದರು.



ನಾವು ಪ್ರವಾಸೋದ್ಯಮ ಸಚಿವರಾಗಿದ್ದಾಗ ವಿಶೇಷವಾಗಿ ಅಯ್ಯನಕೆರೆಗೆ 8.84 ಕೋಟಿರೂ. ಮಂಜೂರು ಮಾಡಿಸಿದ್ದೆವು. ಈಗಲೂ ಅದೇ ಹಣದಲ್ಲಿ ಕೆಲಸ ನಡೆಯುತ್ತಿದೆ. ಇದಲ್ಲದೆ ಲೋಕೋಪಯೋಗಿಇಲಾಖೆಯಿಂದಒಮ್ಮೆ 7 ಕೋಟಿರೂ. ಮಂಜೂರು ಮಾಡಿಸಿ ಕಾಂಕ್ರಿಟ್‌ರಸ್ತೆಅಭಿವೃದ್ಧಿ ಪಡಿಸಲಾಗಿತ್ತು. ಸಣ್ಣ ನೀರಾವರಿಇಲಾಖೆಯಲ್ಲಿಒಮ್ಮೆ 3.82 ಕೋಟಿರೂ. ಕೆರೆಏರಿ ದುರಸ್ಥಿಗೆ ಮಂಜೂರು ಮಾಡಿಸಿದ್ದೆವು. ನಾಲ್ಕು ಕಾಲುವೆಗ ಅಬಿವೃದ್ದಿಗೆ 11 ಕೋಟಿರೂ. ಸೇರಿಒಟ್ಟು ಸಣ್ಣ ನೀರಾವರಿಇಲಾಖೆಯಿಂದ 14.32 ಕೋಟಿರೂ., ಪ್ರವಾಸೋದ್ಯಮಇಲಾಖೆಯಿಂದ 8.84 ಕೋಟಿ., ಲೋಕೋಪಯೋಗಿ ಇಲಾಖೆ ವತಿಯಿಂದ 7 ಕೋಟಿ ಮಂಜೂರು ಮಾಡಿಸಿ ಅಭಿವೃದ್ಧಿ ಪಡಿಸಲಾಗಿದೆಎಂದರು.

ಬಿಜೆಪಿ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಎಚ್.ಸಿ.ಕಲ್ಮರುಡಪ್ಪ, ಬಿಳೇಕಲ್ಲಹಳ್ಳಿ ಗ್ರಾ.ಪಂ. ಅಧ್ಯಕ್ಷ ಪಾದಮನೆ ಸ್ವಾಮಿ, ಸಖರಾಯಪಟ್ಟಣ ಪಂಚಾಯ್ತಿ ಅಧ್ಯಕ್ಷೆರಾಜಮ್ಮ, ಪಿಳ್ಳೇನಹಳ್ಳಿ ಪಂಚಾಯ್ತಿ ಸದಸ್ಯರು, ಜಿ.ಪಂ. ಮಾಜಿಉಪಾಧ್ಯಕ್ಷಗುಣಸಾಗರ ವಿಜಯಕುಮಾರ್, ಲೋಕೇಶ್, ಲೋಕೇಶ್ ಮಾಸ್ಟರ್, ಪ್ರಕಾಶ್, ಯೋಗೀಶ್, ರಾಜೇಶ್, ದಿನೇಶ್ಇತರರುಇದ್ದರು

# ಶೈಕ್ಷಣಿಕ ಅಭಿವೃದ್ಧಿಗೆ ಪ್ಲೇಸ್ಮೆಂಟ್ ಸೆಲ್‌ನ ನವೀನ ಪ್ರಯತ್ನ ಮಾಸ್ಟರಿಂಗ್ ಸ್ಕಿಲ್

**ದಾವಣಗೆರೆ :** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ನಾತಕೋತ್ತರ

ವಿಭಾಗ ಹಾಗೂ ಪ್ಲೇಸ್ಮೆಂಟ್ ಸೆಲ್ ಸಂಯುಕ್ತ ಆಶ್ರಯದಲ್ಲಿ "ಮಾಸ್ಟರಿಂಗ್ ಸ್ಕಿಲ್" ಎಂಬ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳಲ್ಲಿನ ಉದ್ಯೋಗೋಪಯುಕ್ತ ಕೌಶಲ್ಯಗಳನ್ನು ಬೆಳಸುವುದೇ ಈ ಕಾರ್ಯಕ್ರಮದ ಪ್ರಧಾನ ಉದ್ದೇಶವಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕೌಶಲ್ಯ ತರಬೇತುದಾರ ಶ್ರೀ ಸಲೀಂ ಮಲಿಕ್ ಅವರು ವಿದ್ಯಾರ್ಥಿಗಳೊಂದಿಗೆ ನೇರ ಸಂವಾದ ನಡೆಸಿ, ನಾನಾ ಉದ್ಯೋಗ ಕ್ಷೇತ್ರಗಳಲ್ಲಿ ಅಪೇಕ್ಷಿಸುವ ಪ್ರಮುಖ ಕೌಶಲ್ಯಗಳ ಕುರಿತು ವಿಶ್ಲೇಷಣೆ ನೀಡಿದರು.

ಸಮರ್ಥತೆ, ಸಂವಹನ ಕೌಶಲ್ಯ, ಸಮಯ ನಿರ್ವಹಣೆ, ತಂಡದಲ್ಲಿ ಕೆಲಸ ಮಾಡುವ ಸಾಮರ್ಥ್ಯ, ಲೀಡರ್‌ಶಿಪ್, ತಾಂತ್ರಿಕ ಜ್ಞಾನ ಹಾಗೂ ಸೃಜನಶೀಲತೆ



ಮುಂತಾದ ಹಲವು ಅಂಶಗಳನ್ನು ಅವರು ವಿವರಣೆ ಮಾಡಿದರು. ಕೇವಲ ಅಂಕಗಳಲ್ಲದೆ, ಜೀವನದ ಸಮಸ್ಯೆಗಳನ್ನು ಬುದ್ಧಿವಂತಿಕೆಯಿಂದ ಎದುರಿಸುವ ಮೌಲ್ಯಾಧಾರಿತ ಕೌಶಲ್ಯಗಳ ಅಗತ್ಯವಿದೆ ಎಂಬುದರ ಮೇಲೆ ಅವರು ಒತ್ತಾಯಿಸಿದರು. ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ವೆಂಕಟೇಶ್ ಬಾಬು, ಪ್ಲೇಸ್ಮೆಂಟ್ ಸೆಲ್‌ನ ಸಂಚಾಲಕರಾಗಿದ್ದು, ಅವರು ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಗುರುತಿಸಿ ಅದನ್ನು ಅಗತ್ಯ ಕೌಶಲ್ಯಗಳ ಮೂಲಕ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರು, ಪ್ಲೇಸ್ಮೆಂಟ್ ಸಮಿತಿಯ ಸದಸ್ಯರು ಹಾಗೂ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು. ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳು ತಮ್ಮ ಆತ್ಮವಿಶ್ವಾಸವನ್ನು ಗಟ್ಟಿಮಾಡಿಕೊಳ್ಳುವ ಜೊತೆಗೆ ಉದ್ಯೋಗದ ಮಾರುಕಟ್ಟೆಯಲ್ಲಿ ತಮ್ಮನ್ನು ತಾವು ಹೇಗೆ ತಯಾರಿಸಿಕೊಳ್ಳಬೇಕು ಎಂಬುದರ ಕುರಿತು ಸ್ಪಷ್ಟ ದಿಕ್ಕು ಪಡೆದುಕೊಂಡರು.

"ಮಾಸ್ಟರಿಂಗ್ ಸ್ಕಿಲ್" ನಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಕೌಶಲ್ಯಾಧಾರಿತ ಶಿಕ್ಷಣದ ಪ್ರಜ್ಞೆ ಬೆಳೆಸಲು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಪ್ರಾಂಶುಪಾಲದ ಪ್ರೊ. ಬಿ ಸಿ ತಸಿಲ್ದಾರ್ ಅವರು ಹೇಳಿದರು

## ನಿಧನ ಸುದ್ದಿಗಳು

### ಕಂದಗಲ್ಲು ಕೆ.ಸಿ. ಮಲ್ಲಿಕಾರ್ಜುನಪ್ಪ ನಿಧನ

**ದಾವಣಗೆರೆ :** ಸಿಟಿ ಆಂಜನೇಯ ಬಡಾವಣೆ, (ಬಿಐಇಟಿ ಕಾಲೇಜು ರಸ್ತೆ) ಡೋರ್ ನಂ. 1757/2೦, 'ಬಸವ ಕೃಪ' ವಾಸಿ, ಶ್ರೀ ಕಂದಗಲ್ಲು ಕೆ.ಸಿ. ಮಲ್ಲಿಕಾರ್ಜುನಪ್ಪಅವರು ದಿನಾಂಕ 04-08-2025ರ ಸೋಮವಾರ ರಾತ್ರಿ 11.40ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 82 ವರ್ಷ ವಯಸ್ಸಾಗಿತ್ತು.ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ, ಸಹೋದರ, ಸಹೋದರಿ, ಸೊಸೆ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು - ಬಳಗವನ್ನು ಅಗಲಿದ್ದಾರೆ.2005-08-20250 stored ಮಧ್ಯಾಹ್ನ ಗಂಟೆಗೆ ತಿರಮಗೊಂಡನಹಳ್ಳಿ ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಕುರ್ಕಿ ಶ್ರೀ ಸಿದ್ದಪ್ಪನವರು ನಿಧನ

**ದಾವಣಗೆರೆ :** ತಾಲ್ಲೂಕು, ಜಿಲ್ಲೆ, ಆಲೂರು ಗ್ರಾಮದ ವಾಸಿ ಕುರ್ಕಿ ಶ್ರೀ ಸಿದ್ದಪ್ಪನವರು ಇವರು ದಿನಾಂಕ : 01.08.2025ನೇ ಶುಕ್ರವಾರ ಮಧ್ಯರಾತ್ರಿ 12.00ಕ್ಕೆ ದೈವಾಧೀನರಾಗಿದ್ದಾರೆ ಎಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 86 ವರ್ಷ ವಯಸ್ಸಾಗಿತ್ತು. ಧರ್ಮಪತ್ನಿ, ಇಬ್ಬರು ಪುತ್ರರು, ನಾಲ್ವರು ಪುತ್ರಿಯರು, ಸಹೋದರ, ಸಹೋದರಿಯರು ಹಾಗೂ ಅಪಾರ ಬಂಧುಗಳನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 6.8.2025ರ ಬುಧವಾರ ಬೆಳಿಗ್ಗೆ 11.00 ಗಂಟೆಗೆ, ಆಲೂರು ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

## ಮರಬನಹಳ್ಳಿ: ವಿದ್ಯಾರ್ಥಿಗಳ ಜೊತೆ ಊರಿನವರಿಗೂ ಓದಲು ಅವಕಾಶ

# ಗ್ರಾಮಸ್ಥರ ಜ್ಞಾನಾರ್ಜನೆಗೂ ಸಹಕಾರಿ ಈ ಗ್ರಂಥಾಲಯ...

**ಬಸವಾಪಟ್ಟಣ:** ಜಿಲ್ಲಾ ಪಂಚಾಯಿತಿ ವತಿಯಿಂದ ಮರಬನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆರಂಭಿಸಲಾಗಿರುವ ಗ್ರಂಥಾಲಯವು ಶಾಲೆಯ ವಿದ್ಯಾರ್ಥಿಗಳ ಜೊತೆ ಗ್ರಾಮಸ್ಥರ ಜ್ಞಾನದ ಹರವನ್ನೂ ವಿಸ್ತರಿಸಲು ನೆರವಾಗುತ್ತಿದೆ.

ಜಿಲ್ಲಾ ಪಂಚಾಯಿತಿಯು 1 ಲಕ್ಷ ವೆಚ್ಚದಲ್ಲಿ ಗ್ರಂಥಾಲಯಕ್ಕೆ ಕಪಾಟು, ಕುರ್ಚಿ ಹಾಗೂ ಟೇಬಲ್‌ಗಳನ್ನು ಒದಗಿಸಿದ್ದರೆ. ಗ್ರಂಥಾಲಯ ಇಲಾಖೆಯು ಸಾವಿರಕ್ಕೂ ಹೆಚ್ಚು ಪುಸ್ತಕಗಳನ್ನು ಪೂರೈಸಿದೆ.

ಸೋಮವಾರದಿಂದ ಶುಕ್ರವಾರ-ದವರೆಗೆ ಶಾಲೆಯ ವಿದ್ಯಾರ್ಥಿಗಳು ಇಲ್ಲಿರುವ ಪುಸ್ತಕಗಳ ಅಧ್ಯಯನ-ದಲ್ಲಿ ತೊಡಗಿದರೆ, ಪ್ರತಿ ಶನಿವಾರ ಮತ್ತು ಭಾನುವಾರ ಸಾರ್ವಜ ನಿಕರಿಗೆ ಗ್ರಂಥಾಲಯ ಬಳಸಲು ಅವಕಾಶವಿದೆ. ಆದರೆ ಪುಸ್ತಕಗಳನ್ನು ಮನೆಗಳಿಗೆ ಕೊಂಡೊಯ್ಯುವಂತಿಲ್ಲ. ಗ್ರಂಥಾಲಯದಲ್ಲಿ ವಿದ್ಯಾರ್ಥಿಗಳ

ಇತಿಹಾಸ, ಪೌರನೀತಿ, ಭೂಗೋಳ, ಭಾಷಾ ಸಾಹಿತ್ಯದ ಪರಿಚಯವನ್ನು ವಿದ್ಯಾರ್ಥಿಗಳು ಮಾಡಿಕೊಳ್ಳಬಹುದು. ಪ್ರತಿದಿನ ಮಧ್ಯಾಹ್ನ ಸರದಿಯಂತೆ ಒಂದು ತರಗತಿಯ ವಿದ್ಯಾರ್ಥಿಗಳನ್ನು ಗ್ರಂಥಾಲಯಕ್ಕೆ ಕರೆದೊಯ್ದು ಓದಲು ಅವಕಾಶ ಮಾಡಿ ಕೊಡಲಾಗುತ್ತಿದೆ ಎಂದು ಶಾಲೆಯ ಮುಖ್ಯ ಶಿಕ್ಷಕಿ ಪುಷ್ಪಾವತಿ ಹೇಳಿದರು.

ಕುರಿತು ವಿದ್ಯಾರ್ಥಿಗಳು ಲೇಖನ ರೂಪದಲ್ಲಿ ಅಭಿಪ್ರಾಯ ವ್ಯಕ್ತಪಡಿ-ಸುವ ಅವಕಾಶ ನೀಡಲಾಗಿದೆ' ಎಂದು ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಎನ್. ಗಂಗಾಧರ್ ತಿಳಿಸಿದರು.

ಗ್ರಾಮದಲ್ಲಿ ಸಾರ್ವಜನಿಕ ಗ್ರಂಥಾಲಯ ಸ್ಥಾಪನೆಯಾಗಲು ಕಾರಣರಾದ ಗ್ರಾಮ ಪಂಚಾಯಿತಿ ಅಧ್ಯಕ್ಷೆ



ಗ್ರಂಥಾಲಯದಲ್ಲಿ ಪುಸ್ತಕಗಳನ್ನು ಓದುವುದರಲ್ಲಿ ತಲ್ಲೀನರಾಗಿರುವ ವಿದ್ಯಾರ್ಥಿಗಳು

ಫಾತಿಮಾಬಿ, ಉಪಾಧ್ಯಕ್ಷೆ ಗೌರಮ್ಮ ಹಾಗೂ ಸದಸ್ಯರಿಗೆ ಗ್ರಾಮಸ್ಥರು ಧನ್ಯವಾದ ಸಲ್ಲಿಸಿದ್ದಾರೆ.

# ಕಾಮನಕೆರೆ ವಸತಿ ಶಾಲೆ ಮೇಲ್ವಿಚಾರಕರ ಬದಲಾವಣೆಗೆ ಆಗ್ರಹಿಸಿ ವಿದ್ಯಾರ್ಥಿಗಳ ಧರಣಿ



**ಬೀರೂರು:** ಸಮೀಪದ ಇಲ್ಲಿನ ವಸತಿ ಶಾಲೆಗೆ ಖಾಯಂ ಪ್ರಾಚಾರ್ಯ ಮತ್ತು ನಿಲಯದ ಮೇಲ್ವಿಚಾರಕರನ್ನು ನೇಮಕ ಮಾಡುವವರೆಗೂ ಊಟ ಮಾಡುವುದಿಲ್ಲ ಎಂದು ತಾಲ್ಲೂಕಿನ ಕಾಮನಕೆರೆ ಮೊರಾರ್ಜಿ ದೇಸಾಯಿ ವಸತಿ ನಿಲಯದ ವಿದ್ಯಾರ್ಥಿಗಳು ಶಾಲಾ ಆವರಣದಲ್ಲಿ ಧರಣಿ ನಡೆಸಿದ ಪ್ರಸಂಗ ಶನಿವಾರ ನಡೆಯಿತು.

ಈ ಹಿಂದೆ ಮೇಲ್ವಿಚಾರಕರಾಗಿ ಕಾರ್ಯನಿರ್ವಹಿಸುತ್ತಿದ್ದ ದೈಹಿಕ ಶಿಕ್ಷಕ ಯಲ್ಲಪ್ಪ ಎಂಬುವವರು ಸರಿಯಾಗಿ ಊಟ-ತಿಂಡಿಯನ್ನು ನೀಡುತ್ತಿರಲಿಲ್ಲ. ಆದರೆ ಇತ್ತೀಚೆಗೆ ಆಲ್ದೂರಿನಿಂದ ನಿಯೋಜನೆ ಮೇಲೆ ಬಂದಿರುವ ಮೇಲ್ವಿಚಾರಕರು ವಿದ್ಯಾರ್ಥಿಗಳಿಗೆ ಶುಚಿ, ರುಚಿಯಾದ ಊಟ ನೀಡುತ್ತಿದ್ದರು. ನಮ್ಮಗಳ ಸಮಸ್ಯೆಯನ್ನು ಆಲಿಸುತ್ತಿದ್ದರು. ಆದರೆ ಯಾವುದೋ ಕಾರಣ ನೀಡಿ ಅವರನ್ನು ಅಮಾನತು ಮಾಡಲಾಗಿದೆ. ಅಮಾನತು ಮಾಡುವುದು ಇಲಾಖೆಗೆ ಸಂಬಂಧಿಸಿದ ವಿಚಾರ. ಈಬಗ್ಗೆ ನಮ್ಮ ತಕರಾರಿಲ್ಲ. ಆದರೆ ವಿಷಯ ಶಿಕ್ಷಕರಿಗೆ ನಿಲಯ ಮೇಲ್ವಿಚಾರಣೆ ಉಸ್ತುವಾರಿ ನೀಡಬಾರದು ಮತ್ತು ಪ್ರಾಚಾರ್ಯರನ್ನು ಕೂಡಲೇ ಬದಲಿಸಬೇಕು ಎಂಬುದು ನಮ್ಮ ಆಗ್ರಹವಾಗಿದೆ ಎಂದು ವಿದ್ಯಾರ್ಥಿಗಳು ಅಳಲುತೋಡಿಕೊಂಡರು.

ಶಾಲೆಯಲ್ಲಿನ ಕೆಲವು ಶಿಕ್ಷಕರ ಸಣ್ಣ ಸಣ್ಣ ತಪ್ಪುಗಳಿಗೆ ನೋಟಿಸ್ ನೀಡಲಾಗುತ್ತದೆ. ಆದರೆ ಪ್ರಾಚಾರ್ಯರು ರಾತ್ರಿ ಸಮಯ ತಮ್ಮ ಮನೆಗೆ ವಿದ್ಯಾರ್ಥಿಗಳ ಕೈಯಿಂದಲೇ ಊಟವನ್ನು ತರಿಸಿಕೊಳ್ಳುತ್ತಾರೆ. ಇದು ತಪ್ಪಲ್ಲವೆ ಎಂದು ಪ್ರಶ್ನಿಸಿದ ವಿದ್ಯಾರ್ಥಿಗಳು, ಮಕ್ಕಳ ಕೈಲಿ ಊಟ ತರಿಸಿಕೊಳ್ಳುವ ಪ್ರಾಚಾರ್ಯರಿಗೇಕೆ ನೋಟಿಸ್ ನೀಡುವುದಿಲ್ಲ ಎಂದು ಪ್ರಶ್ನಿಸಿದರು. ಊಟದಲ್ಲಿ ಹುಳುಗಳಿರುತ್ತವೆ. ಊಟರುಚಿಯಾಗಿರುವುದಿಲ್ಲ. ಮಕ್ಕಳು ಕಡಿಮೆ ಊಟ ಮಾಡಲಿ ಎನ್ನುವ ಕಾರಣಕ್ಕೆ ರುಚಿಯಾಗಿ ಅಡಿಗೆಮಾಡುವುದಿಲ್ಲ. ಕೆಲವು ದಿನಗಳ ಹಿಂದೆಯಷ್ಟೇ ಕ್ಷೇತ್ರದ ಶಾಸಕ ಕೆ.ಎಸ್. ಆನಂದ್ ಅವರು ಭೇಟಿ ನೀಡಿ ನ್ಯೂನ್ಯತೆಗಳನ್ನು ಸರಿಪಡಿಸಿಕೊಳ್ಳುವಂತೆ ನಿಲಯದ ಸಿಬ್ಬಂದಿಗಳಿಗೆ ಸೂಚಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಯಾರಾದರು ಶಾಲೆಗೆ ಭೇಟಿ ನೀಡುತ್ತಾರೆ ಎಂದಾಗ ಮಾತ್ರ ಶುಚಿ, ರುಚಿಯಾಗಿ ಅಡಿಗೆ ಮಾಡಲಾಗುತ್ತದೆ. ನಂತರ ಮತ್ತದೇ ಕೆಟ್ಟರೀತಿಯಲ್ಲಿ ಅಡುಗೆ ಮಾಡಲಾಗುತ್ತದೆ ಎಂದು ನಿಲಯದ ವ್ಯವಸ್ಥೆಯ ಬಗ್ಗೆ ಆರೋಪಿಸಿದರು.

ಈ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ಉಪ ನಿರ್ದೇಶಕರು ವಸತಿ ಶಾಲೆಗೆ ಬಂದು ಭರವಸೆ ನೀಡಬೇಕು ಎಂದು ಪಟ್ಟು ಹಿಡಿದ ವಿದ್ಯಾರ್ಥಿಗಳು ಬೆಳಿಗ್ಗೆಯಿಂದಲೇ ವಿದ್ಯಾರ್ಥಿಗಳು ಊಟ ಮಾಡದೆ ಪ್ರತಿಭಟನೆ ಶಾಲೆಯ ಮುಂದೆ ಧರಣಿಯಲ್ಲಿ ನಿರತರಾದರು.

ವಸತಿ ಶಿಕ್ಷಣ ಸಂಸ್ಥೆಗಳ ಜಿಲ್ಲಾ ಸಂಯೋಜಕಿ ಶೈಲಾ ಮಾತನಾಡಿ, ಇಲ್ಲಿನ ನ್ಯೂನ್ಯತೆಗಳನ್ನು ಸರಿಪಡಿಸಲಾಗುವುದು ಮತ್ತು ಶಾಲೆಗೆ ವಿದ್ಯಾರ್ಥಿಗಳ ಬೇಡಿಕೆಯಂತೆ ಖಾಯಂಮೇಲ್ವಿಚಾರಕರು ಮತ್ತು ಪ್ರಾಚಾರ್ಯರನ್ನು ನೇಮಕಮಾಡುವಂತೆ ಹಿರಿಯ ಅಧಿಕಾರಿಗಳಿಗೆ ಮಕ್ಕಳ ಪರವಾಗಿ ಮನವಿಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ನಟರಾಜ್, ಸಂತೋಷ್ ಮತ್ತಿತರಿದ್ದರು.

# ಸೈಕಲ್‌ನಲ್ಲಿ ಧರ್ಮಸ್ಥಳ ತೆರಳಲು ನಗರಕ್ಕಾಗಮಿಸಿದ ಯುವಕರ ತಂಡ



**ಚಿಕ್ಕಮಗಳೂರು:** ಶ್ರಾವಣ ಮಾಸದ ಹಿನ್ನೆಲೆಯಲ್ಲಿ ಧರ್ಮಸ್ಥಳದ ಶ್ರೀ ಮಂಜುನಾಥ ಸ್ವಾಮಿ ಸನ್ನಿಧಾನಕ್ಕೆ ತೆರಳಲು ವಿಜಯನಗರ ಜಿಲ್ಲೆಯ 60ಕ್ಕೂ ಹೆಚ್ಚು ಮಂದಿ ಸೈಕಲ್‌ನೊಂದಿಗೆ ಆಗಮಿಸಿದ ಯುವಕರ ತಂಡವು ನಗರಕ್ಕಾಗಮಿಸಿ ಕೆಲಹೊತ್ತು ದಣಿವು ಆರಿಸಿಕೊಂಡು ಪುಣ್ಯಕ್ಷೇತ್ರದತ್ತ ಸಾಗಿದರು.

ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನಿಂದ ಸೈಕಲ್‌ನೊಂದಿಗೆ ಹೊರಟ ತಂಡವು ಮೊದಲ ದಿನ ಹರಿಹರ, ಮರುದಿನ ಸಖರಾಯಪಟ್ಟಣ ಗ್ರಾಮದಲ್ಲಿ ತಂಗಿದರು. ಆ ಗ್ರಾಮದ ನಿವಾಸಿಗಳು ಭಕ್ತಾಧಿಗಳಿಗೆ ಉಳಿದುಕೊಳ್ಳಲು ಜಾಗ ಹಾಗೂ ಊಟೋಪಚಾರದ ವ್ಯವಸ್ಥೆ ಕಲ್ಪಿಸಿಕೊಟ್ಟಿದ್ದು, ಒಟ್ಟಾರೆ 700ಕ್ಕೂ ಹೆಚ್ಚು ಕಿ.ಮೀ. ಸೈಕಲ್‌ನಲ್ಲಿಯೇ ಸಂಚರಿಸಲಾಗುವುದು ಎಂದು ಹೇಳಿದರು.

ಶ್ರೀ ಮಂಜುನಾಥಸ್ವಾಮಿ ಸನ್ನಿಧಾನಕ್ಕೆ ತೆರಳಿರುವ ಯುವಕರ ತಂಡವು ಇಂದು ಬೆಳಿಗ್ಗೆ ನಗರಕ್ಕಾಗಮಿಸಿದ್ದು, ಸಂಜೆ ಹೊತ್ತಿಗೆ ಧರ್ಮಸ್ಥಳಕ್ಕೆ ತೆರಳುವುದಾಗಿ ತಿಳಿಸಿದ ಅವರು, ದರ್ಶನ ಭಾಗ್ಯ ಪೂರೈಸಿಕೊಂಡು ತಿರುಗಿ ವಾಪಸ್ ಸೈಕಲ್ ಮೂಲಕವೇ ಸ್ವಗ್ರಾಮಕ್ಕೆ ತೆರಳಲಿದ್ದು, ಒಟ್ಟು ಆರೇಳು ದಿನಗಳು ಸಂಚರಿಸುತ್ತೇವೆ ಎಂದು ಮಾಹಿತಿ ನೀಡಿದರು.

ಪ್ರತಿ ವರ್ಷವೂ ಶ್ರಾವಣ ಮಾಸದಲ್ಲಿ ಹಿರಿಯರ ಮಾರ್ಗದರ್ಶನದಲ್ಲಿ ಸೈಕಲ್‌ನಲ್ಲಿ ಧರ್ಮಸ್ಥಳಕ್ಕೆ ತೆರಳಲಾಗುತ್ತದೆ. ಈ ತಂಡದಲ್ಲಿ ಸುಮಾರು 20 ವರ್ಷಗಳಿಂದ ತೆರಳುವ ಭಕ್ತಾಧಿಗಳಿದ್ದು, ಅವರೊಟ್ಟಿಗೆ ಪ್ರತಿ ವರ್ಷವು ಯುವಕರ ಗುಂಪು ಶ್ರೀ ಮಂಜುನಾಥನ ದರ್ಶನಕ್ಕೆ ತೆರಳುತ್ತಿದ್ದೇವೆ ಎಂದು ತಿಳಿಸಿದರು.

ಧರ್ಮಸ್ಥಳಕ್ಕೆ ಸಂಪೂರ್ಣವಾಗಿ ಸೈಕಲ್‌ನಲ್ಲೇ ತೆರಳುವ ಕಾರಣ ಸೈಕಲ್‌ಗೆ ಸಣ್ಣಪುಟ್ಟ ದುರಸ್ಥಿಗಳು ಎದುರಾಗುವ ಕಾರಣ ಟೂಲ್ ಕಿಟ್ ಹಾಗೂ ಪಂಪ್‌ಗಳನ್ನು ಇರಿಸಲಾಗಿದೆ. ಶ್ರೀ ಮಂಜುನಾಥನ ದರ್ಶನದ ನಂತರ ಹೊರಟು ಬೀರೂರು ಮತ್ತು ಹರಪನಹಳ್ಳಿ ಗ್ರಾಮದಲ್ಲಿ ವ್ಯಾಸ್ತವ್ಯ ಹೂಡಿ ಮರುದಿನ ಸ್ವಗ್ರಾಮದತ್ತ ತೆರಳಲಾಗುವುದು ಎಂದು ಹೇಳಿದರು.

ಶ್ರೀ ಮಂಜುನಾಥ ಸ್ವಾಮಿಯ ಶಕ್ತಿ, ಆಶೀರ್ವಾದ ಯುವಕರ ಮೇಲಿರುವತನಕ ಪ್ರತಿ ವರ್ಷವೂ ಸೈಕಲ್‌ನಲ್ಲಿಯೇ ತೆರಳುತ್ತೇವೆ ಎಂದರು.

# ಸಪ್ತಮಾತೃಕೆ ಅಮ್ಮನವರ ವಾರ್ಷಿಕ ಮಹೋತ್ಸವ ಸಂಪನ್ನ



**ಚಿಕ್ಕಮಗಳೂರು:** ನಗರದ ಬಾರ್‌ಲೈನ್ ರಸ್ತೆಯಲ್ಲಿ ಶ್ರೀ ವಿನಾಯಕ ಮತ್ತು ಸಪ್ತಮಾತೃಕೆ ಅಮ್ಮನವರ ದೇವಾಲಯದ ಏಳನೇ ವಾರ್ಷಿಕ ಮಹೋತ್ಸವು ಹೋಮಹವನಾದಿ, ಧಾರ್ಮಿಕ ಪೂಜಾವಿಧಿ ವಿಧಾನಗಳಿಂದ ಅತ್ಯಂತ ಶ್ರದ್ಧಾಭಕ್ತಿಯಿಂದ ಸಂಪನ್ನಗೊಂಡಿತು.

ಗುರ್ಭಗುಡಿಯಲ್ಲಿ ಶ್ರೀ ಪ್ರಾಮ್ಯಿ, ಶ್ರೀ ಮಾಹೇಶ್ವರಿ, ಶ್ರೀ ಕೌಮಾರಿ, ಶ್ರೀ ವೈಷ್ಣವಿ, ಶ್ರೀ ವಾರಾಹಿ, ಶ್ರೀ ಇಂದ್ರಾಣಿ ಮತ್ತು ಶ್ರೀ ಚಾಮುಂಡ ಸಪ್ತಮಾತೃ ದೇವತೆಗಳಿಗೆ ವಿವಿಧ ಅಭಿಷೇಕ ನಡೆಸಲಾಯಿತು. ಬಳಿಕ ವಿಶೇಷ ಅಲಂಕಾರದೊಂದಿಗೆ ಭಕ್ತಾಧಿಗಳು ದರ್ಶನಭಾಗ್ಯ ಪಡೆದುಕೊಂಡರು.

ಮಹಿಳೆಯರು, ಮಕ್ಕಳು ದೇವಾಲಯದ ಆವರಣದಲ್ಲಿ ಭಜನೆ, ಭಕ್ತಿಗೀತೆಗಳು ಹಾಡಿದರು. ಮಹಾಮಂಗಳಾರತಿ ಬಳಿಕ ದೇವಾಲಯದ ಮುಖ್ಯಸ್ಥ ಶಿವಣ್ಣ ಅವರ ನೇತೃತ್ವದಲ್ಲಿ ಸಾರ್ವಜನಿಕ ಅನ್ನಸಂತರ್ಪಣೆ ನೆರವೇರಿತು. ಪೂಜಾ ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಬಿ.ಶೀಲಾ ದಿನೇಶ್, ದೇವಾಲಯ ಭಕ್ತಾಧಿಗಳು ಭಾಗವಹಿಸಿದ್ದರು.

# ಸಖರಾಯಪಟ್ಟಣ ಐಟಿಐನಿಂದ ಅರ್ಜಿ ಆಹ್ವಾನ

**ಚಿಕ್ಕಮಗಳೂರು, ಆ.5:** ಸಖರಾಯಪಟ್ಟಣದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಐಟಿಐ)ಯಲ್ಲಿ ಸರ್ಕಾರದ ಆದೇಶದಂತೆ ಮೆರಿಟ್-ಕಂ-ರಿಸರ್ವೇಶನ್ ಆಧಾರದ ಮೇಲೆ ಆಗಸ್ಟ್-2025ನೇ ಸಾಲಿಗೆ ಬಾಕಿ ಉಳಿದಿರುವ ಸ್ಥಾನಗಳಿಗೆ ಪ್ರವೇಶ ಪಡೆಯಲು ಆಫ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಸಂಸ್ಥೆಯಲ್ಲಿ ಬಾಕಿ ಉಳಿದಿರುವ ಸ್ಥಾನಗಳಿಗೆ ಪ್ರವೇಶಾತಿಯನ್ನು ಆಗಸ್ಟ್ 31ರವರೆಗೆ ವಿಸ್ತರಿಸಲಾಗಿದ್ದು, ಪ್ರತಿದಿನ ಸ್ವೀಕರಿಸುವ ಅರ್ಜಿಗಳನ್ನು ಮೆರಿಟ್ ಆಧಾರದಲ್ಲಿ ಪ್ರವೇಶ ಮಾಡಿಕೊಳ್ಳಲಾಗುವುದು. ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳು ಸಖರಾಯಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಕಚೇರಿ ಸಮಯ ಬೆಳಗ್ಗೆ 10 ರಿಂದ ಸಂಜೆ 5.30ರವರೆಗೆ ಸಂಪರ್ಕಿಸಬಹುದು ಎಂದು ಸಖರಾಯಪಟ್ಟಣ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಕೋರಿದ್ದಾರೆ.

ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ ಎರಡು ವರ್ಷ-14 ಸ್ಥಾನಗಳು, ಮೆಕ್ಯಾನಿಕ್ ಡೀಸೆಲ್ ಒಂದು ವರ್ಷ-13 ಸ್ಥಾನಗಳು, ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್ ಎರಡು ವರ್ಷ-17 ಸ್ಥಾನಗಳು, ವರ್ಟಿಕಲ್ ಅನಾಲಿಸಿಸ್ ಅಂಡ್ ಡಿಸೈನ್-ಎಫ್‌ಇಎಂ-ಎರಡು ವರ್ಷ-24 ಸ್ಥಾನಗಳು, ಸಿಎನ್‌ಸಿ ಮೆಷಿನಿಂಗ್ ಟೆಕ್ನಿಷಿಯನ್ 2 ವರ್ಷ-24 ಸ್ಥಾನಗಳು, ಇಂಡಸ್ಟ್ರಿಯಲ್ ರೊಬೊಟಿಕ್ಸ್ ಅಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಿಷಿಯನ್ ಒಂದು ವರ್ಷ-20 ಸ್ಥಾನಗಳು, ಮ್ಯಾನುಫ್ಯಾಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಅಂಡ್ ಆಟೋಮೇಶನ್ ಒಂದು ವರ್ಷ-20 ಸ್ಥಾನಗಳು ಹಾಗೂ ಇಂಜಿನಿಯರಿಂಗ್ ಡಿಸೈನ್ ಟೆಕ್ನಿಷಿಯನ್ ಒಂದು ವರ್ಷ-10 ಸ್ಥಾನಗಳು. ಹೆಚ್ಚಿನ ಮಾಹಿತಿಗೆ ಕಚೇರಿಯ ದೂರವಾಣಿ ಸಂಖ್ಯೆ (08267-200199, 8722279279 , 9482003004, 9844277199 , 968649646) ಗಳನ್ನು ಸಂಪರ್ಕಿಸಬಹುದು.

# ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗೆ ನಿಶ್ಚಿತ

**ಬೀದರ್ :** ರಾಜ್ಯರಾಜಕೀಯದಲ್ಲಿ ಸೆಪ್ಟೆಂಬರ್‌ನಲ್ಲಿ ಕ್ರಾಂತಿಯಾಗುತ್ತದೋ ಇಲ್ಲವೋ ಗೊತ್ತಿಲ್ಲ. ಆದರೆ ಕಾಂಗ್ರೆಸ್‌ನಲ್ಲಂತೂ ರಾಜಕೀಯ ಬೆಳವಣಿಗೆಯಾಗುವುದು ನಿಶ್ಚಿತ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್‌ಕುಮಾರಸ್ವಾಮಿ ಹೇಳಿದರು.



ಬೀದರ್‌ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರುಗಳೇ ಸೆಪ್ಟೆಂಬರ್‌ನಲ್ಲಿ ಕ್ರಾಂತಿಯಾಗುತ್ತದೆ ಎಂದು ಹೇಳುತ್ತಿದ್ದಾರೆ. ಆ ಕ್ರಾಂತಿಯಾಗುತ್ತದೋ ಇಲ್ಲವೋ ಆದರೆ ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗೆಗಳು ಆಗುತ್ತದೆ ಕಾದು ನೋಡೋಣ ಎಂದರು.

ಕಾಂಗ್ರೆಸ್‌ನಲ್ಲಿ ಹಲವು ಬಣಗಳಿವೆ. ಹಲವು ಬಣಗಳು ಸದ್ದಿಲ್ಲದೆ ಕೆಲಸ ಮಾಡುತ್ತಿವೆ. ಹಾಗಾಗಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ನಾನೇ ಸಿಎಂ ಎಂದೆಲ್ಲ ಮಾತನಾಡುತ್ತಿದ್ದಾರೆ. ಇವೆಲ್ಲ ರಾಜಕೀಯ ಬೆಳವಣಿಗೆಗಳ ಮುನ್ಸೂಚನೆ ಎಂದು ಅವರು ಹೇಳಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರ ಜನರ ವಿಶ್ವಾಸ ಕಳೆದುಕೊಂಡು ಬಹಳ ದಿನವಾಗಿದೆ. ಅನುದಾನ ಸಿಗುತ್ತಿಲ್ಲ ಎಂದು ಕಾಂಗ್ರೆಸ್ ಶಾಸಕರುಗಳೇ ಅಸಹಾಯಕತೆಯಿಂದ ಮಾತನಾಡುತ್ತಿದ್ದಾರೆ. ಈ ಸರ್ಕಾರ ಕಾಲಹರಣ ಸರ್ಕಾರ ಎಂದು ಟೀಕಿಸಿದರು.

# ದುಶ್ಚಟಗಳಿಂದ ದೂರವಿದ್ದಾಗ ಉತ್ತಮ ಆರೋಗ್ಯ ಪಡೆಯಲು ಸಾಧ್ಯ

**ಚಿತ್ರದುರ್ಗ:** ದುಶ್ಚಟಗಳಿಂದ ದೂರವಿದ್ದಾಗ ನಾವು ಉತ್ತಮ ಆರೋಗ್ಯ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಸಮಾಜ ವಿಜ್ಞಾನ ವಿಷಯ ಪರಿವೀಕ್ಷಕ ಕೆ.ಜಿ.ಪ್ರಶಾಂತ್ ಹೇಳಿದರು. ಅವರು ತಾಲೂಕಿನ ಐನಹಳ್ಳಿ ಕುರುಬರಹಟ್ಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಡಯಟ್ ವತಿಯಿಂದ ಎನ್.ಪಿ.ಇ.ಪಿ(ರಾಷ್ಟ್ರೀಯ ಜನಸಂಖ್ಯಾ ಶಿಕ್ಷಣ ಯೋಜನೆ)ಅಡಿಯಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಮಾದಕ ವಸ್ತುಗಳ ಬಳಕೆ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ದುಶ್ಚಟಗಳಿಂದ ದೂರವಿದ್ದಾಗ ಸಮಾಜದಲ್ಲಿ ಗೌರವ ದೊರೆಯುತ್ತದೆ. ನಾವು ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳುವುದರ ಮೂಲಕ ಉತ್ತಮ ಜೀವನ ನಡೆಸಬೇಕು ಎಂದು ತಿಳಿಸಿದರು. ಎನ್.ಪಿ.ಇ.ಪಿ ಜಿಲ್ಲಾ ನೋಡಲ್ ಅಧಿಕಾರಿ ಎಸ್.ಬಸವರಾಜು ಮಾತನಾಡಿ, ಸ್ವಾಸ್ಥ್ಯ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಅಗತ್ಯ. ಒಮ್ಮೆ ಮಾದಕ ವಸ್ತುಗಳಿಗೆ ದಾಸರಾದರೆ ಅದರಿಂದ ಹೊರಬರುವುದು ಕಷ್ಟವಾಗುತ್ತದೆ. ಇದರಿಂದ ನಮ್ಮ ವೈಯಕ್ತಿಕ ಆರೋಗ್ಯಕ್ಕೆ ಹಾನಿಯಾಗುವುದರ ಜತೆಗೆ ಕುಟುಂಬದ ನೆಮ್ಮದಿ ಹಾಳಾಗುತ್ತದೆ.

# ಇಮ್ಮಡಿ ಗುರುಸಿದ್ಧರು ಶ್ರೀಗಳವರ ಬಸವಾದಿ ಶಿವಶರಣರ ಚರಿತ್ರೆ ಓದಿದರೆ ಮುರುಘಾ ಪರಂಪರೆಯ ಭವ್ಯತೆ ಅರ್ಥವಾಗುತ್ತದೆ

## ಶ್ರಾವಣ ಚಿಂತನ ಕಾರ್ಯಕ್ರಮದಲ್ಲಿ ಬಸವ ಮುರುಘೇಂದ್ರ ಸ್ವಾಮೀಜಿ



**ಚಿತ್ರದುರ್ಗ:** ಮುರುಗಿಯ ಶಾಂತವೀರರ ಕರಕಮಲ ಸಂಜಾತರಾದ ಇಮ್ಮಡಿ ಗುರುಸಿದ್ಧ ಮಹಾಸ್ವಾಮಿಗಳವರು ಮುರುಘಾಪೀಠಕ್ಕೆ ಬರುತ್ತಾರೆ. ಇವರದು ಸಂಘರ್ಷಮಯ ಬದುಕು. ಸಮಾಜ ಸುಧಾರಣೆಯ ಜತೆ ಜತೆಗೆ ಸಾಹಿತ್ಯ, ಸಂಸ್ಕೃತಿ, ಸಂಸ್ಕೃತ ವ್ಯಾಕರಣ ಇತರ ಭಾಷೆಗಳಲ್ಲಿ ಬಹುಪರಿಣಿತರು. ಇವರ ಸಾಹಿತ್ಯದಲ್ಲಿ ಕಾಯಾರ್ಪಣ, ಕರುಣಾರ್ಪಣ, ಭಾವಾರ್ಪಣ, ಮಿಶ್ರಾರ್ಪಣ ಜತೆಗೆ ಚನ್ನಬಸವಣ್ಣನವರ ಕರಣಹಸಿಗೆಯನ್ನು ಕನ್ನಡದಲ್ಲಿ ಎಲ್ಲರಿಗೂ ತಿಳಿಯುವಂತೆ ರಚಿಸಿದ್ದಾರೆ ಎಂದು ಶ್ರೀ ಮುರುಘಾಮಠದ ಸಾಧಕ ಸ್ವಾಮಿಗಳಾದ ಶ್ರೀ ಬಸವ ಮುರುಘೇಂದ್ರ ಸ್ವಾಮೀಜಿ ಅವಲೋಕನ ಮಾಡಿದರು.

ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾವಿಶ್ರಾಂತಿ ಸನ್ನಿಧಾನದ ಗದ್ದುಗೆಯಲ್ಲಿ ಶ್ರಾವಣಮಾಸದ ಪ್ರಯುಕ್ತ ಏರ್ಪಡಿಸಿರುವ ವಚನಾಭಿಷೇಕ ಹಾಗೂ ಮುರುಘಾ ಪರಂಪರೆಯ ಗುರುಗಳ ಜೀವನ ದರ್ಶನ ಕಾರ್ಯಕ್ರಮದ ಎರಡನೆಯ ದಿನದ ಪೀಠದ ಎರಡನೇ ಗುರುಗಳಾದ ಇಮ್ಮಡಿ ಗುರುಸಿದ್ಧ ಸ್ವಾಮಿಗಳವರು ನಡೆದು ಬಂದ ದಾರಿಯ ಬಗ್ಗೆ ಮಾತನಾಡಿದ ಶ್ರೀಗಳು, ಗುರುಸಿದ್ಧರು ತಮ್ಮ ಆಲಾಸ್ಯ ಪುರಾಣದಲ್ಲಿ ಶಿವ ಷಣ್ಮುಖರ ಲೀಲೆಯ ಜತೆಗೆ ಬಸವಾದಿ ಶಿವಶರಣರ ಚರಿತ್ರೆಗಳನ್ನು ಸರಳವಾಗಿ ಕನ್ನಡದಲ್ಲಿ ಬರೆದಿದ್ದಾರೆ. ಅವುಗಳನ್ನು ಓದಿದರೆ ಮುರುಘಾ ಪರಂಪರೆಯ ಭವ್ಯತೆ ಅರ್ಥವಾಗುತ್ತದೆ ಎಂದು ನುಡಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಮಹಾಸ್ವಾಮಿಗಳು ಮಾತನಾಡಿ, ಈ ಶ್ರಾವಣಮಾಸ ಕೇವಲ ಪೂಜೆ ಪುನಸ್ಕಾರಗಳಿಗೆ ಮೀಸಲಿಲ್ಲ. ಅದರೊಂದಿಗೆ ಶ್ರವಣಕ್ಕೆ ಹೆಚ್ಚಿನ ಮಹತ್ವ ನೀಡಲಾಗಿದೆ. ನಮ್ಮ ಪೂರ್ವಿಕರ ದಿವ್ಯ ಭವ್ಯ ಪರಂಪರೆಯನ್ನು ಆಸಕ್ತಿ ವಹಿಸಿ ಶ್ರದ್ಧೆಯಿಂದ ಜತನದಿಂದ ಕಾಯ್ದುಕೊಳ್ಳಬೇಕಿದೆ. ಪೀಠ ಪರಂಪರೆಯ 2ನೇ ಗುರುಗಳ ಜೀವನಪಥದರ್ಶನವನ್ನು ವಿಷಯಾವಲೋಕನ ಮಾಡಿದ ಪ್ರಾಚಾರ್ಯ ಭರತ್ ಅವರು ಚೆನ್ನಾಗಿಯೇ ಮಾಡಿದರು. ಪೀಠದ ಶಾಂತವೀರರ ಕರ್ತೃವಿನ ಶಿಷ್ಯರು ಗುರುಸಿದ್ಧ ಸ್ವಾಮಿಗಳು ಹತ್ತು ವರ್ಷಗಳ ಕಾಲ ಪೀಠದಲ್ಲಿದ್ದು ಅವರು 3 ಆಯಾಮಗಳಲ್ಲಿ ಸಂಘರ್ಷ, ದುರ್ಗಮ ಹಾಗೂ ಸಮಾರೋಪದ ಹಾದಿಗಳನ್ನು ಕ್ರಮಿಸಿದ ಹಾದಿ ಅದು ಸಾಮಾನ್ಯವಾದುದಲ್ಲ. ಹಾಗೆಯೇ ಕುಮಾರ ಸಮಯ, ಚೀಲಾಳ ಸಮಯಗಳ ಬಗ್ಗೆ ಉಲ್ಲೇಖ ಮಾಡಿದರು. ಚರಿತ್ರೆ ಎಲ್ಲರಿಗೂ ಇರುತ್ತದೆ. ಅದನ್ನು ಯಾರು ಬೇಕಾದರೂ ಬರೆಸಿಕೊಳ್ಳಬಹುದು. ಆದರೆ ಚಾರಿತ್ರ್ಯ ಮತ್ತು ಚರಿತ್ರೆ ಎರಡೂ ಮುರುಘಾಮಠಕ್ಕೆ ಹೇರಳವಾಗಿದೆ. ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಕ್ಷೇತ್ರಗಳಲ್ಲಿ ಯಾರು ತಮ್ಮನ್ನು ಸಂಪೂರ್ಣವಾಗಿ ಸಮರ್ಪಣೆ ಮಾಡಿಕೊಂಡಿರುತ್ತಾರೋ ಅವರು ಚರಿತ್ರೆಯಲ್ಲಿ ಉಳಿಯುತ್ತಾರೆ ಎನ್ನುವುದು ಸರ್ವವಿಧಿತ. ನಮ್ಮ ನೌಕರರು ತಮ್ಮ ವೃತ್ತಿಯ ಜತೆಗೆ ಇಂತಹ ಪೀಠ ಪರಂಪರೆಯ ಮಹತ್ವವನ್ನು ತಿಳಿದುಕೊಳ್ಳುವ ಮನಸ್ಸು ಮಾಡಬೇಕು. ಇದರಿಂದ ವ್ಯಕ್ತಿತ್ವ ಗಟ್ಟಿಗೊಳ್ಳುತ್ತದೆಂದು ನುಡಿದರು.

# ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆ : ಗುತ್ತಿಗೆ ಆಧಾರ ನೇಮಕಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಆತ್ಮ ಯೋಜನೆಯಡಿ 2025-26 ನೇ ಸಾಲಿಗೆ ನೇರ ಗುತ್ತಿಗೆ ಆಧಾರದಲ್ಲಿ ಒಂದು ವರ್ಷದ ಅವಧಿಗೆ ಭದ್ರಾವತಿ ತಾಲ್ಲೂಕಿನ ಕೂಡ್ಲಿಗೆರೆ ರೈತ ಸಂಪರ್ಕ ಕೇಂದ್ರಕ್ಕೆ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆ ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ.

45 ವರ್ಷದೊಳಗಿನವರು ಅರ್ಜಿ ಸಲ್ಲಿಸಬಹುದು. ಕೃಷಿ ಅಥವಾ ಕೃಷಿ ಸಂಬಂಧಿತ ವಿಷಯದಲ್ಲಿ ಪದವಿ ಹೊಂದಿದ್ದು, 1 ವರ್ಷದ ಅನುಭವ, ಕಂಪ್ಯೂಟರ್ ಸಾಕ್ಷರತೆ ಹೊಂದಿರಬೇಕು. ಅರ್ಜಿಯೊಂದಿಗೆ ಸ್ನಾತಕ/ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಅಂತಿಮ ಅಂಕಪಟ್ಟಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಯಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರ, ಸೇವಾ ಅನುಭವ ಪ್ರಮಾಣ ಪತ್ರ ಲಗತ್ತಿಸಬೇಕು.

ಅರ್ಜಿಯನ್ನು ಯೋಜನಾ ನಿರ್ದೇಶಕರು(ಆತ್ಮ) ಹಾಗೂ ಜಂಟಿ ನಿರ್ದೇಶಕರು, ಶಿವಮೊಗ್ಗ ಇವರ ಕಚೇರಿಯಲ್ಲಿ ಪಡೆದು ಸ್ವವಿವರಗಳೊಂದಿಗೆ ದಿನಾಂಕ: 21-07-2025 ರೊಳಗೆ ಯೋಜನಾ ನಿರ್ದೇಶಕರು(ಆತ್ಮ) ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಹಳೇ ತೀರ್ಥಹಳ್ಳಿ ರಸ್ತೆ, ಶಿವಮೊಗ್ಗ 577202 ಇಲ್ಲಿಗೆ ಸಲ್ಲಿಸಬಹುದೆಂದು ಕೃಷಿ ಜಂಟಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು(ಆತ್ಮ) ತಿಳಿಸಿದ್ದಾರೆ.

# ಹೊರನಾಡು ಕ್ಷೇತ್ರದ ಸಮಾಜಮುಖಿ ಕಾರ್ಯಗಳು ಶ್ಲಾಘನೀಯ : ನಯನ



**ಮೂಡಿಗೆರೆ:** ಶ್ರೀ ಕ್ಷೇತ್ರ ಧರ್ಮಸ್ಥಳ ಮತ್ತು ಶ್ರೀ ಕ್ಷೇತ್ರ ಹೊರನಾಡಿನ ಅನ್ನಪೂರ್ಣೇಶ್ವರಿ ದೇವಾಲಯ ಖಾಸಗಿ ದೇವಾಲಯವಾಗಿದ್ದರೂ ಸಾರ್ವಜನಿಕ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಕೊಂಡಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಮೂಡಿಗೆರೆ ಕ್ಷೇತ್ರದ ಶಾಸಕಿ ನಯನ ಮೋಟಮ್ಮ ತಿಳಿಸಿದರು.

ಅವರು ಕಳಸ ತಾಲ್ಲೂಕಿನ ಶ್ರೀಕ್ಷೇತ್ರ ಹೊರನಾಡು ಆಧಿಶಕ್ತ್ಯಾತ್ಮಕ ಶ್ರೀ ಅನ್ನಪೂರ್ಣೇಶ್ವರಿ ದೇವಾಲಯದ ಲಲಿತಕಲಾ ಮಂಟಪದಲ್ಲಿ ಶ್ರೀ ಕ್ಷೇತ್ರದ ಗ್ರಾಮೀಣಾಭಿವೃದ್ಧಿ ಯೋಜನೆಗಳಡಿಯಲ್ಲಿ ಪರಿಕರಕ ಮತ್ತು ಹಣ್ಣಿನ ಗಿಡಗಳ ವಿತರಣಾ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಶ್ರೀಕ್ಷೇತ್ರ ಹೊರನಾಡಿನ ಧರ್ಮಕರ್ತರು 1992 ರಿಂದಲೂ ಜಾರಿಗೆ ತಂದಿರುವ ವಿವಿಧ ಯೋಜನೆಗಳು ದಿನದಿಂದ ದಿನಕ್ಕೆ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ ಎಂದರು.

ಇಂಥಹ ಧಾರ್ಮಿಕ ಕಾರ್ಯವನ್ನು ಇತರೆ ಪುಣ್ಯಕ್ಷೇತ್ರಗಳು ಅಳವಡಿಸಿಕೊಂಡಲ್ಲಿ ಸರ್ಕಾರದ ಹೊರೆ ಇಳಿಸಿದಂತಾಗುತ್ತದೆ, ಶ್ರೀ ಕ್ಷೇತ್ರವು ಹಲವಾರು ವರ್ಷಗಳಿಂದ ಜನಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸಮಾಜಮುಖಿಯಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

ಧರ್ಮಕರ್ತ ಡಾ. ಜಿ.ಭೀಮೇಶ್ವರ ಜೋಷಿ ಮಾತನಾಡಿ, ಕರ್ನಾಟಕದಲ್ಲಿ ಪ್ರಪ್ರಥಮ ಶಾಲಾ ಮಕ್ಕಳಿಗೆ ಬಿಸಿಊಟ ಯೋಜನೆ 1958 ರಿಂದಲೇ ಶ್ರೀಕ್ಷೇತ್ರ ಪ್ರಾರಂಭಿಸಿದ್ದು ಮಾತ ಅನ್ನಪೂರ್ಣೇಶ್ವರಿ ಆಶೀರ್ವಾದ ಎಂದರೆ ತಪ್ಪಾಗಲಾರದು ಅಂದಿನಿಂದ ಇಂದಿನವರೆಗೂ ಮತ್ತು ಮುಂದೆಯೂ ಈ ಯೋಜನೆ ಮುಂದುವರೆಸಿಕೊಂಡು ಹೋಗುವುದಾಗಿ ಹಾಗೂ ಬಿಸಿ ಊಟಕ್ಕೆ ವಿದ್ಯಾರ್ಥಿಗಳ ಅನುಕೂಲವಾಗುವ ದೃಷ್ಟಿಯಿಂದ ತಟ್ಟೆ, ಲೋಟಗಳನ್ನು ವಿತರಿಸುತ್ತಿದೆ ಎಂದರು.

ತಮ್ಮ ಕ್ಷೇತ್ರದಲ್ಲಿ 1992 ರಿಂದ 2025 ರವರೆಗೆ ಧಾರ್ಮಿಕ ಯೋಜನೆ, ಧನ್ವಂತರಿ ಯೋಜನೆ, ಶೈಕ್ಷಣಿಕ ಯೋಜನೆ, ಸಾಮಾಜಿಕ ಯೋಜನೆ, ಸಾಂಸ್ಕೃತಿಕ ಯೋಜನೆ, ಸಾಮೂಹಿಕ ಉಪನಯನ, ಸಪ್ತಪದಿ ಯೋಜನೆ, ಗೃಹಲಕ್ಷ್ಮೀ ಯೋಜನೆ, ಆನಂದ ಜ್ಯೋತಿ ಯೋಜನೆ, ಅನ್ನದಾಸೋಹ ಯೋಜನೆಗಳಡಿಯಲ್ಲಿ ಕ್ಷೇತ್ರ ವತಿಯಿಂದ 20 ಕೋಟಿರೂಗಳನ್ನು ವ್ಯಯಿಸಲಾಗಿದ್ದು, ಇನ್ನು ಮುಂದಿನ ದಿನಗಳಲ್ಲೂ ಸಹ ಯೋಜನೆಗಳನ್ನು ಹೆಚ್ಚಿನ ರೀತಿಯಲ್ಲಿ ಮುಂದುವರೆಸಿಕೊಂಡು ಬರುವುದಾಗಿ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರೋಟರಿ ಸಂಸ್ಥೆ ಜಿಲ್ಲಾ ಗವರ್ನರ್ ಮಾತನಾಡಿ, 2025-26 ನೇ ಸಾಲಿನಲ್ಲಿ ಶ್ರೀ ಕ್ಷೇತ್ರದ ಧರ್ಮಕರ್ತರು ಮತ್ತವರ ಸಹೋದರರ ಸೇವೆ ಅಮೋಘವಾಗಿದ್ದು. ಸಮಾಜಮುಖಿ ಕೆಲಸಗಳನ್ನು ಮಾಡುತ್ತಾ ಸಮಾಜಕ್ಕೆ ಅನನ್ಯ ಸೇವೆಯನ್ನು ಸಲ್ಲಿಸುತ್ತಿದೆ ಎಂದರು.

ಹೊರನಾಡು ಗ್ರಾಮ ಪಂಚಾಯತಿ ಅಧ್ಯಕ್ಷ ಮಧುಪ್ರಸಾದ್ ಜೈನ್ ಮಾತನಾಡಿ ಹೊರನಾಡು ಅಕ್ಕಪಕ್ಕದಲ್ಲಿ ಕುಗ್ರಾಮವಾಗಿದ್ದು. ಆ ಗ್ರಾಮಗಳಿಗೆ ಬೆಳಕನ್ನು ನೀಡುವ ಮೂಲಕ ಜನರ ಕಷ್ಟ-ಸುಖಗಳಿಗೆ ಶ್ರೀಕ್ಷೇತ್ರ ಹಲವು ಅಭಿವೃದ್ಧಿಗಳನ್ನು ಮಾಡವುದರ ಮೂಲಕ ಅಲ್ಲಿಯ ಜನರಿಗೆ ಜೀವನಾಧಾರವಾಗಿದೆ ಎಂದರೆ ತಪ್ಪಾಗಲಾರದು ಎಂದರು.

ವೇದಿಕೆಯಲ್ಲಿ ರಾಮನಾರಾಯಣ ಜೋಷಿ, ರಾಜಗೋಪಾಲ್ ಜೋಷಿ, ಗಿರಿಜಾಶಂಕರ್ ಜೋಷಿ ಉಪಸ್ಥಿತರಿದ್ದರು.

# ರಸಗೊಬ್ಬರ ದಾಸ್ತಾನು ಮಾಡದ ರೈತ ವಿರೋಧಿ ಸರ್ಕಾರ : ಕಲ್ಮರುಡಪ್ಪ



**ಚಿಕ್ಕಮಗಳೂರು:** ರಾಜ್ಯಸರ್ಕಾರ ರೈತರ ಬೇಡಿಕೆಗನುಗುಣವಾಗಿ ರಸಗೊಬ್ಬರ ದಾಸ್ತಾನು ಮಾಡುವಲ್ಲಿ ವಿಫಲವಾಗಿದ್ದು, ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸದಲ್ಲಿ ತೊಡಗಿ ರೈತ ವಿರೋಧಿಯಾಗಿ ವರ್ತಿಸುತ್ತಿದೆ ಎಂದು ಬಿಜೆಪಿ ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಹೆಚ್.ಸಿ. ಕಲ್ಮರುಡಪ್ಪ ಆರೋಪಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯಸರ್ಕಾರ ವಲಯವಾರು ಅವಶ್ಯಕತೆ ಪ್ರಮಾಣವನ್ನು ಅಂದಾಜಿಸಿ ಮುಂಗಾರಿಗೂ ಮೊದಲೇ ಪತ್ರ ಮುಖೇನ ಕೇಂದ್ರಕ್ಕೆ ತಿಳಿಸಬೇಕಿತ್ತು. ಆದರೆ ಮುಖ್ಯಮಂತ್ರಿಗಳು ಕಳೆದ ತಿಂಗಳು ಪತ್ರ ಬರೆದು ಯೂರಿಯಾ ರಸಗೊಬ್ಬರವು 6.30 ಲಕ್ಷ ಮೆಟ್ರಿಕ್ ಟನ್ ಅವಶ್ಯಕತೆ ಇದೆ ಎಂದು ತಿಳಿಸಿದ್ದಾರೆ ಎಂದು ಹೇಳಿದರು.

ಆದರೆ ಕೇಂದ್ರ ಸರ್ಕಾರ 8.73 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರವನ್ನು ಹೆಚ್ಚಿಗೆ ನೀಡಿದ್ದು, ಉಳಿದ 2.43 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರವನ್ನು ಕಾಳಸಂತೆಕೋರರಿಗೆ ಮಾರಾಟ ಮಾಡುವ ಹುನ್ನಾರದಿಂದ ರಸಗೊಬ್ಬರ ಅಭಾವವನ್ನು ಸೃಷ್ಟಿಮಾಡಿ, ಕಣ್ಣು ಕಿವಿ ಇಲ್ಲದ ಸರ್ಕಾರವಾಗಿದೆ ಎಂದು ದೂರಿದರು.

ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅನುಷ್ಠಾನಕ್ಕೆ ತರಲಾಗಿದ್ದ ರೈತರ ಮಕ್ಕಳ ವಿಧ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಲು 'ರೈತ ವಿದ್ಯಾನಿಧಿ', ರಾಜ್ಯದ 52 ಲಕ್ಷ ರೈತರಿಗೆ ಕಿಸಾನ್ ಸಮ್ಮಾನ್ ನಿಧಿಯಿಂದ ಪ್ರತೀ ರೈತರಿಗೆ 4 ಸಾವಿರ ರೂ ನಿಲ್ಲಿಸಲಾಗಿದೆ ಎಂದು ಲೇವಡಿ ಮಾಡಿದರು.

ರೈತರ ಕೃಷಿ ಪಂಪ್‌ಸೆಟ್‌ಗೆ ಟ್ರಾನ್ಸ್‌ಫಾರ್ಮರ್ ಅಳವಡಿಸಲು 25 ಸಾವಿರ ರೂ ನಿಗಧಿಪಡಿಸಲಾಗಿದ್ದು, ಇಂದಿನ ಕಾಂಗ್ರೆಸ್ ಸರ್ಕಾರ 3 ಲಕ್ಷ ರೂ ನೀಡಬೇಕು ಇದರ ಜೊತೆಗೆ ಒಂದು ಕಂಬಕ್ಕೆ 25 ಸಾವಿರ ರೂನಂತೆ ಹೆಚ್ಚುವರಿ ಹಣ ನೀಡಬೇಕಾಗಿದೆ ಎಂದ ಅವರು, ಮನೆಯ ವಿದ್ಯುತ್ ಬಿಲ್‌ನಲ್ಲಿ ಪ್ರತೀ ಯೂನಿಟ್‌ಗೆ 33 ಪೈಸೆಯಂತೆ ಇಪಿಪಿಸಿಎ ದರ ಹೊಸದಾಗಿ ಸೇರಿಸಲಾಗಿದೆ. ಮೊದಲಿದ್ದ ಸ್ಲಾಬ್ ಪದ್ದತಿಯನ್ನು ರದ್ದುಮಾಡಿ ಪ್ರತೀ ಯೂನಿಟ್‌ಗೆ 5.78 ರೂ **(4ನೇ ಪುಟಕ್ಕೆ)**

## ಆ.9ಕ್ಕೆ ಋಗ್ವೇದ ನಿತ್ಯ ಉಪಾಕರ್ಮ

**ದಾವಣಗೆರೆ:** ಶ್ರೀ ಶಂಕರ ಸೇವಾ ಸಂಘದ ಆಶ್ರಯದಲ್ಲಿ ಆ.9ರಂದು ಬೆಳಿಗ್ಗೆ 6 ಗಂಟೆಗೆ ಋಗ್ವೇದ ಮತ್ತು ಯಜುರ್ವೇದ ನಿತ್ಯ ಉಪಾಕರ್ಮ ಹಾಗೂ ನೂತನ ಉಪಾಕರ್ಮವನ್ನು ನಗರದ ರಿಂಗ್ ರಸ್ತೆಯಲ್ಲಿರುವ ಶ್ರೀ ಶಂಕರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು, ತ್ರಿಮತಸ್ಥ ಬ್ರಾಹ್ಮಣರು ಮುಂಚಿತವಾಗಿ ತಮ್ಮ ಹೆಸರನ್ನು ನೋಂದಾಯಿಸಲು ಮೊ: 9448043569, 8296408068 ಗೆ ಸಂಪರ್ಕಿಸಲು ಸಂಘದ ಕಾರ್ಯದರ್ಶಿ ಶ್ರೀನಿವಾಸ ಕೆ. ಜೋಷಿ ತಿಳಿಸಿದ್ದಾರೆ.

## ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಪಿಡಿಒ ಅಮಾನತು

**ಚಿತ್ರದುರ್ಗ:** ಜಿಲ್ಲಾ ಪಂಚಾಯಿತಿಯಿಂದ ನಿಯೋಜನೆಗೊಂಡ ಲೆಕ್ಕತನಿಖಾ ತಂಡಕ್ಕೆ ದಾಖಲೆಗಳನ್ನು ಒದಗಿಸುವಂತೆ ಸೂಚಿಸಲಾಗಿದ್ದರೂ ಸಹ, ದಾಖಲೆಗಳನ್ನು ಹಾಜರುಪಡಿಸದೇ ಕರ್ತವ್ಯ ಲೋಪವೆಸಗಿದ ಚಳ್ಳಕೆರೆ ತಾಲ್ಲೂಕು ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಪಿಡಿಒ ವೇದವ್ಯಾಸಲು ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಆದೇಶಿಸಿದ್ದಾರೆ.

ಚಳ್ಳಕೆರೆ ತಾಲ್ಲೂಕು ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯತಿಯಲ್ಲಿ 2023-24 ರಿಂದ 2024-25ನೇ ಸಾಲಿನವರೆಗಿನ ಪಂಚಾಯತಿಯಲ್ಲಿ 15ನೇ ಹಣಕಾಸು, ವರ್ಗ-1 ಇ-ಸ್ವತ್ತು ನರೇಗಾ ಹಾಗೂ ಇತರೆ ಯೋಜನೆಗಳಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತು ವಿಶೇಷ ಲೆಕ್ಕತನಿಖೆಗೆ ನಿಯೋಜಿಸಿದ್ದು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪರವಾಗಿ ಲೆಕ್ಕ ಪರಿಶೋಧಕರು ಲೆಕ್ಕ ತನಿಖೆಗೆ ದಾಖಲೆಗಳನ್ನು ಹಾಜರುಪಡಿಸಲು ಸೂಚಿಸಲಾಗಿದ್ದರೂ ಸಹಾ, ತನಿಖೆಗೆ ಒದಗಿಸಬೇಕಾದ ದಾಖಲೆಗಳಾದ 2023-24 ರಿಂದ 2024-25 ಸಾಲಿನವರೆಗಿನ 15ನೇ ಹಣಕಾಸು, ವರ್ಗ-1, ಇ-ಸ್ವತ್ತು ನರೇಗಾ ಹಾಗೂ ಇತರೆ ಯೋಜನೆಗಳಲ್ಲಿ ಭರಿಸಲಾಗಿರುವ ವೆಚ್ಚ ರೂ. 2,31,54,326 ಗಳಿಗೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. 2023-24 ಮತ್ತು 2024-25ನೇ ಸಾಲಿನಲ್ಲಿ 15ನೇ ಹಣಕಾಸು ಯೋಜನೆಯಲ್ಲಿ ರೂ.84,40,121 ಗಳಿಗೆ ಒದಗಿಸಿರುವ ಓಚರ್‌ಗಳು ಮತ್ತು ಲೆಕ್ಕ ಪತ್ರಗಳನ್ನು ಪರಿಶೀಲಿಸಲಾಗಿ ಟೆಂಡರ್ ಕರೆಯದೇ ರೂ. 1.00 ಲಕ್ಷಕ್ಕಿಂತ ಹೆಚ್ಚು ಮೊತ್ತವನ್ನು ಖರೀದಿಗಳಿಗೆ ವೆಚ್ಚ ಭರಿಸಿದ್ದು, ನಿಯಮಾನುಸಾರ ಕ್ರಮ ಕೈಗೊಳ್ಳದೇ ಪಾವತಿ ಮಾಡಿರುವುದು ಕಂಡುಬಂದಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ-1993, ಕೆ.ಟಿ.ಪಿ.ಪಿ ನಿಯಮ ಹಾಗೂ ಇತರೆ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸದಿರುವುದು ಕಂಡುಬಂದಿರುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿಗಳು ವರದಿಯನ್ನು ಸಲ್ಲಿಸಿರುತ್ತಾರೆ.

ಈ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಚಳ್ಳಕೆರೆ ತಾಲ್ಲೂಕು ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೇದವ್ಯಾಸಲು ಅವರು ಒಬ್ಬ ಜವಾಬ್ದಾರಿಯುತ, ಸರ್ಕಾರಿ ನೌಕರರಾಗಿದ್ದುಕೊಂಡು, ಜಿಲ್ಲಾ ಪಂಚಾಯತಿಯಿಂದ ನಿಯೋಜನೆಗೊಂಡ ಲೆಕ್ಕತನಿಖಾ ತಂಡಕ್ಕೆ ದಾಖಲೆಗಳನ್ನು ಒದಗಿಸುವಂತೆ ಸೂಚಿಸಲಾಗಿದ್ದರೂ ಸಹ ಕೋರಿರುವ ದಾಖಲೆಗಳನ್ನು ಹಾಜರುಪಡಿಸದೇ ಕರ್ತವ್ಯಲೋಪವೆಸಗುವ ಮೂಲಕ ಸರ್ಕಾರಿ ನೌಕರರ ವೃತ್ತಿಗೆ ತರವಲ್ಲದ ರೀತಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡವಳಿ) ನಿಯಮಾವಳಿಗಳನ್ನು ಉಲ್ಲಂಘಿಸಿರುವುದು, ಕಂಡು ಬಂದಿರುವ ಕಾರಣ ಇಲಾಖಾ ವಿಚಾರಣೆ ಕಾಯ್ದಿರಿಸಿ ತಕ್ಷಣದಿಂದಲೇ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಶಿಸ್ತು ಪ್ರಾಧಿಕಾರಿ ಎಸ್.ಜೆ.ಸೋಮಶೇಖರ್ ಆದೇಶದಲ್ಲಿ ತಿಳಿಸಿದ್ದಾರೆ.

## ಸಾಲಬಾಧೆ ಒಂದೇ ಕುಟುಂಬದ ಮೂವರ ಆತ್ಮಹತ್ಯೆ

**ಬೆಂಗಳೂರು :** ಬೆಳಗಾವಿ ನಗರದ ಶಹಪುರದಲ್ಲಿ ಮನಕಲಕುವ ಘಟನೆ ನಡೆದಿದ್ದು, ಅಕ್ಕ ಸಾಲಿಗರ ಕುಟುಂಬದ ಮೂವರು ವಿಷ ಸೇವಿಸಿ ಆತಹತ್ಯೆ ಮಾಡಿಕೊಂಡಿದ್ದು, ಮತ್ತೊಬ್ಬರ ಸ್ಥಿತಿ ಚಿಂತಾಜನಕವಾಗಿದೆ.

ಜೋಷಿಮಹಲ್ ನಿವಾಸಿಗಳಾದ ಮಂಗಳಾ (85), ಮಕ್ಕಳಾದ ಸುವರ್ಣ (52) ಮತ್ತು ಸಂತೋಷ್ (47) ಮೃತಪಟ್ಟಿದ್ದಾರೆ. ಮತ್ತೊಬ್ಬ ಮಗಳು ಸುನಂದಾ ಸ್ಥಿತಿ ಚಿಂತಾಜನಕವಾಗಿದೆ.

ಬೆಳಗಾವಿ ನಗರದ ಜ್ಯೋತಿಮಾಳ್ ಪ್ರದೇಶದಲ್ಲಿ ಮಂಗಳಾ ಕುಟುಂಬ ಮೂವರು ಮಕ್ಕಳೊಂದಿಗೆ ವಾಸವಿದ್ದರು. ಅಕ್ಕಸಾಲಿಗ ವೃತ್ತಿ ಮಾಡುತ್ತಿದ್ದ ಸಂತೋಷ್ ಅವರು ಕುಟುಂಬ ನಿರ್ವಹಣೆ ಮಾಡುತ್ತಿದ್ದರು.

ಇಬ್ಬರು ಸಹೋದರಿಯರಿಗೆ ಮದುವೆಯಾಗದ ಕಾರಣ ಸಂತೋಷ್ ಸಹ ಮದುವೆ ಮಾಡಿಕೊಂಡಿರಲಿಲ್ಲ. ಕುಟುಂಬ ನಿರ್ವಹಣೆಗಾಗಿ ಸಂತೋಷ್ ಅವರು ಸಾಲ ಮಾಡಿಕೊಂಡಿದ್ದರು.

### ಜಾತಿಗಣತಿ ಸರ್ವೇ ವಿಸ್ತರಣೆ ಬೇಡ

## ಒಳಮೀಸಲಾತಿ ಜಾರಿಗೆ ಶೀಘ್ರ ಕ್ರಮ ಅಗತ್ಯ : ಹೆಚ್.ಆಂಜನೇಯ

**ಬೆಂಗಳೂರು, ಜೂ.18:** ಜಾತಿಗಣತಿ ಸಮೀಕ್ಷೆ ಕಾರ್ಯವು ಆಮೆನಡಿಗೆಯಲ್ಲಿ ಆರಂಭಗೊಂಡು, ಈಗ ಅತ್ಯಂತ ಚುರುಕು ಪಡೆದುಕೊಂಡಿದೆ. ಜೊತೆಗೆ ಬಹಳಷ್ಟು ಅವಕಾಶವನ್ನು ನ್ಯಾ.ಎಚ್.ಎನ್.ನಾಗಮೋಹನ್ ದಾಸ್ ಆಯೋಗವು ನೀಡಿದೆ. ಆದ್ದರಿಂದ ಜೂ.22 ಅಂತಿಮ ದಿನ ಆಗಬೇಕು. ಮತ್ತೊಮ್ಮೆ ಯಾವುದೇ ಕಾರಣಕ್ಕೂ ವಿಸ್ತರಣೆ ಮಾಡಬಾರದು ಎಂದು ಮಾಜಿ ಸಚಿವ ಎಚ್.ಆಂಜನೇಯ ಒತ್ತಾಯಿಸಿದರು.

ಜಾತಿಗಣತಿ ಸರ್ವೇ ಕಾರ್ಯದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಜಾಗೃತಿ ಮೂಡಿಸಿಸಲು ಮಹದೇವಪುರ ವಿಧಾನಸಭಾ ಕ್ಷೇತ್ರದ ಹೂಡಿ ವ್ಯಾಪ್ತಿಯ ಪರಿಶಿಷ್ಟರ ವಾಸದ ಪ್ರದೇಶದಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಅಭಿಯಾನದಲ್ಲಿ ಮಾತನಾಡಿದರು.

ಆಂಜನೇಯ ಅವರು ಪ್ರದೇಶಕ್ಕೆ ಪ್ರವೇಶಿಸುತ್ತಿದ್ದಂತೆ ಸ್ಥಳೀಯ ಮುಖಂಡರು, ಮಾದಿಗ ಸಮುದಾಯದವರು ಅದ್ದೂರಿಯಾಗಿ ಬರಮಾಡಿಕೊಂಡು ಮನೆ ಮನೆಗೆ




ಭೇಟಿ ಮಾಡಿಸಿದರು.

ಈ ವೇಳೆ ಜಾತಿಗಣತಿ ಸರ್ವೇ ವೇಳೆ ನೊಂದಾಯಿಸಿದ್ದರ ಬಳಿ ನೀವು ಏನೆಂದು ಬರೆಯಿಸಿದ್ದೀರಾ ಎಂದು ಆಂಜನೇಯ ಪ್ರಶ್ನಿಸಿದರು. ಜಾತಿ ಆದಿಕರ್ನಾಟಕ, ಮೂಲ ಜಾತಿ ಮಾದಿಗ 061 ಎಂದು ಬರೆಯಿಸಿದ್ದೇವೆ ಎಂದು ಹೇಳಿದರು.

ಅದೇ ರೀತಿ ಅನೇಕ ಮನೆಗಳಿಗೆ ಭೇಟಿ ನೀಡಿ, ನೀವುಗಳು ತಕ್ಷಣ ಸರ್ವೇ ಕಾರ್ಯದಲ್ಲಿ ಪಾಲ್ಗೊಳ್ಳಬೇಕು. ಜಾತಿ ಹೇಳಿಕೊಳ್ಳಲು ಹಿಂಜರಿಕೆ ಬೇಡ. ಇದು ಮೀಸಲಾತಿ ಪಡೆಯಲು ಇರುವ ಏಕೈಕ ಮಾರ್ಗ. ಕೀಳರಿಮೆ ತೊರೆಯದಿದ್ದರೆ ನಿಮಗೆ ಮೀಸಲಾತಿ ಸೌಲಭ್ಯ ದೊರೆಯುವುದಿಲ್ಲ. ಆದ್ದ-ರಿಂದ ಎಲ್ಲರೂ ಕಡ್ಡಾಯವಾಗಿ ಮೂಲ ಜಾತಿ ಮಾದಿಗ 061 ಎಂದು ಬರೆಯಿಸುವ ಮೂಲಕ ಒಳಮೀಸಲಾತಿಯಲ್ಲಿ ಹೆಚ್ಚು ಪಾಲು ಪಡೆಯಲು ಮುಂದಾಗಬೇಕು ಎಂದು ತಿಳಿಸಿದರು.

ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಮಾದಿಗರು ಸ್ವಾಭಿಮಾನದಿಂದ ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಂಡಿದ್ದಾರೆ. ಆದರೆ, ನಗರ ಪ್ರದೇಶ ಅದರಲ್ಲೂ ಬೆಂಗಳೂರಿನಲ್ಲಿ ಸಾಮಾಜಿಕ ಕಾರಣ-ಕ್ಕೆ ಜಾತಿ ಹೇಳಿಕೊಳ್ಳಲು ಹಿಂಜರಿದಿದ್ದು, ಸಮೀಕ್ಷೆ ಕಾರ್ಯಕ್ಕೆ ತೀವ್ರ ಹಿನ್ನಡೆ ಆಗಿದೆ. ಈ ಸತ್ಯ ಅರಿತು ಸರ್ಕಾರ ಮತ್ತು ಆಯೋಗ ಮೂರು ಬಾರಿ ಸರ್ವೇ ಕಾರ್ಯ ದಿನಾಂಕವನ್ನು ವಿಸ್ತರಿಸಿದೆ. ಇದೇ ಅಂತಿಮ ಅವಕಾಶ, ಮತ್ತೊಮ್ಮೆ ಯಾವುದೇ ಕಾರಣಕ್ಕೂ ವಿಸ್ತರಣೆ ಮಾಡುವುದಿಲ್ಲ ಎಂದರು.

ಆದ್ದರಿಂದ ಸಮುದಾಯದ ಚಿಂತಕರು, ವಿವಿಧ ಸಂಘಟನೆಗಳ ಕಾರ್ಯಕರ್ತರು, ನೌಕರರು ಸಮಾಜದ ಋಣ ತೀರಿಸಲು ಜೊತೆಗೆ ನಮ್ಮಗಳ ಭವಿಷ್ಯ ಉಜ್ವಲಕ್ಕಾಗಿ ಸಮೀಕ್ಷೆ ಕಾರ್ಯ ಕುರಿತು ಎಸ್ಸಿ ಕಾಲೋನಿ ಜೊತೆಗೆ ಸಮುದಾಯದವರಲ್ಲಿ ಜಾಗೃತಿ ಮೂಡಿಸಬೇಕು. ಜೊತೆಗೆ ಸಮೀಕ್ಷೆದಾರರ ಜೊತೆಗೆ ಮನೆ ಮನೆಗೆ ಹೋಗಿ ಮಾದಿಗ 061 ಎಂದು ಬರೆಯಿಸಲು ಬದ್ಧತೆ ಪ್ರದರ್ಶಿಸಬೇಕು.

## ಚಿತ್ರದುರ್ಗ : ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ



**ಚಿತ್ರದುರ್ಗ :** ಚಿತ್ರದುರ್ಗ ನಗರ ವ್ಯಾಪ್ತಿಯ ವಿವಿಧೆಡೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಬುಧವಾರ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದರು.

ಚಿತ್ರದುರ್ಗ ನಗರ ವ್ಯಾಪ್ತಿಯಲ್ಲಿ 28.56 ಲಕ್ಷ ರೂ. ವೆಚ್ಚದಲ್ಲಿ ತಿಮ್ಮಣ್ಣನಾಯಕನ ಕೆರೆ ಏರಿಯ ಮೇಲೆ ಎಡಭಾಗದಲ್ಲಿ ಪಾತ್ ವೇ ಮತ್ತು ಅಲಂಕಾರಿಕ ವಿದ್ಯುತ್ ದೀಪಗಳು, ಜಿಮ್ ಮತ್ತು ಮಕ್ಕಳ ಆಟಿಕೆ ಸಾಮಾಗ್ರಿಗಳು ಮತ್ತು ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿ. 31.67 ಲಕ್ಷ ರೂ. ವೆಚ್ಚದಲ್ಲಿ ನಗರದ 2ನೇ ವಾರ್ಡ್‌ನಲ್ಲಿರುವ ಚಂದ್ರಮಾಸನ ಹೊಂಡದ ಪುಷ್ಕರಣೆ ಅಭಿವೃದ್ಧಿ ಕಾಮಗಾರಿ ಹಾಗೂ ಜಿಮ್ ಮತ್ತು ಮಕ್ಕಳ ಆಟಿಕೆ ಸಾಮಗ್ರಿಗಳನ್ನು ಅಳವಡಿಸುವ ಕಾಮಗಾರಿ. 20.44 ಲಕ್ಷ ರೂ. ವೆಚ್ಚದಲ್ಲಿ ಐತಿಹಾಸಿಕ ಕೋಟೆಯ ಕುರವತ್ತಿ ಈಶ್ವರ ದೇವಸ್ಥಾನದ ರಾಮದೇವರ ವಡ್ಡು ಏರಿ ಅಭಿವೃದ್ಧಿ ಕಾಮಗಾರಿ. 19.92 ಲಕ್ಷ ರೂ. ವೆಚ್ಚದಲ್ಲಿ ಮೆದೇಹಳ್ಳಿ ಗ್ರಾಮ ಪಂಚಾಯಿತಿ ರಿ.ಸ.ನಂ15/2 ರಿಂದ 8 ಮತ್ತು 16/4,5, 24/1,2,3 ರಲ್ಲಿ ಉದ್ಯಾನವನ ನಿರ್ಮಾಣ ಕಾಮಗಾರಿ, ಮೆದೇಹಳ್ಳಿ ಗ್ರಾಮದ ರಿ.ಸ.ನಂ.21/ಸಿ ರಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ ಹಾಗೂ 17.43 ಲಕ್ಷ ರೂ. ವೆಚ್ಚದಲ್ಲಿ ಚಿತ್ರದುರ್ಗ ನಗರದ ಕೆಳಗೋಟೆಯಲ್ಲಿರುವ ಚೆನ್ನಕೇಶವ ಸ್ವಾಮಿ ದೇವಸ್ಥಾನದ ಹಿಂಭಾಗದ ಉದ್ಯಾನವನ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಆಯುಕ್ತ ಸೋಮಶೇಖರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ ರಾಘವೇಂದ್ರ, ನಗರಸಭೆ ಅಧ್ಯಕ್ಷೆ ರೇಣುಕಾ, ಎಂ.ಕೆ. ಹಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಗಣೇಶ್, ಪ್ರಾಧಿಕಾರದ ಸದಸ್ಯರುಗಳಾದ ಅಂಜಿನಪ್ಪ, ಸುರೇಶ್, ದೇವರಾಜ್, ಮೀನಾಕ್ಷಿ ಮುಂತಾದವರು ಇದ್ದರು.

## ವಿದ್ಯಾರ್ಥಿಗಳಲ್ಲಿ ಸಮಯ ಪ್ರಜ್ಞೆ-ಸಂಸ್ಕಾರ ಎರಡು ಅಮೂಲ್ಯ: ಡಾ. ಸುಲೋಚನಾ

**ಕಡೂರು:** ವಿದ್ಯಾರ್ಥಿಗಳಲ್ಲಿ ಸಂಯಮ ಸಂಸ್ಕಾರ ಹಾಗೂ ಸಮಯ ಪ್ರಜ್ಞೆ ಇವುಗಳು ಅತ್ಯಂತ ಅಮೂಲ್ಯವಾದದ್ದು ಎಂದು ಚಿಕ್ಕಮಗಳೂರು ಜಿಲ್ಲಾ ಪ್ರಪ್ರಥಮ ಮಹಿಳಾ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾದ ಡಾ. ಸಿ.ಎಂ ಸುಲೋಚನಾ ತಿಳಿಸಿದರು.

ಅವರು ಕಡೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸುತ್ತಿರುವ ಮನೆ ಅಂಗಳದಲ್ಲಿ ಶ್ರಾವಣ ಸಂಭ್ರಮ ಉದ್ಘಾಟನಾ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ವಿದ್ಯಾರ್ಥಿಗಳು ಇಂತಹ ಗುರುಕುಲಗಳಲ್ಲಿ ಅಭ್ಯಾಸ ಮಾಡಬೇಕಿದೆ, ಆಗ ಅವರಲ್ಲಿ ಶ್ರದ್ಧೆ ವಿವೇಚನೆ ಮತ್ತು ಸಂಸ್ಕಾರಗಳು ಮೈಗೂಡಿಸಿಕೊಳ್ಳಲು ಸಾಧ್ಯವಿದೆ ಅಂಕಗಳಿಕೆ ಜೀವನದ ಮೌಲ್ಯಗಳಿಗೆ ಪ್ರಮುಖವಾದದ್ದು ಅಲ್ಲ ಮೇಲ್ಕಂಡ



ಅಂಶಗಳು ಪೂರಕವಾಗಿವೆ ಎಂದು ತಿಳಿಸಿದರು.

ದಿವ್ಯ ಸಾನಿಧ್ಯವನ್ನು ವಹಿಸಿದ್ದ ಜ್ಞಾನಪ್ರಭು ಸಿದ್ದರಾಮಯ್ಯ ಕೇಂದ್ರ ಮಹಾಸ್ವಾಮಿಗಳವರು ಮಾತನಾಡಿ, ಶ್ರಾವಣ ಮಾಸ ನಮ್ಮೆಲ್ಲರ ಜೀವನದಲ್ಲಿ ಅತ್ಯುತ್ತಮವಾದ ಸಂದರ್ಭವಾಗಿದೆ. ಈ ಮಾಸದಲ್ಲಿ ನಾವುಗಳು ವಿಶೇಷವಾಗಿ ಶರಣರ ಚಿಂತನೆಗೆ ಹೆಚ್ಚು ಮಹತ್ವವನ್ನು ನೀಡುತ್ತೇವೆ ಹಾಗೂ ಅವರ ತತ್ವ ಆದರ್ಶಗಳನ್ನು ಅಳವಡಿಸಿಕೊಳ್ಳುತ್ತೇವೆ. ಆ ಮೂಲಕ ಶರಣರ ತತ್ವ ಚಿಂತನೆಗಳನ್ನು ನಮ್ಮೆಲ್ಲರಲ್ಲಿ ಅಳವಡಿಸಿಕೊಂಡು ಉತ್ತಮವಾದ ಸಂಸ್ಕಾರ ಜೀವನವನ್ನು ನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು.

ಶ್ರಾವಣ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸೂರಿ ಶ್ರೀನಿವಾಸ್ ಮಾತನಾಡಿ, ಇಡೀ ಜಿಲ್ಲೆಯಲ್ಲಿಯೇ ಶ್ರಾವಣ ಸಂಭ್ರಮ ಸಾಹಿತ್ಯ ಸುಧೆಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ, ಆ ಮೂಲಕ ಶರಣರ ಚಿಂತನೆಗಳನ್ನು ಮನೆಮನೆಗಳಿಗೆ ತಲುಪಿಸುವ ಹಾಗೂ ಎಲ್ಲರ ಮನಸ್ಸುಗಳನ್ನು ಒಟ್ಟುಗೂಡಿಸುವ ಕೆಲಸ ಕನ್ನಡ ಸಾಹಿತ್ಯ ಪರಿಷತ್ ಮಾಡುತ್ತಿದೆ, ಜಾತಿ-ಮತ-ಪಂಥಗಳನ್ನು ಮೀರಿ ತನ್ನ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸುತ್ತಿದೆ ಎಂದು ಅವರು ತಿಳಿಸಿದರು.

ಅಧ್ಯಕ್ಷತೆಯನ್ನು ಕನ್ನಡ ಸಾಹಿತ್ಯ ಪರಿಷತ್ತು ಕಡೂರು ಅಧ್ಯಕ್ಷರಾದ ಚಿಕ್ಕನಲ್ಲೂರು ಎಸ್.ಪರಮೇಶ್ ವಹಿಸಿದ್ದರು. ಭುವನೇಶ್ವರಿ ಭಾವಚಿತ್ರದ ಅನಾವರಣವನ್ನು ಜಿ. ಶ್ರೀಕಂಠಪ್ಪ ಅಧ್ಯಕ್ಷರು ಸಿಎಸ್‌ಕೆ ಪ್ರಸಾದ ನಿಲಯ ಗಿರಿಯಾಪುರ, ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪನಮನವನ್ನ ಬಿ.ಪ್ರಕಾಶ್ ಕೋಶಾಧ್ಯಕ್ಷರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಚಿಕ್ಕಮಗಳೂರು ಹಾಗೂ ಶ್ರೀಮತಿ ಲತಾ ರಾಜಶೇಖರ್ ಅಧ್ಯಕ್ಷರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮಹಿಳಾ ಘಟಕ ಕಡೂರು ಇವರು ನೆರವೇರಿಸಿದರು. ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ಹಿರೇನಲ್ಲೂರು ಘಟಕದ ಅಧ್ಯಕ್ಷರಾದ ಶಿವಲಿಂಗ ಸ್ವಾಮಿ ಅವರು ಪ್ರಾಸ್ತಾವಿಕ ನುಡಿಗಳನ್ನು ನುಡಿದರು.

## ಕಾಯುತ್ತಾ ಕೂರದೇ ಅವಕಾಶಗಳ ನೀವೇ ಸೃಷ್ಟಿಸಿಕೊಳ್ಳಿ : ಜಿ.ಬಿ. ವಿನಯ್‌ಕುಮಾರ್

**ದಾವಣಗೆರೆ:** ರಾಜಕಾರಣ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಯಾರೂ ಅವಕಾಶ ಕೊಡುವುದಿಲ್ಲ. ಅವಕಾಶಗಳನ್ನು ನಾವೇ ಸೃಷ್ಟಿ ಮಾಡಿಕೊಳ್ಳಬೇಕು. ಅವಕಾಶ ಅನ್ನೋದು ನಮ್ಮ ಸುತ್ತಮುತ್ತ ಇರುತ್ತದೆ. ವ್ಯಕ್ತಿತ್ವ ಆಕರ್ಷಕವಾಗಿದ್ದರೆ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರು ಹಾಗೂ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಕರೆ ನೀಡಿದರು.

ಹೊನ್ನಾಳಿ ಪಟ್ಟಣದ ಹಿರೇಕಲ್ಮಠದಲ್ಲಿ ಏರ್ಪಡಿಸಿದ್ದ ಹೊನ್ನಾಳಿ - ನ್ಯಾಮತಿ ಅವಳಿ ತಾಲೂಕಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಶೇಕಡಾ 90ಕ್ಕೂ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಾನು ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡಿದ ಬಳಿಕ ಎಲ್ಲಾ ಕಾರ್ಯಕ್ರಮಗಳಿಗೂ ರಾಜ್ಯಾದ್ಯಂತ ಆಹ್ವಾನ ನೀಡುತ್ತಿದ್ದಾರೆ. ಮೊದಲೆಲ್ಲಾ ಈ ಕಾರ್ಯಕ್ರಮಕ್ಕೆ ಕರೆಯುತ್ತಿರಲಿಲ್ಲ ಎಂದು ತಿಳಿಸಿದರು.

ಇಂದು ದೇಶದಲ್ಲಿ ಅಸಮಾನತೆ ಇದೆ. ನೀವೆಲ್ಲರೂ ಅಸಮಾನತೆ ಸಂತ್ರಸ್ತರು. ನಿಮ್ಮೊಳಗಿರುವ ಸಾಮರ್ಥ್ಯ ಹೊರ ಬರಬೇಕು. ನಮ್ಮೊಳಗೆ ವಿಶ್ವವಿದೆ, ಸಾಮರ್ಥ್ಯ ಇದೆ. ಇದನ್ನು ಅರ್ಥ ಮಾಡಿಕೊಂಡು ಮುನ್ನಡೆಯಬೇಕು ಎಂದು ವಿವೇಕಾನಂದ ಅವರು ಹೇಳಿದ್ದರು. ಅದರಂತೆ ನಾವು ಸಾಮರ್ಥ್ಯ, ಜ್ಞಾನ, ಮಾನವೀಯ ಗುಣಗಳು, ಆಕರ್ಷಕ ವ್ಯಕ್ತಿತ್ವ ರೂಢಿಸಿಕೊಂಡರೆ ಸಾಧನೆ



ಕಷ್ಟವಾಗದು. ಸಮಸ್ಯೆಗಳ ಸುಳಿಯಲ್ಲಿ ಸಿಲುಕಿ ಇವತ್ತಿನ ಕಷ್ಟ ಜೀವನದ ದೊಡ್ಡ ಕಷ್ಟ ಎಂದು ನೀವೆಲ್ಲರೂ ನೋವು ಅನುಭವಿಸುತ್ತಿದ್ದೀರಾ. ಧೈರ್ಯದಿಂದ ಹೊರಬರಬೇಕು. ಆಗ ಅರ್ಥ ಯಶಸ್ಸು ಖಂಡಿತ ಸಿಗುತ್ತದೆ ಎಂದು ಸಲಹೆ ನೀಡಿದರು.

ಇನ್‌ಸೈಟ್ಸ್ ಐಎಸ್ ಸಂಸ್ಥೆ ಹುಟ್ಟು ಹಾಕಿ 11 ವರ್ಷಗಳಾಗಿವೆ. 1500 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಐಎಎಸ್ ಮಾಡಿದ್ದಾರೆ. ಜಮ್ಮು ಕಾಶ್ಮೀರ, ಹೈದರಾಬಾದ್, ಲಕ್ನೋ, ಬೆಂಗಳೂರಿನಲ್ಲಿಯೂ ನಮ್ಮ ಸಂಸ್ಥೆ ಇದೆ. ಬೆಂಗಳೂರಿನಲ್ಲಿ ಆರು ಸಾವಿರ ವಿದ್ಯಾರ್ಥಿಗಳು ಈಗ ತರಬೇತಿ ಪಡೆ-ಯುತ್ತಿದ್ದಾರೆ. ಕರ್ನಾಟಕದಿಂದ 30 ವಿದ್ಯಾರ್ಥಿಗಳು ಐಎಎಸ್ ಆದರೆ ಅದರಲ್ಲಿ 25 ರಿಂದ 27 ವಿದ್ಯಾರ್ಥಿಗಳು ನಮ್ಮ ಸಂಸ್ಥೆಯವರೇ ಇದ್ದಾರೆ. ಯಾವುದೋ ಒಂದು ತರಬೇತಿ ನಮ್ಮಲ್ಲಿಯೇ ಪಡೆದಿರುತ್ತಾರೆ. ಇದು ನಮ್ಮ ಸಂಸ್ಥೆಯ ಹೆಗ್ಗಳಿಕೆ ಎಂದು ತಿಳಿಸಿದರು.

ಹತ್ತನೇ ತರಗತಿ ಓದಿದವರು ಐಎಎಸ್ ಮಾಡಬೇಕೆಂಬ ಕನಸು ಹೊಂದಿದ್ದರೆ ಸೈನ್ಸ್ ಆಯ್ದುಕೊಳ್ಳಿ. ಪುಸ್ತಕ ಮತ್ತು ಪ್ರತಿನಿತ್ಯ ಎದ್ದ ತಕ್ಷಣ ಕನ್ನಡ ಹಾಗೂ ಇಂಗ್ಲೀಷ್ ಪತ್ರಿಕೆ ಓದುವ ಹವ್ಯಾಸ ರೂಢಿಸಿಕೊಳ್ಳಿ. ಪುಸ್ತಕ ಓದಬೇಕೆಂದರೆ ನಮ್ಮೂರಲ್ಲಿ ಪುಸ್ತಕ ಓದುವ ಸಂಸ್ಕೃತಿ ಇರಬೇಕು. ಶಿವಮೊಗ್ಗ ಸಾಹಿತ್ಯದ ತವರು. ಹೊನ್ನಾಳಿ ಹತ್ತಿರವಿದ್ದರೂ ಯಾಕೆ ಕಡಿಮೆಯಾಗಿದೆ ಎಂಬ ಪ್ರಶ್ನೆ ಕಾಡುತ್ತಿದೆ. ಪುಸ್ತಕಗಳ ಜೊತೆಗೆ ಬಾಂಧವ್ಯ ಬೆಳೆದರೆ ಓದುವ ಹವ್ಯಾಸ ಬೆಳೆದೇ ಬೆಳೆಯುತ್ತದೆ. ಪುಸ್ತಕದ ಮೇಲೆ ಪ್ರೀತಿ ಓದು ಬೆಳೆದರೆ ವ್ಯಕ್ತಿತ್ವದಲ್ಲಿ ಅಗಾಧ ಜ್ಞಾನ ಬರುತ್ತದೆ. ಸಂಸ್ಕೃತಿ, ಮಾನವೀಯ ಗುಣ, ಜ್ಞಾನ ಸಂಪಾದನೆಯೂ ಆಗುತ್ತದೆ ಎಂದು ಹೇಳಿದರು.

ನನ್ನ ಮೇಲೆ ಒಂದೂ ಎಫ್ ಐ ಆರ್ ಇಲ್ಲ. ನನ್ನ ವಿರುದ್ಧ ಯಾವುದೇ ಋಣಾತ್ಮಕ ಆರೋಪ ಇಲ್ಲ. ಕಪ್ಪು ಚುಕ್ಕೆಗಳಿಲ್ಲ. ನನ್ನ ತಂದೆ ಹೇಳಿದ್ದ ಮಾತು ಈಗಲೂ ನೆನಪಿದೆ, ಊರಿಗೆ ಕೆಟ್ಟ ಹೆಸರು ತರಬೇಡ, ಏನೇ ಕೆಲಸ ಮಾಡು, ಒಳ್ಳೆಯನಾಗಿರು ಎಂದಿದ್ದರು. ನಾನು ದೊಡ್ಡ ಮನುಷ್ಯನಾಗುವುದು ಇಷ್ಟವಿರಲಿಲ್ಲ. ಆದ್ರೆ, ಒಳ್ಳೆಯವನಾಗಿ ಬಾಳಬೇಕು ಎಂಬ ಆಸೆ ಅವರಲ್ಲಿ ಇತ್ತು. ಅವರ ಮಾತಿನಂತೆ ನಡೆದೆ. ಹಾಗಾಗಿ ಸಾಧನೆ ಮಾಡಲು ಸಾಧ್ಯವಾಯಿತು ಎಂದು ಹೇಳಿದರು.

ಪಿಯುಸಿ, ಪದವಿ ಓದಲು ಒಳ್ಳೆಯ ಶಿಕ್ಷಣ ಸಂಸ್ಥೆ ಆಯ್ಕೆ ಮಾಡಿಕೊಳ್ಳಿ. ಮೆಡಿಕಲ್, ಎಂಜಿನಿಯರಿಂಗ್ ಮಾಡಿ. ಇದೇ ಕ್ಷೇತ್ರದಲ್ಲಿ ಹೋಗುವ ಆಸೆ ಇರಲಿ. ಅವಕಾಶಗಳು ಸಿಕ್ಕಾಗ ಬಿಡಬೇಡಿ. ಈಗಿನ ಮಕ್ಕಳಿಗೆ ಹವ್ಯಾಸಗಳೇ ಇಲ್ಲ. ಎಸ್. ಎಸ್. ಎಲ್. ಸಿ, ಪಿಯುಸಿ ಆದ ಬಳಿಕ ಪೋಷಕರು ಹವ್ಯಾಸಗಳನ್ನು ಬಿಡಿಸಿಬಿಡುತ್ತಾರೆ. ಇದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ನನಗೆ ಎಂಪಿ ಆಗಬೇಕೆಂಬ ಕನಸು ಇತ್ತು. ಜನಸೇವೆ ಮಾಡಬೇಕೆಂಬ ಹೆಬ್ಬಯಕೆ ಇತ್ತಾದರೂ ಸಾಧ್ಯವಾಗಲಿಲ್ಲ. ಹಾಗೆಂದು ನಾನು ಸುಮ್ಮನಾಗಿಲ್ಲ. ರಾಜ್ಯಾದ್ಯಂತ ಓಡಾಡುತ್ತಿದ್ದೇನೆ. ಜನರಲ್ಲಿ ಸ್ವಾಭಿಮಾನದ ಕಿಚ್ಚು ಬಡಿದೆಬ್ಬಿಸುವ ಕೆಲಸ ಮಾಡುತ್ತಿರುವೆ. ಉತ್ತಮ ಪ್ರತಿಕ್ರಿಯೆಯೂ ವ್ಯಕ್ತವಾಗುತ್ತಿದೆ. ಸವಾಲುಗಳು ಎದುರಾಗುವುದು ಸಹಜ. ಧೈರ್ಯವಾಗಿ ಮುನ್ನಡೆಯುತ್ತೇನೆ, ಸಾಧಿಸಿಯೇ ತೀರುತ್ತೇನೆ ಎಂಬ ಅಚಲವಾದ ವಿಶ್ವಾಸ, ದೃಢ ನಿಶ್ಚಯ ನಿಮ್ಮಲ್ಲಿದ್ದರೆ ಎಲ್ಲವನ್ನೂ ಸಾಧ್ಯವಾಗಿ ಸಬಹುದು ಎಂದು ಜಿ. ಬಿ. ವಿನಯ್ ಕುಮಾರ್ ಹೇಳಿದರು.

ಹಿರೇಕಲ್ಮಠದ ಶ್ರೀ ಚನ್ನಮಲ್ಲಿಕಾರ್ಜುನ ಸ್ವಾಮೀಜಿ ಅವರು ಸಾನಿಧ್ಯ ವಹಿಸಿದ್ದರು. ವೀರಶೈವ ಲಿಂಗಾಯತ ಸಮಾಜದ ಮುಖಂಡ ಪಿ. ವೀರೇಶ್, ಪಂಚಮಸಾಲಿ ಸಮಾಜದ ಹೊನ್ನಾಳಿ ತಾಲೂಕು ಘಟಕದ ಅಧ್ಯಕ್ಷ ವೀರಣ್ಣ, ಮಡಿವಾಳ ಮಾಚಿದೇವ ಸಮಾಜದ ಅಧ್ಯಕ್ಷ ಎಂ. ಆರ್. ಮಹಾಂತೇಶ್, ಬಂಜಾರ ಸಮಾಜದ ಅಧ್ಯಕ್ಷ ಅಂಜುನಾಯ್ಕ, ಮುಸ್ಲಿಂ ಸಮಾಜದ ಮುಖಂಡ ಅಮಾನ್ ಸಾಬ್, ಪ್ರೊಫೆಸರ್ ಹೆಚ್. ಪಾಂಡುರಂಗ, ಡಿ. ಸಿ. ಪಾಟೀಲ್, ಉಬೇದ್ ಉಲ್ಲಾ ಸಾಬ್, ಹಾಲುಮತ ಸಮಾಜದ ವೀರಣ್ಣ ಮತ್ತಿತರರು ಹಾಜರಿದ್ದರು.

ಸಮಾರಂಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಯಿತು. ಹೊನ್ನಾಳಿ-ನ್ಯಾಮತಿ ಅವಳಿ ತಾಲೂಕಿನ ಪೋಷಕರು ಈ ವೇಳೆ ಉಪಸ್ಥಿತರಿದ್ದರು.

## ಸಿನಿಮಾ ಪ್ರತಿಭೆಗಳಿಗೆ ಸ್ಕ್ರೀನ್ ಅಕಾಡೆಮಿ

**ಮಂಗಳೂರು:** ಭಾರತೀಯ ಸಿನಿಮಾದಲ್ಲಿನ ಹೊಸ ಪ್ರತಿಭೆಗಳನ್ನು ಗುರುತಿಸುವ, ಪ್ರೋತ್ಸಾಹಿಸುವ ಮತ್ತು ಬೆಳೆಸುವ ಸಲುವಾಗಿ ಒಂದು ವಿನೂತನ ಲಾಭರಹಿತ ಯೋಜನೆಯಾಗಿರುವ ಸ್ಕ್ರೀನ್ ಅಕಾಡೆಮಿಯನ್ನು ಇಂಡಿಯನ್ ಎಕ್ಸ್‌ಪ್ರೆಸ್ ಗ್ರೂಪ್ ಮತ್ತು ಸ್ಕ್ರೀನ್ ಜಂಟಿಯಾಗಿ ಪ್ರಾರಂಭಿಸಿವೆ.

ಕಾನ್ಸ್ ಮತ್ತು ಆಸ್ಕರ್ ವಿಜೇತರಾದ ಗುನೀತ್ ಮೊಂಗಾ, ಪಾಯಲ್ ಕಪಾಡಿಯಾ, ರೆಸುಲ್ ಪೂಕುಟ್ಟಿ ಮತ್ತು ಹಿರಿಯ ಚಿತ್ರಕಥೆಗಾರರಾದ ಅಂಜುಮ್ ರಜಬಾಲಿ ಸೇರಿದಂತೆ ವಿವಿಧ ರೀತಿ ಸಾಧಕ ಸದಸ್ಯರನ್ನು ಹೊಂದಿರುವ ಈ ಅಕಾಡೆಮಿಯು ಭಾರತದ ಉನ್ನತ ಫಿಲ್ಮ್ ಸ್ಕೂಲ್‌ಗಳ ಜೊತೆಗೆ ಕೆಲಸ ಮಾಡಿ, ಮುಂದಿನ ಪೀಳಿಗೆಯ ಪ್ರತಿಭಾವಂತ ಫಿಲ್ಮ್ ಮೇಕರ್ ಗಳನ್ನು ಗುರುತಿಸಿ ಅವರಿಗೆ ಶಿಕ್ಷಣ, ಪ್ರಾತಿನಿಧ್ಯ ಮತ್ತು ಮನ್ನಣೆ ಒದಗಿಸು ಮೂಲಕ ಸಬಲೀಕರಣಗೊಳಿಸಲಿದೆ ಎಂದು ಪ್ರಕಟಣೆ ಹೇಳಿದೆ.

ಲೋಧಾ ಫೌಂಡೇಶನ್ ನ ಸಂಸ್ಥಾಪಕ ಪೊ?ಷಕ ಅಭಿಷೇಕ್ ಲೋಧಾ ಅವರ ನೆರವಿನೊಂದಿಗೆ ಸ್ಥಾಪಿತವಾಗಿರುವ ಸ್ಕ್ರೀನ್ ಅಕಾಡೆಮಿಯು ಅಸಾಧಾರಣ ಕಥೆಗಳನ್ನು ಹೇಳುವ ಸಾಮರ್ಥ್ಯವನ್ನು ಹೊಂದಿರುವ, ಆದರೆ ಔಪಚಾರಿಕ ಸಿನಿಮಾ ಶಿಕ್ಷಣವನ್ನು ಪಡೆಯಲು ಆರ್ಥಿಕ ಸಂಪನ್ಮೂಲಗಳ ಕೊರತೆ ಇರುವ, ಫಿಲ್ಮ್ ಸ್ಕೂಲ್ ಗಳಿಂದ ನಾಮನಿರ್ದೇಶನಗೊಂಡ ವಿದ್ಯಾರ್ಥಿಗಳಿಗೆ ವಾರ್ಷಿಕವಾಗಿ ಸ್ನಾತಕೋತ್ತರ ಫೆಲೋಶಿಪ್ ಗಳನ್ನು ಒದಗಿಸುತ್ತದೆ. (ಅರ್ಜಿ ಸಲ್ಲಿಸುವ ವಿವರಗಳಿಗಾಗಿ ತಿತಿತಿ.ಛಿಡಿಜಜಟಿಚಿಛಿಚಿಜಜಟಥಿ.ಡಿಡಿಂ ಗೆ ಭೇಟಿ ನೀಡಿ).

2025ರ ಸ್ಕ್ರೀನ್ ಅಕಾಡೆಮಿ ಫೆಲೋಶಿಪ್ ಗಳು ಫಿಲ್ಮ್ ಆಂಡ್ ಟೆಲಿವಿಷನ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ (ಪುಣೆ), ಸತ್ಯಜಿತ್ ರೇ ಫಿಲ್ಮ್ ಆಂಡ್ ಟೆಲಿವಿಷನ್ ಇನ್‌ಸ್ಟಿಟ್ಯೂಟ್ (ಕೋಲ್ಕತ್ತಾ), ಮತ್ತು ವಿಸ್ಲಿಂಗ್ ವುಡ್ಸ್ ಇಂಟರ್ನ್ಯಾಷನಲ್ (ಮುಂಬೈ) ಇವುಗಳಂತಹ ಪ್ರಮುಖ ಸಂಸ್ಥೆಗಳಲ್ಲಿ ಸ್ನಾತಕೋತ್ತರ ಅಧ್ಯಯನಕ್ಕೆ ಬೇಕಾಗುವ ಸಂಪೂರ್ಣ ಆರ್ಥಿಕ ಬೆಂಬಲವನ್ನು ಒದಗಿಸುತ್ತವೆ ಎಂದು ಪ್ರಕಟಣೆ ವಿವರಿಸಿದೆ.

## ಭದ್ರಾ ಬಲದಂಡೆ ಕಾಲುವೆಯಿಂದ ಕುಡಿಯುವ ನೀರಿನ ಪಂಪ್ ಯೋಜನೆ ವಿರುದ್ಧ ಬೃಹತ್ ಪ್ರತಿಭಟನೆ, ಆಕ್ರೋಶ

**ಹರಿಹರ :** ನೇರೆ ಜಿಲ್ಲೆಗಳಿಗೆ ಭದ್ರಾ ಬರದಂಡೆ ಕಾಲುವೆಯಿಂದ ಕುಡಿಯುವ ನೀರಿನ ನೆಪದಲ್ಲಿ ನೀರು ಪೂರೈಸಲು ಸರ್ಕಾರ ಕೈಗೊಂಡಿರುವ ಯೋಜನೆ ಅವೈಜ್ಞಾನಿಕವಾಗಿದೆ ಎಂದು ಮಾಜಿ ಶಾಸಕ ಎಚ್.ಎಸ್.ಶಿವಶಂಕರ್ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಭದ್ರಾ ಬಲದಂಡೆ ನಾಲೆಯ ತಳಭಾಗದಲ್ಲಿ ಬೃಹತ್ ಪೈಪ್‌ಗಳನ್ನು ಅಳವಡಿಸಿ ಚಿತ್ರದುರ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ನೀರು ಹರಿಸಲು ಸರ್ಕಾರ ಮುಂದಾಗಿರುವುದನ್ನು ವಿರೋಧಿಸಿ ಶುಕ್ರವಾರ ಕರ್ನಾಟಕ ಪ್ರದೇಶ ಜನತಾದಳ, ರೈತ ಸಂಘಗಳ ಮತ್ತು ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ, ಮುಖ್ಯಮಂತ್ರಿ ಹಾಗೂ ರಾಜ್ಯಪಾಲರಿಗೆ ತಹಸೀಲ್ದಾರ್ ಮೂಲಕ ಮನವಿ ಅರ್ಪಿಸಿದರು.

ಮನವಿ ಅರ್ಪಿಸಿ ಶಿವಶಂಕರ್ ಮಾತನಾಡಿ, ಭದ್ರಾ ಬಲದಂಡೆ ನಾಲೆಯಿಂದ ಹರಪನಹಳ್ಳಿ ಸೇರಿದಂತೆ ಹಲವು ತಾಲೂಕುಗಳ ರೈತರಿಗೆ ನೀರು




ಲಭ್ಯವಾಗದ ಸ್ಥಿತಿ ಇತ್ತಿಚೆಗೆ ಉಂಟಾಗಿದ್ದು, ಈಗ ಅಲ್ಲಿನ ತಳಭಾಗದಲ್ಲಿ ಪೈಪ್ ಅಳವಡಿಸುವ ಮೂಲಕ ಇನ್ನಷ್ಟು ರೈತರಿಗೆ ನಷ್ಟ ಉಂಟುಮಾಡಲು ಸರ್ಕಾರ ಮುಂದಾಗಿದೆ. ಇದರಿಂದ ದಾವಣಗೆರೆ ಜಿಲ್ಲೆಯ ಅನೇಕ ರೈತಭೂಮಿಗಳು ಬಯಲು ಸೀಮೆಯಾಗುವ ಸಾಧ್ಯತೆ ಉಂಟಾಗುತ್ತದೆ. ರೈತರು ಆತ್ಮಹತ್ಯೆ ಮಾಡುವ ಪರಿಸ್ಥಿತಿಯೂ ಉಂಟಾಗಬಹುದು, ಎಂದು ಎಚ್ಚರಿಸಿದರು. ನಾಲೆಯನ್ನು ಸೀಳಿ ಪೈಪು ಅಳವಡಿಸುವ ಬದಲು ಭದ್ರಾ ಜಲಾಶಯದ ಹಿನ್ನೀರಿನಲ್ಲಿ ಜಾಕ್‌ವೆಲ್ ನಿರ್ಮಿಸಿ ಪಂಪ್ ಮೂಲಕ ನೀರು ತಡೆಯಬೇಕು. ಮತ್ತು ಪಕ್ಕದ ಜಿಲ್ಲೆಗಳಿಗೆ ನೀರು ಹರಿಸಿ ಕೊಳ್ಳಬೇಕು ಇದಕ್ಕೆ ನಮ್ಮ ರೈತರ ಅಭ್ಯಂತರವೇನು ಇಲ್ಲ. ತಪ್ಪಿದರೆ ಸರ್ಕಾರದ ವಿರುದ್ಧ ನಿರಂತರ ಹೋರಾಟ ನಡೆಸಲಾಗುವುದು ಎಂದು ಹೇಳಿದರು. ಪ್ರತಿಭಟನಾ ಮೆರವಣಿಗೆಯು ನಗರದ ಪಕ್ಕೀರಸ್ವಾಮಿ ಮಠ ದಿಂದ ಪ್ರಾರಂಭವಾಗಿ ಶಿವಮೊಗ್ಗ ರಸ್ತೆ, ರಾಣಿ ಚನ್ನಮ್ಮ ವೃತ್ತ, ಮುಖ್ಯ ರಸ್ತೆಯ ಮೂಲಕ ಸಾಗುತ್ತಾ ಮಹಾತ್ಮಾ ಗಾಂಧಿ ವೃತ್ತಕ್ಕೆ ತಲುಪಿ, ಕೆಲವೊಂದು ರಸ್ತೆ ಕಡೆ ನಡೆಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ನಂತರ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ್ ಕೆ.ಎಂ.ಗುರುಬಸವರಾಜ್ ಪ್ರತಿಭಟನಾಕಾರರ ಮನವಿಯನ್ನು ಸ್ವೀಕರಿಸಿ ಸರ್ಕಾರ-ಕ್ಕೆ ಕಳಿಸುವ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಬಿ. ಚಿದಾನಂದಪ್ಪ, ನಗರಸಭಾ ಸದಸ್ಯರುಗಳಾದ ಪಿ.ಎನ್. ವಿರೂಪಾಕ್ಷಿ, ಬಿ ಅಲ್ತಾಫ್, ಮುಖಂಡರುಗಳಾದ ಜಿ. ನಂಜಣ್ಣ, ನೆಳ್ಳಿ ಬಸಣ್ಣ, ಅಂಗಡಿ ಬಸಟೆಪ್ಪ, ಕೆ.ಬಿ.ರೇವಣಸಿದ್ದಪ್ಪ, ಪಿ. ಶಿವಮೂರ್ತಿ, ಎಸ್. ಎಂ.ಅನಿಲ್, ಬಿ.ಎಂ. ಮಲ್ಲೇಶ್, ಬಿ. ಬಸವರಾಜ, ಎಂ. ಎಸ್. ಕಾಳಪ್ಪ, ದುರುಗೋಜಿ ಮೋಹನ್, ಶಿಲ್ಪಾಚಾರಿ, ಲಕ್ಷ್ಮಿ ಆಚಾರ್, ಮಹೇಶ್ ಮಲ್ಲಪ್ಪನವರ, ಪಿ. ಹನುಮಂತಪ್ಪ, ಬಿ.ಎಸ್. ರಂಗಪ್ಪ, ರೈತ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಕೆ.ವಿ. ರುದ್ರಮುನಿ, ತಾಲೂಕು ಉಪಾಧ್ಯಕ್ಷ ನಂದೀಶ, ಕೆ. ಶೇಖರಪ್ಪ, ಶಂಬಣ್ಣ, ರೈತರು ಪಾಲ್ಗೊಂಡಿದ್ದರು

# ಕಂಪ್ಯೂಟರೈಸ್ಡ್ ಅಕೌಂಟಿಂತಕುರಿತ ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ನ ಸಹಯೋಗದಲ್ಲಿ ನಡೆಸುತ್ತಿರುವ ರುಟ್ ಸೆಟ್ ಸಂಸ್ಥೆಯ ವತಿಯಿಂದ ಕಂಪ್ಯೂಟರೈಸ್ಡ್ ಅಕೌಂಟಿಂಗ್(ಜಿಎಟಿ ಟ್ಯಾಲಿ) ಕುರಿತ 38 ದಿನಗಳ ಉಚಿತ ತರಬೇತಿಯನ್ನು ಆಗಸ್ಟ್ 23 ರಿಂದ ಹಮ್ಮಿಕೊಳ್ಳಲಾಗಿದೆ.

ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದು. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರಬೇಕು.

ತರಬೇತಿ ಅವಧಿಯಲ್ಲಿ ಉಚಿತವಾಗಿ ಊಟ, ವಸತಿ ನೀಡಲಾಗುವುದು. ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಟ್ ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9481506564, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಟ್ ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.

# ಕೆಎಸ್ ಆರ್ ಟಿಸಿ ನೌಕರರ ಅನಿರ್ಧಿಷ್ಟಾವಧಿ ಮುಷ್ಕರ : ಸಹಾಯವಾಣಿ ಆರಂಭ

**ದಾವಣಗೆರೆ :** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕಾರ್ಮಿಕ ಸಂಘಟನೆಗಳು ಜಂಟಿಯಾಗಿ ಆಗಸ್ಟ್ 5 ರಿಂದ ಅನಿರ್ಧಿಷ್ಟಾವಧಿ ಮುಷ್ಕರ ಕರೆ ನೀಡಿರುವುದರಿಂದ ಜಿಲ್ಲಾ ವ್ಯಾಪ್ತಿಯ ಸರ್ವಜನಿಕರಿಗೆ ತುರ್ತು ಸಹಾಯಕ್ಕಾಗಿ ಸಹಾಯವಾಣಿ ಆರಂಭಿಸಲಾಗಿದೆ. ಕೆಎಸ್ ಆರ್‌ಟಿಸಿ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ 7022030175, ಪ್ರಾದೇಶಿಕ ಸಾರಿಗೆ ಕಚೇರಿ 08192-259848, ಪೊಲೀಸ್ ಕಚೇರಿ ನಿಯಂತ್ರಣ ಕೊಠಡಿ 9480803200 ಹಾಗೂ ಜಿಲ್ಲಾಧಿಕಾರಿಗಳ ಕಚೇರಿ 1077 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ದಾವಣಗೆರೆ:** ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜ್ ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 6 ರಂದು ಮಧ್ಯಾಹ್ನ 3 ಗಂಟೆಗೆ ಆಯೋಜಿಸಲಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ

**ದಾವಣಗೆರೆ:** ಸಿಪೆಟ್ ಮೈಸೂರು ಉದ್ಯೋಗಾಧಾರಿತ ಡಿಪ್ಲೊಮಾ ಕೋರ್ಸ್ ಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ 3 ವರ್ಷ, ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ 3 ವರ್ಷ ಕೋರ್ಸ್ ಗಳಿಗೆ ಪ್ರವೇಶ ಪಡೆಯಲು ಆನ್ ಲೈನ್ ಅರ್ಜಿ ಸಲ್ಲಿಸಲು ಆಗಸ್ಟ್ 14 ರವರೆಗೆ ಅವಧಿ ವಿಸ್ತರಣೆ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗೆ ಸಿಪೆಟ್, 437/ಂ, ಹೆಬ್ಬಾಳ್ ಇಂಡಸ್ಟ್ರೀರಿಯಲ್ ಏರಿಯಾ ಮೈಸೂರು-570016 ಫೋ.ನಂ: 0821-2510618,9480253024,9791431827 ವೆಬ್ ಸೈಟ್ ತಿತಿತಿ.ಛಿiಠಿಜಣ.ರಡಿತಿ.iಟ ವೀಕ್ಷಿಸಲು ಪ್ರಧಾನ ನಿರ್ದೇಶಕರು ತಿಳಿಸಿದ್ದಾರೆ.

# ಶ್ರೀ ಗಾಯಿತ್ರಿ ಪರಿವಾರದ ಆಶ್ರಯದಲ್ಲಿ ನೂಲ ಹುಣ್ಣಿಮೆ ಅಂಗವಾಗಿ ಆಗಸ್ಟ್ 9 ರಂದು ಸಾಮೂಹಿಕ ಶ್ರೀ ಗಾಯತ್ರಿ ಪೂಜೆ ಹಾಗೂ ಉಪಾಸನೆ ಕಾರ್ಯಕ್ರಮ



**ದಾವಣಗೆರೆ:** ನಗರದ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದಿಂದ ಪ್ರತೀ ತಿಂಗಳ ಹುಣ್ಣಿಮೆಯೆಂದು ನಡೆಸುವ ಸಾಮೂಹಿಕ ಶ್ರೀ ಗಾಯತ್ರಿ ಪೂಜೆ, ಉಪಾಸನೆ, ನೂಲು ಹುಣ್ಣಿಮೆ ಅಂಗವಾಗಿ ದಿನಾಂಕ 09-08-2025 ರಂದು ಶನಿವಾರ ಬೆಳಿಗ್ಗೆ 7-00ಕ್ಕೆ ನಡೆಯಲಿದೆ ಎಂದು ಶ್ರೀ ಗಾಯಿತ್ರಿ ಪರಿವಾರದ ಖಜಾಂಚಿ ಪುರುಷೋತ್ತಮ ಪಟೇಲ್ ತಿಳಿಸಿದ್ದಾರೆ

ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದಲ್ಲಿ ನಡೆಯಲಿರುವ ಈ ಅಪ್ಪಟ ಆಧ್ಯಾತ್ಮ ಸಮಾರಂಭದ ಈ ಬಾರಿಯ ಪೂಜಾ ಸೇವಾಕರ್ತರು ಶ್ರೀ ಗಾಯಿತ್ರಿ ಪರಿವಾರದ ಗೌರವ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್ ಮತ್ತು ಕುಟುಂಬದವರು ಕಳೆದ ಇಪ್ಪತ್ತೈದು ವರ್ಷಗಳಿಂದಲೂ ನಿರಂತರವಾಗಿ ಪ್ರತೀ ಪೂರ್ಣಿಮೆ ಯಂದು ನಡೆಯುವ ಈ ಧಾರ್ಮಿಕ ಪ್ರಕ್ರಿಯೆಯಲ್ಲಿ ಆಸಕ್ತ ಸಾರ್ವಜನಿಕರು ಯಾವುದೇ ಜಾತಿ, ಮತ, ವರ್ಣ, ಲಿಂಗ ಬೇಧವಿಲ್ಲದೇ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ.

### ಕೆಆರ್‌ಎಸ್ ನಿರ್ಮಾಣ: 18ನೇ ಶತಮಾನದಲ್ಲೇ ಯತ್ನ ನಡೆದಿತ್ತು

# ಪ್ರಯತ್ನಿಸಿದ್ದು ಟಿಪ್ಪು, ನಿರ್ಮಿಸಿದ್ದು ನಾಲ್ವಡಿ!

**ಶ್ರೀರಂಗಪಟ್ಟಣ (ಮಂಡ್ಯ ಜಿಲ್ಲೆ):** ಕನ್ನಂಬಾಡಿ ಗ್ರಾಮದ ಬಳಿ ಕಾವೇರಿ ನದಿಗೆ ಅಣೆಕಟ್ಟೆ ಕಟ್ಟಲು ಟಿಪ್ಪು ಸುಲ್ತಾನ್ 18ನೇ ಶತಮಾನದ ಅಂತ್ಯದಲ್ಲಿ ಪ್ರಯತ್ನಿಸಿದ್ದರಾದರೂ ಅದೇ ಸ್ಥಳದಲ್ಲಿ ಅಣೆಕಟ್ಟೆ ನಿರ್ಮಿಸಿ ದವರು ನಾಲ್ವಡಿ ಕೃಷ್ಣರಾಜ ಒಡೆಯರ್.

ಕೃಷ್ಣರಾಜ ಸಾಗರ ಅಣೆಕಟ್ಟೆಯ ದಕ್ಷಿಣ ದ್ವಾರದ ಪೂರ್ವ ಭಾಗದ ಗೋಡೆಯ ಮೇಲಿರುವ ಫಲಕಗಳ ಪ್ರಕಾರ ಟಿಪ್ಪು 1794ರಲ್ಲಿ, 70 ಅಡಿ ಎತ್ತರದ ಅಣೆಕಟ್ಟೆ ನಿರ್ಮಿಸಲು ಅಸ್ತಿಭಾರ ಹಾಕಿಸಿದ್ದರು. ಇಲ್ಲಿರುವ ಪರ್ಷಿಯನ್, ಇಂಗ್ಲಿಷ್ ಮತ್ತು ಕನ್ನಡ ಭಾಷೆಯ ಶಿಲಾ ಫಲಕಗಳಲ್ಲಿ ಈ ಉಲ್ಲೇಖಗಳಿವೆ.

'ಚರಿತ್ರೆಯ ಪುಟಗಳಲ್ಲಿರುವ ಲಿಖಿತ ಮಾಹಿತಿಯನ್ನು ಆಧರಿಸಿ ಈ ಶಿಲಾ ಫಲಕ ಕೆತ್ತಿರುವ ಸಾಧ್ಯತೆ ಇದೆ' ಎಂಬುದು ಇತಿಹಾಸಕಾರ ಪ್ರೊ.ಪಿ.ವಿ. ನಂಜರಾಜ ಅರಸು ಅವರ ಮಾತು,

'ಟಿಪ್ಪು ಕಾಲದಲ್ಲಿ ಕನ್ನಂಬಾಡಿ ಬಳಿ ಅಣೆಕಟ್ಟೆ ನಿರ್ಮಾಣ ಕಾರ್ಯ ಆರಂಭವಾಗಿತ್ತು' ಎನ್ನಲು ಫಲಕ ಹೊರತುಪಡಿಸಿ ಇತರ ಯಾವುದೇ ಕುರುಹು ಸಿಕ್ಕಿಲ್ಲ.





ಅಣೆಕಟ್ಟೆ ದಕ್ಷಿಣ ದ್ವಾರದಲ್ಲಿ ಇರುವ ಟಿಪ್ಪು ಸುಲ್ತಾನ್ ಚಿತ್ರಸಹಿತ ಫಲಕ (ಎಡಚಿತ್ರ). ಕೆಆರ್‌ಎಸ್ ಬೃಂದಾವನದ ದಕ್ಷಿಣದಲ್ಲಿ, 1940ರ ನಂತರ ಸ್ಥಾಪಿಸಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪುತ್ಥಳಿ

ವಿಶೇಷವೆಂದರೆ, ಅಣೆಕಟ್ಟೆಗೆ ಹೊಂದಿಕೊಂಡ ಬೃಂದಾವನದ ದಕ್ಷಿಣ ತುದಿಯಲ್ಲಿ, 1940ರ ನಂತರ ಸ್ಥಾಪಿಸಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಪುತ್ಥಳಿಯ ಪೀಠದಲ್ಲಿಯೂ 'ಪರ್ಷಿಯನ್' ಭಾಷೆಯ ಫಲಕ ಹಾಕಲಾಗಿದೆ. 'ಈ ಫಲಕ ಹೇಗೆ ಬಂತು' ಎಂಬ ಪ್ರಶ್ನೆಗೆ ಅಧಿಕಾರಿಗಳ ಬಳಿ ಉತ್ತರವಿಲ್ಲ.

ಸರ್ ಎಂ.ವಿ.ನೀಲನಕ್ಷೆ: 1799ರಲ್ಲಿ ಟಿಪ್ಪು ಸುಲ್ತಾನ್ ಅಂತ್ಯಗೊಂಡ 112 ವರ್ಷದ ಬಳಿಕ, 1911ರಲ್ಲಿ ಟಿಪ್ಪು ಅಡಿಗಲ್ಲು ಹಾಕಿದ್ದರು ಎನ್ನಲಾದ ಸ್ಥಳದ ಸಮೀಪವೇನಾಲ್ವಡಿ ಅವರ ಕಾಲದಲ್ಲಿ ಕಾವೇರಿ ನದಿಗೆ ಕಟ್ಟೆ ಕಟ್ಟುವ ಕಾರ್ಯ ಆರಂಭವಾಯಿತು.ಮೈಸೂರು ಸಂಸ್ಥಾನದ ಮುಖ್ಯ ಎಂಜಿನಿಯರ್

## ಬೃಹತ್ ಫಲಕದಲ್ಲಿ ಏನಿದೆ...?

'ಪೈಗಂಬರ್ ಮಹಮ್ಮದರ ಜನ್ಮದಿನದಿಂದ ಪ್ರಾರಂಭವಾದ ಸೌರಮಾನ ಶಕೆ ಸಾವಿರದ ಇನ್ನೂರ ಇಪ್ಪತ್ತೊಂದನೆ ಸಂವತ್ಸರವಾದ, ಷಾದಾಬ್ ಶುಭವರ್ಷದ ತಕಿ ಮಾಸದ ಇಪ್ಪತ್ತೊಂದನೆ ತೇದಿಯಾದ ಶುಭ ದಿವಸ...' ಎಂದು ಫಲಕದ ಸಾಲು ಆರಂಭವಾಗುತ್ತದೆ.

'ಭಗವಂತನ ಛಾಯಾ ಸ್ವರೂಪರಾದ ಹಜರತ್ ಟಿಪ್ಪು ಸುಲ್ತಾನರಾದ ನಾವು, ರಾಜಧಾನಿಗೆ ಪಶ್ಚಿಮ ದಿಕ್ಕಿನಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಚಿರಸ್ಥಾಯಿಯಾದ ಅಣೆಕಟ್ಟೆಯನ್ನು ಕಟ್ಟಿಸಲು ಶಂಕುಸ್ಥಾಪನೆ ಮಾಡಿಸಿದ್ದೇವೆ' ಎಂದೂ ಬರೆಯಲಾಗಿದೆ.

**ಈಗ ಅಣೆಕಟ್ಟೆಯ ದಕ್ಷಿಣ ದ್ವಾರದಲ್ಲಿರುವ ಟಿಪ್ಪು ಸುಲ್ತಾನ್ ಭಾವಚಿತ್ರ ಸಹಿತ ಫಲಕವನ್ನು ಯಾರು, ಯಾವಾಗ ಹಾಕಿಸಿದ್ದಾರೆ ಎಂಬ ಮಾಹಿತಿ ಲಭ್ಯವಿಲ್ಲ**

**ಇ.ಇ., ಕಾವೇರಿ ನೀರಾವರಿ ನಿಗಮ**

ಸರ್ ಎಂ.ವಿಶ್ವೇಶ್ವರಯ್ಯ 1910ರಲ್ಲಿ ನೀಲನಕ್ಷೆ ರೂಪಿಸಿದ್ದರು.2.53 ಕೋಟಿವೆಚ್ಚ ಯೋಜನೆಗೆ 1911ರ ಅಕ್ಟೋಬರ್ 12ರಂದು ಮೈಸೂರು ಸರ್ಕಾರ ಅಧಿಕೃತ ಆದೇಶವನ್ನೂ (ಸರ್ಕಾರದ ಆದೇಶ ಸಂಖ್ಯೆ: ಸಿ.-13198490) ಹೊರಡಿಸಿತು.

ಕೊರತೆ ಉಂಟಾದಾಗ, ನಾಲ್ವಡಿ ಅವರು ಖಾಸಗಿ ಭಂಡಾರದಲ್ಲಿದ್ದ 3 ಮೂಟೆ ಚಿನ್ನಾಭರಣ ಮತ್ತು ವಜ್ರ ವೈಡೂರ್ಯಗಳನ್ನು ಮುಂಬೈ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ, ಅದರಿಂದ ಬಂದ ಹಣವನ್ನು ಕೊಟ್ಟರು' ಎಂಬ ಅಂಶ ಇತಿಹಾಸಕಾರ ಪ್ರೊ.ಪಿ.ವಿ. ನಂಜರಾಜ ಅರಸು ಅವರ 'ನಾನು' ಕನ್ನಂಬಾಡಿ ಕಟ್ಟೆ' ಪುಸ್ತಕ ಸೇರಿದಂತೆ ವಿವಿಧ ಕೃತಿಗಳಲ್ಲಿ ದಾಖಲಾಗಿದೆ.

19150 65 ಎತ್ತರದ ಅಣೆಕಟ್ಟೆ ನಿರ್ಮಾಣವಾಗಿತ್ತು. 1931ರ ಹೊತ್ತಿಗೆ 130 ಅಡಿ ಎತ್ತರದ (ನೀರು ನಿಲ್ಲುವ ಎತ್ತರ-124.80 ಅಡಿ) ಅಣೆಕಟ್ಟೆ ನಿರ್ಮಾಣ ಕಾರ್ಯ ಪೂರ್ಣಗೊಂಡಿತು

# ರಂಗಭೂಮಿ ನಾಟಕಗಳು ಸಮಾಜ ಪರಿವರ್ತನೆಗೆ ನಾಂದಿ

**ಚಿಕ್ಕಮಗಳೂರು:** ರಂಗಭೂಮಿ ನಾಟಕಗಳು ಸಮಾಜ ಪರಿವರ್ತನೆಗೆ ನಾಂದಿಯಾಗಿದ್ದು, ಪ್ರತಿಯೊಬ್ಬರೂ ನಾಟಕ ವೀಕ್ಷಿಸುವ ಮೂಲಕ ಕಲೆಯನ್ನು ಪ್ರೋತ್ಸಾಹಿಸಬೇಕೆಂದು ಬಸವತತ್ವ ಪೀಠದ ಪೀಠಾಧ್ಯಕ್ಷಡಾ. ಬಸವ ಮರುಳಸಿದ್ದ ಸ್ವಾಮೀಜಿ ಹೇಳಿದರು.



ಅವರು ಕುವೆಂಪು ಕಲಾಮಂದಿರದಲ್ಲಿ ಬಸವತತ್ವ ಪೀಠ, ಕಲಾ ಸೇವಾಸಂಘ, ಆಶಾಕಿರಣಚಾರಿಟಬಲ್ ಟ್ರಸ್ಟ್, ಲಯನ್ ಸಂಸ್ಥೆ, ಸುಗಮ ಸಂಗೀತ ಗಂಗಾ, ಎಐಟಿ, ಆಶ್ರಯ ಫೌಂಡೇಷನ್, ಕಲ್ಕಟ್ಟೆ ಪುಸ್ತಕದ ಮನೆ, ಜೆಸಿ ಸಂಸ್ಥೆ, ಪೂರ್ವಿ ಸುಗಮಸಂಗೀತಅಕಾಡೆಮಿ, ಶಿವಮೊಗ್ಗದ ಸಹ್ಯಾದ್ರಿರಂಗಭೂಮಿ ಇವರುಗಳ ಸಂಯುಕ್ತಾಶ್ರಯದಲ್ಲಿಏರ್ಪಡಿಸ ಲಾಗಿದ್ದ 'ಲಕ್ಷ್ಮಣತುಕಾರಾಂ ಗೋಲೆ' ನಾಟಕ ಪ್ರದರ್ಶನದ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ದೂರದರ್ಶನ

ಮನುಷ್ಯನನ್ನುಚಿಕ್ಕದಾಗಿ ತೋರಿಸಿದರೆ, ಸಿನಿಮಾದೊಡ್ಡದಾಗಿತೋರಿಸುತ್ತದೆ. ರಂಗಭೂಮಿ ಮಾತ್ರ ಮನುಷ್ಯನನ್ನು ಮನುಷ್ಯನಾಗಿ ಬಿಂಬಿಸುತ್ತದೆಎಂದು ವಿಶ್ಲೇಷಿಸಿದರು.

ವಾಸ್ತವ ಬದುಕಿನಲ್ಲಿರಂಗಭೂಮಿ ಮನುಷ್ಯನನ್ನು ಮುನುಷ್ಯನಾಗಿತೋರಿಸುವ ಕಲಾ ಪ್ರಕಾರವೇ ನಾಟಕಗಳು ಎಂದಅವರು, ಪಾತಕಿ ಲೋಕದಅಪರಾಧದಿಂದ ಹೊರಬಂದುಗಾಂಧೀಜಿಯವರ ತತ್ವಾದರ್ಶಗಳನ್ನು ಮೈಗೂಡಿಸಿಕೊಂಡ ಲಕ್ಷ್ಮಣ್‌ತುಕಾರಾಂ ಗೋಲೆ ನಾಟಕಅವರಜೀವ ನಚರಿತ್ರೆಯಾಗಿದೆಎಂದು ಹೇಳಿದರು.

ಪ್ರತಿಯೊಬ್ಬ ಮನುಷ್ಯನಿಗೆ ಪರಿವರ್ತನೆಗೆಒಂದು ಒಳ್ಳೆಯ ಅವಕಾಶವಿದೆ. ಪ್ರತಿ ಪಾಪಿಗೂ ಒಂದು ಭವಿಷ್ಯಇದೆ. ಅದರಂತೆ ಒಳ್ಳೆಯ ಭವಿಷ್ಯರೂಪಿಸುವ ನಾಟಕಇದಾಗಿದ್ದು, ಎಲ್ಲರೂ ವೀಕ್ಷಿಸುವ ಮೂಲಕ ಪ್ರೋತ್ಸಾಹಿಸಬೇಕಾದಅಗತ್ಯಇದೆಎಂದರು.

ಮುಂದಿನ ದಿನಗಳಲ್ಲಿ ಈ ರೀತಿಯ ಸಾಮಾಜಿಕ ಬದಲಾವಣೆಯ ನಾಟಕಗಳನ್ನು ಹೆಚ್ಚು ಹೆಚ್ಚು ಪ್ರದರ್ಶನದ ಮೂಲಕ ಜನರ ಮನಃಪರಿವರ್ತನೆಗೆ ನಾಂದಿಯಾಗಲಿ ಎಂದು ಶುಭ ಹಾರೈಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮಾತನಾಡಿ, ಮೋಹನ್‌ದಾಸ್‌ರನ್ನು ಮಹಾತ್ಮಾಗಾಂಧಿಯಾಗಿ ಪರಿವರ್ತನೆ ಮಾಡಿದ್ದುಅವರುಚಿಕ್ಕಂದಿನಲ್ಲಿ ಹರಿಶ್ಚಂದ್ರ ನಾಟಕವನ್ನು ವೀಕ್ಷಿಸಿದ್ದರು ಎಂದು ಹೇಳಿದರು.

ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವಇಂತಹ ಸಾಮಾಜಿಕ ಪರಿವರ್ತನೆಯ ನಾಟಕಗಳ ಪ್ರದರ್ಶನಜನರಲ್ಲಿ ಭಾವನಾತ್ಮಕ ವಿಚಾರಧಾರೆಗಳು ನೆಲೆಸಲು ಪೂರಕಎಂದರು.

ಪರಿವರ್ತನೆದಾರಿಯಲ್ಲಿ ಸಾಗಬೇಕಾದರ 'ಎಲ್ಲರಿಗೂಅವಕಾಶವಿದೆ'ಎಂಬುದನ್ನುಗಾಂಧೀಜಿ ಮನಗಂಡಿದ್ದರು. ಇಂತಹ ಅವಕಾಶಗಳಿಗೆ ಜಿಲ್ಲೆಯಲ್ಲಿ ವಿಫುಲ ಅವಕಾಶಗಳಿದ್ದು, ರಂಗಭೂಮಿ ನಾಟಕಗಳ ಪ್ರದರ್ಶನ ಯಶಸ್ವಿಯಾಗಲಿ ಎಂದು ಹೇಳಿದರು.

ಖ್ಯಾತ ಮಕ್ಕಳ ತಜ್ಞಡಾ. ಜಿ.ಪಿ. ಕೃಷ್ಣೇಗೌಡ ಮಾತನಾಡಿ, ಮನುಷ್ಯನಲ್ಲಿ ನಿಜವಾದ ಕಲೆ ಉಳಿದಿದೆ ಅಂದರೆಅದುರಂಗಭೂಮಿಕಲಾವಿದರಲ್ಲಿ ಮಾತ್ರಕಾಣಲು ಸಾಧ್ಯಎಂದು ತಿಳಿಸಿದರು.

ಆರ್ಕೆಸ್ಟ್ರಾ, ಸಿನಿಮಾ, ದೂರದರ್ಶನ, ಮೊಬೈಲ್ ಮುಂತಾದವುಗಳ ಗೀಳಿಗೆ ಬಿದ್ದು ವೀಕ್ಷಣೆಯಲ್ಲಿಜನತೆ ಮುಂದಾಗಿ ಹೆಚ್ಚು ಆದ್ಯತೆ ನೀಡುತ್ತಿದ್ದಾರೆ. ಈ ರೀತಿಯ ಸಾಮಾಜಿಕ ಪರಿವರ್ತನೆಯಉತ್ತಮ ನಾಟಕ ಪ್ರದರ್ಶನ ನೋಡಲು ಪ್ರೇಕ್ಷಕರ ಸಂಖ್ಯೆ ಇಳಿಮುಖವಾಗಿರುವುದು ವಿಷಾಧನೀಯಎಂದರು.

ತುಕಾರಾಂರವರುಗಾಂಧೀಜಿಯವರ ಆದರ್ಶಗಳನ್ನು ಮೈಗೂಡಿಸಿಕೊಂಡು ಸಮಾಜ ಪರಿವರ್ತನೆಯ ನಾಟಕವನ್ನು ನಿರ್ದೇಶಿಸಿದ್ದಾರೆ. ಮಹಾರಾಷ್ಟ್ರ ಸರ್ಕಾರಇವರಿಗೆ ಪ್ರಶಸ್ತಿ ನೀಡಿ ಗೌರವಿಸಿದ್ದು, ಇಲ್ಲಿಗೂ ಬರುವಂತೆ ಲಕ್ಷ್ಮಣಅವರಿಗೆಆಹ್ವಾನ ನೀಡಿರುವುದಾಗಿ ಹೇಳಿದರು.

ಈ ಸಂದರ್ಭದಲ್ಲಿಯುವಜನ ಸೇವಾ ಮತ್ತುಕ್ರೀಡಾ ಇಲಾಖೆ ಉಪನಿರ್ದೇಶಕರಾದ ಮಂಜುಳ ಹುಲ್ಲಳ್ಳಿ, ಎಐಟಿರಿಜಿಸ್ಟ್ರಾರ್‌ಡಾ. ಸಿ.ಕೆ ಸುಬ್ರಾಯ, ಪ್ರಾಂಶುಪಾಲ ಡಾ. ಸಿ.ಟಿ ಜಯದೇವ್, ಕಾಂತೇಶ್‌ಕದರ ಮಂಡಲಗಿ, ಲಯನ್ಸ್‌ಅಧ್ಯಕ್ಷಕುಮಾರ್ ಸಿ.ಎನ್, ಗಾಯಕಎಂ. ಎಸ್ ಸುಧೀರ್‌ಮತ್ತಿತರರು ಉಪಸ್ಥಿತರಿದ್ದರು. ಕೊನೆಯಲ್ಲಿ ಲಯನ್ಸ್ ಪ್ರಧಾನ ಕಾರ್ಯದರ್ಶಿ ಗೋಪಿಕೃಷ್ಣ ವಂದಿಸಿದರು.

# ಸಹ್ಯಾದ್ರಿ ನಾರಾಯಣ ಆಸ್ಪತ್ರೆ ವೈದ್ಯರ ಸಾಧನೆ

## ಹಲವು ಅಡೆತಡೆಗಳ ನಡುವೆ 27 ವಾರಗಳಲ್ಲಿ ಜನಿಸಿದ ಅವಳಿಗಳ ಜೀವ ಉಳಿಸಿದ ವೈದ್ಯರು

**ಶಿವಮೊಗ್ಗ:** ಮಧ್ಯ ಕರ್ನಾಟಕ ಹಾಗೂ ಮಲೆನಾಡಿನಲ್ಲಿ ಉತ್ತಮ ವೈದ್ಯಕೀಯ ಚಿಕಿತ್ಸೆಗೆ ಹೆಸರಾದ ಸಹ್ಯಾದ್ರಿ ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯರು, ಕೇವಲ 27 ವಾರಗಳ ಗರ್ಭಾವಸ್ಥೆಯಲ್ಲಿ, ತಲಾ 900 ಗ್ರಾಂ ಗಿಂತ ಕಡಿಮೆ ತೂಕವಿದ್ದ ಅವಧಿಗೆ ಮುಂಚಿತವಾಗಿ ಜನಿಸಿದ ಅವಳಿ ಶಿಶುಗಳ ಜೀವವನ್ನು ಯಶಸ್ವಿಯಾಗಿ ಉಳಿಸಿದ್ದಾರೆ.

ಒಂದು ಮಗು 800 ಗ್ರಾಂ ಮತ್ತು ಇನ್ನೊಂದು ಮಗು 850 ಗ್ರಾಂ ತೂಕವಿದ್ದು, 10 ವರ್ಷಗಳಿಗೂ ಹೆಚ್ಚು ಕಾಲ ಬಂಜೆತನದಿಂದ ಬಳಲುತ್ತಿದ್ದ ಮಹಿಳೆಯೊಬ್ಬರಿಗೆ ಈ ಅವಳಿ ಮಕ್ಕಳು ಜನಿಸಿದರು.

ಮೂರು ವರ್ಷಗಳ ಬಂಜೆತನ ಚಿಕಿತ್ಸೆಯ ನಂತರ, ಅವರು ಗರ್ಭ ಧರಿಸಿದ್ದರು. ಆದರೆ, ಹೆರಿಗೆ ಪ್ರಾರಂಭವಾಗುವ ಮೊದಲೇ ಭ್ರೂಣವನ್ನು ಆವರಿಸಿರುವ ಪೊರೆಗಳು ಒಡೆದು, ಆಮ್ನಿಯೋಟಿಕ್ ದ್ರಾವಣ ಸೋರಿಕೆಯಾದ ಕಾರಣ, ಅವರಿಗೆ ನಿರೀಕ್ಷೆಗಿಂತ ಮುಂಚಿತವಾಗಿಯೇ ಹೆರಿಗೆ ಮಾಡಿಸಬೇಕಾಯಿತು.

ಸ್ತ್ರೀರೋಗ ತಜ್ಞರಾದ ಡಾ. ರಾಘವೇಂದ್ರ ಭಟ್ ಅವರು ಈ ಹೆಚ್ಚು ಅಪಾಯಕಾರಿ ಗರ್ಭಧಾರಣೆಯನ್ನು (ಊಖಿಖಿ ಡಿಇ ಠಿಡಿಜರಟಿಚಿಟಿಛಿಥಿ) ಅತ್ಯಂತ ಎಚ್ಚರಿಕೆಯಿಂದ ನಿರ್ವಹಿಸಿದರು.

ಭ್ರೂಣದ ಶ್ವಾಸಕೋಶದ ಬೆಳವಣಿಗೆಗೆ ಸಹಾಯ ಮಾಡಲು ತಾಯಿಗೆ ಸಮಯಕ್ಕೆ



ಡಾ. ಅಪ್ರಮೇಯ ಎಚ್.ಎಸ್. ಮತ್ತು ಡಾ. ಭರತ್ ವಿ. ನಾಡಿಗ್ ನೇತೃತ್ವದ ಮಕ್ಕಳ ವೈದ್ಯಕೀಯ ತಂಡ ಯಶಸ್ವಿ ಚಿಕಿತ್ಸೆ ನಂತರ ಮಕ್ಕಳೊಂದಿಗೆ

ಸರಿಯಾಗಿ ಸ್ಟೀರಾಯ್ಡ್ ಚುಚ್ಚುಮದ್ದುಗಳನ್ನು ಮತ್ತು ಸೋಂಕುಗಳನ್ನು ತಡೆಯಲು ಖಗಿ ಆಂಟಿಬಯಾಟಿಕ್‌ಗಳನ್ನು ನೀಡಲಾಯಿತು. ಈ ನಿರ್ಣಾಯಕ ಹಂತಗಳು ಶಿಶುಗಳ ಬದುಕುಳಿಯುವಿಕೆಗೆ ಅಪಾರ ಸಹಾಯ ಮಾಡಿದವು.

ಹೆರಿಗೆಯ ನಂತರ, ಎರಡೂ ನವಜಾತ ಶಿಶುಗಳು ಉಸಿರಾಟದ ತೊಂದರೆಗಳು, ಕಾಮಾಲೆ, ತೀವ್ರ ರಕ್ತದ ಸೋಂಕುಗಳು ಮತ್ತು ರಕ್ತಹೀನತೆ ಸೇರಿದಂತೆ ಜೀವಕ್ಕೆ ಅಪಾಯಕಾರಿಯಾದ ಸವಾಲುಗಳನ್ನು ಎದುರಿಸಿದವು. ಇವೆಲ್ಲವೂ ಅತಿ ಅವಧಿಗೆ ಮುಂಚಿತವಾಗಿ ಜನಿಸಿದ ಶಿಶುಗಳಲ್ಲಿ ಸಾಮಾನ್ಯವಾಗಿ ಕಂಡುಬಂದರೂ, ಬಹಳ ಅಪಾಯಕಾರಿ ಪರಿಸ್ಥಿತಿಗಳಾಗಿವೆ.

ಈ ಎಲ್ಲಾ ಅಡೆತಡೆಗಳ ನಡುವೆಯೂ, ಡಾ. ಅಪ್ರಮೇಯ ಎಚ್.ಎಸ್. ಮತ್ತು ಡಾ. ಭರತ್ ವಿ. ನಾಡಿಗ್ ನೇತೃತ್ವದ ಮಕ್ಕಳ ವೈದ್ಯಕೀಯ ತಂಡವು ಈ ಶಿಶುಗಳ ಜೀವ ಉಳಿಸುವಲ್ಲಿ ಯಶಸ್ವಿಯಾಯಿತು.

ಶಿಶುಗಳನ್ನು ಆಸ್ಪತ್ರೆಯ ಸುಧಾರಿತ ಲೆವೆಲ್-3 ನಿಯೋನಾಟಲ್ ಇಂಟೆನ್ಸಿವ್ ಕೇರ್ ಯೂನಿಟ್ (ಓಖಿಅಗ) ನಲ್ಲಿ ಇರಿಸಲಾಯಿತು, ಅಲ್ಲಿ ಅವರಿಗೆ ನಿರಂತರ ಮೇಲ್ವಿಚಾರಣೆ ಮತ್ತು ವಿಶೇಷ ಆರೈಕೆ ನೀಡಲಾಯಿತು.

# ಕಲಿಕೆಗೆ ಹೆಚ್ಚು ಒತ್ತು ನೀಡಲು ಸೂಚನೆ

**ಹಾಸನ:** ಜಿಲ್ಲೆಯಲ್ಲಿ ಎಸ್.ಎಸ್. ಎಲ್.ಸಿ.ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಲು ಮಕ್ಕಳನ್ನು ಸಜ್ಜು ಗೊಳಿಸುವ ನಿಟ್ಟಿನಲ್ಲಿ ಡಿಸೆಂಬರ್ ಅಂತ್ಯದೊಳಗೆ ಪಠ್ಯ ಕ್ರಮಗಳನ್ನು ಪೂರ್ಣಗೊಳಿಸಿ ಕಲಿಕೆ ಕಡೆಗೆ ಹೆಚ್ಚು ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಪ್ರೈಡೇ ಪ್ರೆಂಡ್ ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕರು ಹಾಗೂ ಮಕ್ಕಳೊಂದಿಗೆ ವಿಡಿಯೋ ಸಂವಾದದ ಮೂಲಕ ಮಾತನಾಡಿದ ಅವರು ಮಕ್ಕಳ ಉತ್ತಮ ಭವಿಷ್ಯಕ್ಕೆ ಈ ಕಾರ್ಯಕ್ರಮ ಅಡಿಗಲ್ಲು ಎಂದು ತಿಳಿಸಿದರು.ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆ ಆಂದೋಲನ ನಡೆಸುವಂತೆ ನಿರ್ದೇಶನ ನೀಡಿದರಲ್ಲದೆ,

ಪ್ರತಿ ಶಾಲೆಯಲ್ಲಿ ಪೋಸ್ಟ್ ರ್ ಗಳನ್ನು ಅಳವಡಿಸಿ ಜೊತೆಗೆ ಮಕ್ಕಳಿಂದ ಕಿರು ನಾಟಕಗಳನ್ನು ಮಾಡಿಸುವುದು, ಚಿತ್ರಕಲಾ ಸ್ಪರ್ಧೆ ಏರ್ಪಡಿಸುವಂತೆ ಸೂಚಿಸಿದರು.

ಪಠ್ಯದ ಜೊತೆಗೆ ವಿವಿಧ ವಿಷಯಗಳ ಬಗ್ಗೆ ಮಕ್ಕಳಿಗೆ ತಿಳುವಳಿಕೆ ನೀಡಬೇಕು ಎಂದ ಅವರು ಮಕ್ಕಳ ಹಕ್ಕುಗಳ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಾಕ್ಷಾಯಿಣಿ ಅವರು ಮಾತನಾಡಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಳವಾಗುತ್ತಿದೆ ಇದನ್ನು ಗಂಭೀರವಾಗಿ ಪರಿಗಣಿಸಿ ತಡೆಗಟ್ಟಲು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಚಂದ್ರಶೇಖರ್ ಹಾಗೂ ಮತ್ತಿತರರು ಸಭೆಯಲ್ಲಿ ಹಾಜರಿದ್ದರು.

# 4.73 ಕೋಟಿಯ ಮಾದಕ ವಸ್ತು ವಶ

**ಮುಂಬೈ (ಪಿಟಿಐ):** ಇಲ್ಲಿನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಾಣಿಜ್ಯ ತೆರಿಗೆ ವಿಭಾಗದ ಅಧಿಕಾರಿಗಳು ಭಾನುವಾರ ಪ್ರಯಾಣಿಕರೊಬ್ಬರನ್ನು ಬಂಧಿಸಿ 14.73 ಕೋಟಿ ಮೌಲ್ಯದ 15 ಕೆಜಿ ತೂಕದ ಮಾದಕ ವಸ್ತು ಗಾಂಜಾವನ್ನು (ಮರಿಜುವಾನ) ವಶಕ್ಕೆ ಪಡೆದಿದ್ದಾರೆ.

ಬ್ಯಾಂಕಾಕ್‌ನಿಂದ ಛತ್ರಪತಿ ಶಿವಾಜಿ ಮಹಾರಾಜ ವಿಮಾನ ನಿಲ್ದಾಣಕ್ಕೆ ಬಂದಿಳಿದ ಪ್ರಯಾಣಿಕನ ಬಳಿ 'ವಿದೇಶಾಂಗ ವ್ಯವಹಾರಗಳ ಇಲಾಖೆಯ ಸರಕು' ಎಂಬ ಪಟ್ಟಿ ಹಾಕಿದ್ದ ಪೊಟ್ಟಣ ಪತ್ತೆಯಾಗಿತ್ತು. ತಪಾಸಣೆ ಮಾಡಿದಾಗ 14ಕೆ.ಜಿ. ಗೂ ಹೆಚ್ಚು ಮರಿಜುವಾನ ದೊರಕಿತ್ತು. ರಾಷ್ಟ್ರೀಯ ಸುರಕ್ಷತೆಗೆ ಸಂಬಂಧಿಸಿದ ರಹಸ್ಯರಾಜತಾಂತ್ರಿಕ ಸರಕು ಎಂದು ಸುಳ್ಳು ಹೇಳಿ ಈತ ಮಾದಕ ವಸ್ತು ಸಾಗಣೆ ಮಾಡುತ್ತಿದ್ದ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಆ.10ರಂದು ಪ್ರಧಾನಿ ಮೋದಿ ರೋಡ್ ಶೋ

**ಬೆಂಗಳೂರು:** ಮೆಟ್ರೋ ಹಳದಿ ಮಾರ್ಗ ಉದ್ಘಾಟನೆಗಾಗಿ ಆ.10ರಂದು ಬೆಂಗಳೂರಿಗೆ ಆಗಮಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ವಂದೇ ಭಾರತ್ ರೈಲು ಉದ್ಘಾಟನೆ ಜತೆಗೆ ಮೆಟ್ರೋ ಫೇಸ್ 3ಎ ಶಂಕು ಸ್ಥಾಪನೆಯನ್ನೂ ನೆರವೇರಿಸಲಿದ್ದಾರೆ. ಜಯನಗರದ ಚಂದ್ರಗುಪ್ತಮೌರ್ಯ (ಶಾಲಿನಿ) ಮೈದಾನ ದಲ್ಲಿ ಬಿಜೆಪಿ ಕಾರ್ಯ ಕರ್ತರ ಸಮಾ ವೇಶ ನಡೆಸಲು ಉದ್ದೇಶಿ ಸಲಾಗಿದೆ. ಬೊಮ್ಮ ಸಂದ್ರದಲ್ಲಿ ಮೆಟ್ರೋ ಉದ್ಘಾಟನೆ ನೆರವೇರಿಸಿದ ಬಳಿಕ ರಾಗಿಗುಡ್ಡಕ್ಕೆ ಮೆಟ್ರೋ ದಲ್ಲೇ ಪ್ರಯಾಣಿಸುವ ಮೋದಿ ಅಲ್ಲಿಂದ ಸಮಾವೇಶ ನಡೆವ ಮೈದಾನದವರೆಗೆ 2 ಕಿಲೋಮೀಟರ್ ರೋಡ್ ಶೋ ನಡೆಸುವ ಚಿಂತನೆ ನಡೆದಿದೆ.

# ಮಕ್ಕಳಿಗೆ ನಾಯಿ ಕಡಿತ

**ದಾವಣಗೆರೆ:** ಶಂಕಿತ ಹುಚ್ಚು ನಾಯಿಯೊಂದು 6-7 ಮಕ್ಕಳ ಮೇಲೆ ದಾಳಿ ನಡೆಸಿ, ಕಚ್ಚಿ ಗಾಯಗೊಳಿಸಿರುವ ಘಟನೆ ಹಳೇ ಕುಂದುವಾಡ, ಬೆಂಚಿಕಟ್ಟೆ-ಯಲ್ಲಿ ಸೋಮವಾರ ನಡೆದಿದೆ.

ಮಕ್ಕಳು ಮಾತ್ರವಲ್ಲದೇ ಹಿರಿಯರ ಮೇಲೂ ನಾಯಿ ದಾಳಿ ನಡೆಸಿದ್ದು, ಸಾರ್ವಜನಿಕರು ಬೆಚ್ಚಿಬಿದ್ದಿದ್ದಾರೆ.

ಸಂಜೆ ಶಾಲೆ ಬಿಡುವ ಸಮಯದಲ್ಲಿ ವಿದ್ಯಾರ್ಥಿಗಳ ಮೇಲೂ ದಾಳಿ ನಡೆಸಿರುವ ನಾಯಿ, ತಲೆ ಕೈ ಕಾಲುಗಳಿಗೆ ಕಚ್ಚಿ ಗಾಯಗೊಳಿಸಿದೆ.

ವಾರದ ಹಿಂದೆಯೂ ಹಳೇ ಕುಂದುವಾಡದಲ್ಲಿ 4-5 ಜನರ ಮೇಲೆ ನಾಯಿಗಳು ದಾಳಿ ನಡೆಸಿದ್ದವು.

ಈ ಬಗ್ಗೆ ಪಾಲಿಕೆಗೆ ಮಾಹಿತಿ ನೀಡಿದರೂ ಯಾವುದೇ ಕ್ರಮ ವಹಿಸಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ.

# ವಿವಿಧ ಯೋಜನೆಗಳಿಗೆ ಅರ್ಜಿಆಹ್ವಾನ

**ಹಾಸನ :** ಸಕಲೇಶಪುರ ಪುರಸಭಾ ವ್ಯಾಪ್ತಿಯಲ್ಲಿ 2025-26ನೇ ಸಾಲಿನ ಎಸ್.ಎಫ್.ಸಿ ಯೋಜನೆಯ ಶೇ.24.10%, ಶೇ.7.25% ಶೇ.5% ಹಾಗೂ 2025-26ನೇ ಸಾಲಿನ ಪುರಸಭಾ ನಿಧಿ ಶೇ.24.10% ರಅನುದಾನದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಬಡಜನರಕಲ್ಯಾಣ ಮತ್ತು ವಿಕಲಚೇತನರಕಲ್ಯಾಣ ಕಾರ್ಯಕ್ರಮಗಳ ಸೌಲಭ್ಯ ಪಡೆಯಲುಇಚ್ಛಿಸುವವರು ನಿಗಧಿಪಡಿಸಿರುವ ದಾಖಲಾತಿಗಳೊಂದಿಗೆ ಈ ಕಚೇರಿಗೆಅರ್ಜಿ ಸಲ್ಲಿಸಿ, ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ. ಷರತ್ತು ಮತ್ತು ಹೆಚ್ಚಿನ ವಿವರಗಳನ್ನು ಕಚೇರಿಯ ವೇಳೆಯಲ್ಲಿ ಸಂಬಂಧಪಟ್ಟ ವಿಷಯ ನಿರ್ವಾಹಕರಿಂದ ಪಡೆಯ ಬಹುದಾಗಿದೆ.

ಸ್ವಯಂಉದ್ಯೋಕ್ಕಾಗಿ ಹಾಗೂ ದಿವ್ಯಾಂಗಚೇತನರಿಗೆ ಸ್ವಯಂಉದ್ಯೋಗಕ್ಕಾಗಿ ಸಹಾಯಧನ ದಾಖಲೆಗಳ ವಿವರ: ಲಿಖಿತಅರ್ಜಿ, ಚಾಲ್ತಿ ಸಾಲಿನ ಆದಾಯದೃಢೀಕರಣ ಪತ್ರ ಮತ್ತುಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರ,ಬಿ.ಪಿ.ಎಲ್ ಪಡಿತರಚೀಟಿಯ ನಕಲು,ಆಧಾರ್‌ಕಾರ್ಡ್ ನಕಲು, ಬ್ಯಾಂಕ್ ಪಾಸ್ ಪುಸ್ತಕದ ನಕಲು ಪ್ರತಿ ಹಾಗೂ ವಿಕಲಚೇತರಿಗೆ ಸಂಬಂಧಿಸಿದ ಇಲಾಖೆಯಿಂದ ಪಡೆದ ವಿಕಲ ಚೇತನದೃಡೀಕರಣ ಪತ್ರ.

ಕಾರ್ಯಕ್ರಮದ ವಿವರ: 2025-26ನೇ ಸಾಲಿನ ಎಸ್. ಎಫ್.ಸಿ ಮತ್ತು ಪುರಸಭಾ ನಿಧಿಯ ಶೇ.24.10 ರ ಎಸ್.ಎಫ್.ಸಿ ಮತ್ತುಟಿ.ಎಸ್.ಪಿ ಉಪಘಟಕದಡಿಯಲ್ಲಿ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ, ಬಿ.ಇ/ ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಖರೀದಿಸಲು ಸಹಾಯಧನ, ಪಕ್ಕಾ ಮನೆ ನಿರ್ಮಿಸಲು ಸಹಾಯಧನ, 2025-26ನೇ ಸಾಲಿನ ಎಸ್. ಎಫ್.ಸಿ ಯೋಜನೆಯ ಶೇ.7.25 ರಅನುದಾನದಲ್ಲಿ ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಬಡ ವರ್ಗದಕುಟುಂಬದ ವಿದ್ಯಾರ್ಥಿಗಳಿಗೆ ಸಹಾಯಧನ.

ಅರ್ಜಿ ಸಲ್ಲಿಸಲುಕೊನೆಯ ದಿನಾಂಕ 18-08-2025 ಆಗಿದ್ದು, ಅವಧಿ ಮೀರಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಸಕಲೇಶಪುರ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

## ಡಿ.ದೇವರಾಜು ಅರಸು ಅವರ 110ನೇ ಜನ್ಮದಿನಾಚರಣೆಯ ಪೂರ್ವಭಾವಿ ಸಭೆ

**ದಾವಣಗೆರೆ:** ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಗಸ್ಟ್ 7 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಿ.ದೇವರಾಜು ಅರಸು ಅವರ 110ನೇ ಜನ್ಮದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ತಿಳಿಸಿದ್ದಾರೆ.

## ನಿಗಮದಿಂದ ತರಬೇತಿ ಕಾರ್ಯಕ್ರಮ

**ದಾವಣಗೆರೆ :** ಸಮಾಜ ಕಲ್ಯಾಣ ಇಲಾಖೆ, ತಾಂಡ ಅಭಿವೃದ್ಧಿ ನಿಗಮದ ವತಿಯಿಂದ ಸಂತಸೇವಾ ಲಾಲ್ ಜನ್ಮಸ್ಥಳ ಭಾಯಾಗಡ್, ಸೂರಗೊಂಡನಕೊಪ್ಪ, ಬಂಜಾರ ಸಮುದಾಯದ ವಿದ್ಯಾವಂತ ಯುವಕ, ಯುವತಿಯರಿಗೆ 2 ದಿನಗಳ ಸ್ವಯಂ ಉದ್ಯೋಗ, ವೃತ್ತಿ ಮಾರ್ಗದರ್ಶನ, ಬಂಜಾರ ಸಂಸ್ಕೃತಿ ಮತ್ತು ಸಂವಿಧಾನದ ಕುರಿತು ಅರಿವು ಹಾಗೂ ಜಾಗೃತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ದ್ವಿತೀಯ ಪಿಯುಸಿ ಹಾಗೂ ಮೇಲ್ಪಟ್ಟು ವಿದ್ಯಾರ್ಹತೆ ಹೊಂದಿರಬೇಕು. ಅರ್ಜಿಯನ್ನು ಆಗಸ್ಟ್ 30 http://docs.google.com/form/d/1sZ4W5UP2qo9ZUMBmrTH4cyW6kU5XuCZIG60ayS8/edit ನಲ್ಲಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ನಂ.337/16ಎ–16, ಗಣೇಶ್ ಲೇ ಔಟ್, 1ನೇ ಕ್ರಾಸ್, ಪಿ.ಬಿ.ರಸ್ತೆ ದಾವಣಗೆರೆ ಮೊ.ಸಂ:9739941159 ಸಂಪರ್ಕಿಸಲು ತಿಳಿಸಿದ್ದಾರೆ.

## 11ನೇ ರಾಷ್ಟ್ರೀಯ ಕೈಮಗ್ಗ ದಿನ

**ದಾವಣಗೆರೆ:** ಆಗಸ್ಟ್ 7 ರಂದು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಾಭದ್ರಾ ಆಡಿಟೋರಿಯಂನಲ್ಲಿ 11ನೇ ರಾಷ್ಟ್ರೀಯ ಕೈಮಗ್ಗ ದಿನ ಆಯೋಜಿಸಲಾಗಿದೆ.

ಗಣಿ ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಶಾಸಕರಾದ ಡಾ:ಶಾಮನೂರು ಶಿವಶಂಕರಪ್ಪ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರಾದ ಶಿವಲಿಂಗಪ್ಪ ಎನ್. ಕುಂಬಾರ್ ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿರುವರೆಂದು ಪ್ರಕಟಣೆ ತಿಳಿಸಿದೆ.

## ಸ್ವಾತಂತ್ರ್ಯೋತ್ಸವ ದಿನಾಚರಣೆಯಂದು ಪ್ಲಾಸ್ಟಿಕ್ ಧ್ವಜಗಳ ಮಾರಾಟ ನಿಷೇಧ

**ದಾವಣಗೆರೆ:** ಆಗಸ್ಟ್ 15 ರಂದು ಆಚರಿಸಲಿರುವ ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಪ್ಲಾಸ್ಟಿಕ್ ಧ್ವಜ ಮಾರಾಟ ಮತ್ತು ಉಪಯೋಗಿಸದಂತೆ ಪರಿಸರ ಅಧಿಕಾರಿ ರಾಜಶೇಖರ್ ಪುರಾಣಿಕ್ ತಿಳಿಸಿದ್ದಾರೆ.

## ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಲಿಂಗತ್ವ ಅಲ್ಪಸಂಖ್ಯಾತರ ಸಮಾಜದ ಮುಖ್ಯವಾಹಿನಿ ಸೇರ್ಪಡೆಗೆ ಕ್ರಮ ವಹಿಸಿ

**ಚಿತ್ರದುರ್ಗ:** ಸಂವಿಧಾನ ಪ್ರತಿಯೊಬ್ಬರೂ ಗೌರವಯುತವಾಗಿ ಹಾಗೂ ಸ್ವಾಭಿಮಾನದಿಂದ ಬದುಕುವ ಹಕ್ಕು ನೀಡಿದ್ದು, ಲಿಂಗತ್ವ ಅಲ್ಪಸಂಖ್ಯಾತರು ಸಮಾಜದ ಮುಖ್ಯವಾಹಿನಿಗೆ ಬರುವ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಚೀಟಿ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಇಲ್ಲದಿದ್ದರೆ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಈ ನಿಟ್ಟಿನಲ್ಲಿ ವಿಶೇಷ ಪ್ರಕರಣ ಎಂದು ಪರಿಗಣಿಸಿ, ಈ ಕುರಿತು ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿ, ಲಿಂಗತ್ವ ಅಲ್ಪಸಂಖ್ಯಾತರ ಸಮಸ್ಯೆಗಳನ್ನು ಅಧಿಕಾರಿಗಳು ಅರ್ಥಮಾಡಿಕೊಂಡು, ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಈ ಸಮುದಾಯದವರಿಗೆ ಗುರುತಿನ ಚೀಟಿ, ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್‌ನಲ್ಲಿ ಆಗಬೇಕಿರುವ ಅಗತ್ಯ ಬದಲಾವಣೆಗಳ ಕುರಿತಂತೆ ತಿದ್ದುಪಡಿಗಳನ್ನು ಮಾಡಿಕೊಡುವಂತೆ ವಿವಿಧ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಲಿಂಗತ್ವ ಅಲ್ಪಸಂಖ್ಯಾತರ ಕುಂದು ಕೊರತೆಗಳನ್ನು ಆಲಿಸುವ ಸಲುವಾಗಿ ಜಿಲ್ಲಾ ಮಟ್ಟ ಹಾಗೂ ತಾಲ್ಲೂಕು ಮಟ್ಟದಲ್ಲಿ ತ್ರೈಮಾಸಿಕ ಸಭೆಗಳನ್ನು ಆಯೋಜಿಸಿ, ಅವರ ಸಮಸ್ಯೆಗಳನ್ನು ಆಲಿಸಿ, ಸಮಸ್ಯೆಗೆ ಪರಿಹಾರ ಒದಗಿಸಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯ್ ಕುಮಾರ್ ಮಾತನಾಡಿ, ಚಿತ್ರದುರ್ಗ ತಾಲ್ಲೂಕಿನಲ್ಲಿ 53, ಚಳ್ಳಕೆರೆ 16, ಹೊಳಲ್ಕೆರೆ 01, ಹೊಸದುರ್ಗ 03, ಹಿರಿಯೂರು 42, ಮೊಳಕಾಲ್ಮುರು 35 ಸೇರಿದಂತೆ ಪ್ರಸ್ತುತ ಜಿಲ್ಲೆಯಲ್ಲಿ ಒಟ್ಟು 150 ಲಿಂಗತ್ವ ಅಲ್ಪಸಂಖ್ಯಾತರಿದ್ದು, 78 ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಚೀಟಿ ವಿತರಣೆ ಮಾಡಲಾಗಿದೆ. 28 ಜನರು ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳಾಗಿದ್ದಾರೆ. 139 ಲಿಂಗತ್ವ ಅಲ್ಪಸಂಖ್ಯಾತರು ಆದಾಯೋತ್ಪನ್ನಕರ ಚಟುವಟಿಕೆಯ ಸೌಲಭ್ಯ ಪಡೆದಿದ್ದಾರೆ ಎಂದು ತಿಳಿಸಿದರು. ಲಿಂಗತ್ವ ಅಲ್ಪಸಂಖ್ಯಾತರ ಸರ್ವೇಗೆ ಹೆಸರು ನೋಂದಣಿಗೆ ಮನವಿ: ಲಿಂಗತ್ವ ಅಲ್ಪಸಂಖ್ಯಾತರ ನಿಖರ ಮಾಹಿತಿ ಸಂಗ್ರಹಿಸುವ ದೃಷ್ಟಿಯಿಂದ ಜಿಲ್ಲೆಯಲ್ಲಿ ಶೀಘ್ರ ಸರ್ವೇ ಕಾರ್ಯ ಪ್ರಾರಂಭವಾಗಲಿದ್ದು, ಹೆಸರು ನೋಂದಣಿ ಮಾಡಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯ್ ಕುಮಾರ್ ಮನವಿ ಮಾಡಿದರು. ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅಂಕಿ ಅಂಶಗಳು ಅಗತ್ಯ. ಲಿಂಗತ್ವ ಅಲ್ಪಸಂಖ್ಯಾತರ ಸರ್ವೇ ಮಾಡುವುದು ಬಹು ದಿನಗಳ ಬೇಡಿಕೆಯಾಗಿದ್ದು, ಶೀಘ್ರದಲ್ಲಿ ಸರ್ವೇ ಕಾರ್ಯಕ್ರಮ ಪ್ರಾರಂಭವಾಗಲಿದೆ. ಲಿಂಗತ್ವ ಅಲ್ಪಸಂಖ್ಯಾತರು ಹೆಸರು ನೋಂದಣಿ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ನಗರ ಹಾಗೂ ಗ್ರಾಮೀಣ ವ್ಯಾಪ್ತಿಯ ಲಿಂಗತ್ವ ಅಲ್ಪಸಂಖ್ಯಾತರಿಗೆ ನಿವೇಶನ ಹಾಗೂ ವಸತಿ ಸೌಲಭ್ಯ ಪಡೆಯಲು ದಾಖಲಾತಿಗಳು ಕಡ್ಡಾಯವಾಗಿ ಬೇಕಾಗಿದ್ದು, ಹೌಸಿಂಗ್ ಬೋರ್ಡ್‌ಗೆ ದಾಖಲೆಗಳು ಸಲ್ಲಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದ ಅವರು, ಇಲಾಖೆವಾರು ಟ್ರಾನ್ಸ್‌ಜೆಂಡರ್ ಪಾಲಿಸಿ ಅನುಷ್ಠಾನಕ್ಕೆ ಅಧಿಕಾರಿಗಳು ಕ್ರಮವಹಿಸಬೇಕು. ಈಗಾಗಲೇ ಜಿಲ್ಲೆಯ ಪ್ರತಿ ಪೊಲೀಸ್ ಠಾಣಾವಾರು ನೋಡಲ್ ಅಧಿಕಾರಿಗಳ ನೇಮಕವಾಗಿದ್ದು, ಪೊಲೀಸ್ ಓರಿಯಂಟೇಷನ್ ಕಾರ್ಯಕ್ರಮ ಆಗಬೇಕು ಎಂದು ಲಿಂಗತ್ವ ಲಿಂಗತ್ವ ಅಲ್ಪಸಂಖ್ಯಾತರ ಪ್ರತಿನಿಧಿ ಮಲ್ಲು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಸಿದ್ದರಾಮಪ್ಪ, ಆರೋಗ್ಯ ಇಲಾಖೆಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಸುಧಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ಇದ್ದರು.

# ರಾಜ್ಯ ಸರ್ಕಾರ ವಿರುದ್ಧ ಕರುನಾಡ ವಿಜಯಸೇನೆ ಪ್ರತಿಭಟನೆ




**ಚಿತ್ರದುರ್ಗ :** ಆರ್.ಸಿ.ಬಿ. ತಂಡ ಹದಿನೆಂಟು ವರ್ಷಗಳ ನಂತರ ಫೈನಲ್ ಕಪ್ ಗೆದ್ದಿರುವುದಕ್ಕೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಏರ್ಪಡಿಸಲಾಗಿದ್ದ ಸಂಭ್ರಮಾಚರಣೆ ವೇಳೆ ಉಂಟಾದ ನೂಕು ನುಗ್ಗಲಿನಲ್ಲಿ 11 ಮಂದಿ ಬಲಿಯಾಗಿರುವುದಕ್ಕೆ ಬೆಂಗಳೂರಿನ ಪೊಲೀಸ್ ಕಮಿಷನರ್ ಬಿ.ದಯಾನಂದ್ ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತ್ತುಗೊಳಿಸಿರುವ ರಾಜ್ಯ ಸರ್ಕಾರದ ಕ್ರಮವನ್ನು ವಿರೋಧಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾ ರಕ್ಷಣಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ನಗರ ಪೊಲೀಸ್ ಠಾಣೆ ವೃತ್ತ ನಿರೀಕ್ಷಕರಿಗೆ ಮನವಿ ಸಲ್ಲಿಸಲಾಯಿತು.

ಯಾವುದೇ ಪೂರ್ವ ಸಿದ್ದತೆಯಿಲ್ಲದೆ ಏಕಾಏಕಿ ರಾಜ್ಯ ಸರ್ಕಾರ ಸಂಭ್ರಮಾಚರಣೆಯ ತೀರ್ಮಾನ ತೆಗೆದುಕೊಂಡು ಎಸಗಿದ ಎಡವಟ್ಟಿನಿಂದ ಹನ್ನೊಂದು ಮಂದಿಯ ಬಲಿಯಾಗಿದೆಯೇ ವಿನಃ ಪೊಲೀಸರ ನಿರ್ಲಕ್ಷ್ಯೆಯಿಂದಲ್ಲ. ಅದಕ್ಕಾಗಿ ಪೊಲೀಸ್ ಅಧಿಕಾರಿಗಳಾದ ಬಿ.ದಯಾನಂದ್, ವಿಕಾಸ್‌ಕುಮಾರ್, ಹೆಚ್.ಟಿ.ಶೇಖರ್, ಬಾಲಕೃಷ್ಣ

ಗಿರೀಶ್ ಎ.ಕೆ. ಇವರುಗಳನ್ನು ಅಮಾನತ್ತುಗೊಳಿಸಿರುವುದು ಯಾವ ನ್ಯಾಯ?

# ನವಣೆಕೆರೆ ಗ್ರಾಮದಲ್ಲಿ ನೂತನ ಡಾಂಬರ್ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ

**ಹೊಳಲ್ಕೆರೆ :** ಜವಾಬ್ದಾರಿಯಿಟ್ಟುಕೊಂಡು ಕೆಲಸ ಮಾಡುವವರಿಗೆ ಚುನಾವಣೆಯಲ್ಲಿ ಓಟು ಹಾಕಿ. ನೀವುಗಳೆಲ್ಲಾ ನಮ್ಮ ಮೇಲೆ ಅಭಿಮಾನವಿಟ್ಟು ಮತ ನೀಡಿ ಗೆಲ್ಲಿಸಿದ್ದೀರ. ಕೊನೆಯುಸಿರಿರುವತನ ನಿಮ್ಮಗಳ ಸೇವೆ ಮಾಡಿ ಋಣ ತೀರಿಸುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಕ್ಷೇತ್ರದ ಮತದಾರರಿಗೆ ವಾಗ್ದಾನ ಮಾಡಿದರು.



ನವಣೆಕೆರೆ ಗ್ರಾಮದಲ್ಲಿ ಕೋಟಿ ರೂ.ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

31 ವರ್ಷಗಳ ಕೆಳಗೆ ಪ್ರಥಮ ಬಾರಿಗೆ ಭರಮಸಾಗರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿದ್ದಾಗ ಓಡಾಡಲು ರಸ್ತೆಗಳಿರಲಿಲ್ಲ. ಕಾರು, ಎತ್ತಿನಗಾಡಿ, ಬೈಕ್ ಸಂಚರಿಸುವುದು ಕಷ್ಟವಾಗಿತ್ತು. ಗೆದ್ದ ಮೇಲೆ 386 ಹಳ್ಳಿಗಳಲ್ಲಿ ರಸ್ತೆ ಮಾಡಿಸಿದ್ದರಿಂದ ರಸ್ತೆ ರಾಜ ಎಂಬ ಬಿರುದು ನೀಡಿ ಯುವಕರು ಹೆಗಲ ಮೇಲೆ ಹೊತ್ತು ಮೆರವಣಿಗೆ ಮಾಡಿ 2 ನೇ ಬಾರಿಗೂ ಚುನಾವಣೆಯಲ್ಲಿ ಗೆಲ್ಲಿಸಿದರು. ಹೆಗಲ ಮೇಲೆ ಕೈ ಹಾಕಿ ಡ್ರಾಮ ಮಾಡುವ ರಾಜ–ಕಾರಣಿ ನಾನಲ್ಲ. ಸಾರ್ವಜನಿಕರ ಬದುಕನ್ನು ಸ್ವಂತ ಬದುಕೆಂದು ಅರ್ಥಮಾಡಿಕೊಂಡು ಕ್ಷೇತ್ರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ. ಸರ್ಕಾರದಿಂದ ಹಣ ಮಂಜೂರು ಮಾಡಿಸಿಕೊಂಡು ಬರುವುದು ನನ್ನ ಕರ್ತವ್ಯ. ಕಾಮಗಾರಿಗಳು ಉತ್ತಮ ಗುಣಮಟ್ಟದಲ್ಲಿ ನಡೆಯುತ್ತಿದೆಯೋ ಇಲ್ಲವೋ ಎನ್ನುವುದನ್ನು ವೀಕ್ಷಿಸುವ ಜವಾಬ್ದಾರಿ ಗ್ರಾಮಸ್ಥರ ಮೇಲಿದೆ ಎಂದು ಎಚ್ಚರಿಸಿದರು.

ಹೊಳಲ್ಕೆರೆ ತಾಲ್ಲೂಕಿನ ಜನರನ್ನು ಬಂಧು–ಬಳಗದವರೆಂದು ಭಾವಿಸಿದ್ದೇನೆ. 493 ಹಳ್ಳಿಗಳಲ್ಲಿಯೂ ಇಂತಹ ಕೆಲಸ ಆಗಿಲ್ಲ ಎನ್ನುವಂತಿಲ್ಲ. ಎಲ್ಲೆಲ್ಲಿ ಏನೇನು ಅಭಿವೃದ್ದಿಪಡಿಸಬೇಕೆನ್ನುವುದನ್ನು ಹುಡುಕಿ ಕೆಲಸ ಮಾಡಿಸುತ್ತಿದ್ದೇನೆ. ಕೆಂಚಾಪುರದಲ್ಲಿರುವ ದೊಡ್ಡ ಹಳ್ಳದ ನೀರು ವ್ಯರ್ಥವಾಗಿ ಹರಿದು ಹೋಗುತ್ತದೆಂದು ಅಲ್ಲಿನ ಜನ ಸಮಸ್ಯೆ ಹೇಳಿಕೊಂಡಾಗ ಚೆಕ್‌ಡ್ಯಾಂ ನಿರ್ಮಾಣಕ್ಕಾಗಿ 1.50 ಕೋಟಿ ರೂ.ಗಳನ್ನು ಕೊಟ್ಟಿದ್ದೇನೆ.

ಹೆಚ್.ಡಿ.ದೇವೇಗೌಡ, ಜೆ.ಹೆಚ್.ಪಟೇಲ್ ಮುಖ್ಯಮಂತ್ರಿಯಾಗಿದ್ದಾಗ ನೌಕರರಿಗೆ ಸಂಬಳ ಕೊಡಲು ಸರ್ಕಾರದಲ್ಲಿ ಹಣವಿರುತ್ತಿರಲಿಲ್ಲ. ಅಂತಹ ಕಷ್ಟದ ಕಾಲದಲ್ಲಿಯೇ ಅನುದಾನ ಮಂಜೂರು ಮಾಡಿಸಿಕೊಂಡು ಬರುತ್ತಿದ್ದೆ ಎಂದರು.

ಹೊಳಲ್ಕೆರೆ ಬಿಜೆಪಿ. ಮಂಡಲ ಮಾಜಿ ಅಧ್ಯಕ್ಷ ಎಂ.ಬಿ.ಸಿದ್ದೇಶ್, ಕುಮಾರಣ್ಣ, ಜಗದೀಶ್, ಮಹಲಿಂಗಣ್ಣ, ಚಂದ್ರಣ್ಣ, ನುಲೇನೂರು ಶೇಖರ್, ಮರುಳಸಿದ್ದಪ್ಪ, ಗುತ್ತಿಗೆದಾರ ರಾಜಶೇಖರ್ ಹಾಗೂ ಗ್ರಾಮಸ್ಥರು ಈ ಸಂದರ್ಭದಲ್ಲಿದ್ದರು.

# ಎರಡು ವಾಹನ ಮುಟ್ಟುಗೋಲು

**ಚಿಕ್ಕಮಗಳೂರು, ಆ.4:** ಕೊಪ್ಪ ವಲಯ ವ್ಯಾಪ್ತಿಯಲ್ಲಿ ಬೀಟೆ ತುಂಡುಗಳ ಕಳ್ಳ ಸಾಗಾಣಿಕೆಯಲ್ಲಿ ತೊಡಗಿದ್ದ ಬಜಾಜ್ ಪಲ್ಸರ್ ಬೈಕ್ (ಎಂ.18.ಫ.6552) ಹಿರೊ ಹೆಚ್‌ಎಫ್ ಡಿಲಕ್ಸ್ (ಎಂ.18.ಫ.6773) ಅನ್ನು ಸ್ವತ್ತಿನೊಂದಿಗೆ ವಶಪಡಿಸಿಕೊಂಡು ಜುಲೈ 21 ರಂದು ಮೊಕದ್ದಮೆ ದಾಖಲಿಸಿದ್ದು, ಕರ್ನಾಟಕ ಅರಣ್ಯ ಕಾಯಿದೆ 1963 ರ ಸೆಕ್ಷನ್ 71(ಎ) ಪ್ರಕಾರ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕ್ರಮ ಕೈಗೊಳ್ಳಬೇಕಿದೆ. ವಾಹನಗಳ ಮೇಲೆ ಇರುವ ತಮ್ಮ ಹಕ್ಕು ಬಾಧ್ಯತೆಗಳನ್ನು ರುಜುವಾತುಪಡಿಸುವ ನಿಜವಾದ ಮಾಲೀಕರು ಇದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ 30 ದಿನಗಳೊಳಗಾಗಿ ಪ್ರಾಧಿಕಾರದ ಮುಂದೆ ಹಾಜರಾಗಿ ಅಹವಾಲು ಸಲ್ಲಿಸಲು ತಿಳಿಸಿದೆ.

ನಿಗದಿತ ಅವಧಿಯೊಳಗೆ ಯಾವುದೇ ಅಹವಾಲು ಬಾರದೇ ಇದ್ದಲ್ಲಿ 1963ನೇ ಕರ್ನಾಟಕ ಅರಣ್ಯ ಕಾಯಿದೆ 71(ಎ) ಮತ್ತು ತಿದ್ದುಪಡಿಯಾದ ಕಲಂನಡಿಯಲ್ಲಿ ಮೇಲ್ಕಂಡ ವಾಹನವನ್ನು ಪ್ರಕಟಣೆಯೇ ಅಂತಿಮ ನೋಟೀಸು ಎಂದು ಪರಿಗಣಿಸಿ, ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ಕೊಪ್ಪ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಈ. ಶಿವಶಂಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತ್ಯುತ್ತಮ ಶಿಕ್ಷಕರ ಪ್ರಶಸ್ತಿಗೆ ಪ್ರಸ್ತಾವನೆ ಸಲ್ಲಿಸಲು ಸಲಹೆ

**ಚಿಕ್ಕಮಗಳೂರು, ಆ.5:** 2025–26ನೇ ಸಾಲಿನ ಚಿಕ್ಕಮಗಳೂರು ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿಗೆ ಆಸಕ್ತ ಪ್ರೌಢ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರು ಎರಡು ಪ್ರತಿಗಳೊಂದಿಗೆ ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಆಗಸ್ಟ್ 11 ರೊಳಗೆ ಪ್ರಸ್ತಾವನೆ ಸಲ್ಲಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸೆಪ್ಟಂಬರ್ 13 ರಂದು ರಾಷ್ಟ್ರೀಯ ಲೋಕ ಅದಾಲತ್**

ಚಿಕ್ಕಮಗಳೂರು, ಆ.5: ಸೆಪ್ಟಂಬರ್ 13 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಲಾಗಿದ್ದು, ಅದಾಲತ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸುವ ಕುರಿತು ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣದ ಪೂರ್ವಭಾವಿ ಲೋಕ ಅದಾಲತ್ ಬೈಠಕ್ ನಡೆಸಲಾಗುತ್ತಿದೆ. ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಈ ಅದಾಲತ್ ಅನ್ನು ಆಯೋಜಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ತಿಳಿಸಿದ್ದಾರೆ.

**ಶುಂಠಿ ಎಲೆ ಚುಕ್ಕೆ ರೋಗದ ನಿರ್ವಹಣೆ**

ಚಿಕ್ಕಮಗಳೂರು, ಆ.5: ಶುಂಠಿ ಬೆಳೆಗೆ ಎಲೆ ಚುಕ್ಕೆ ರೋಗ ನಿರ್ವಹಣೆಗೆ ಸಂಬಂಧಿಸಿದಂತೆ ತೋಟಗಾರಿಕೆ ಉಪನಿರ್ದೇಶಕರು ಸಲಹೆ ನೀಡಿದ್ದಾರೆ.

ಸಣ್ಣನೆಯ ವೃತ್ತಾಕಾರದ ಅಥವಾ ಗೋಲಾಕಾರದ ತಿಳಿಹಳದಿ ಚುಕ್ಕೆಗಳು ಕಾಣಿಸಿಕೊಂಡು ನಂತರ ಚುಕ್ಕೆಗಳು

# ತಾಯಿ ಹಾಲಿನ ಮಹತ್ವ ತಿಳಿಸುವುದು ಸ್ತನ್ಯಪಾನ ಸಪ್ತಾಹದ ಉದ್ದೇಶ : ಡಾ. ಅಶ್ವಥ್‌ಬಾಬು

**ಚಿಕ್ಕಮಗಳೂರು**–ತಾಯಿ ಹಾಲು ಅದರ ಮಹತ್ವ ಮಗುವಿನ ಮೇಲಾಗುವ ಪ್ರಯೋಜನದ ಬಗ್ಗೆ ಅರಿವು ಮೂಡಿಸುವ ಉದ್ದೇಶದೊಂದಿಗೆ ಆಗಸ್ಟ್ ಮೊದಲ ವಾರದಲ್ಲಿ ಸ್ತನ್ಯಪಾನ ಸಪ್ತಾಹ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅಶ್ವಥ್‌ಬಾಬು ತಿಳಿಸಿದರು.



ಅವರು ಇಂದು ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾಸ್ಪತ್ರೆ, ಹಾಗೂ ಇನ್ನರ್ ವೀಲ್ಹ್ ಕ್ಲಬ್, ರೋಟರಿ ಕ್ಲಬ್, ರೋಟರಿ ಕಾಫಿ ಲ್ಯಾಂಡ್ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ 'ವಿಶ್ವ ಸ್ತನ್ಯಪಾನ ಸಪ್ತಾಹ' 2025 ನ್ನು ಉದ್ಘಾಟಿಸಿ ಮಾತನಾಡಿದರು.

ಸ್ತನ್ಯಪಾನದಿಂದ ಯಾವ ಯಾವ ರೋಗಗಳನ್ನು ತಡೆಯಬಹುದು ಹಾಗೂ ಅದರ ಅನುಕೂಲತೆಗಳ ಬಗ್ಗೆ ಈ ಸಪ್ತಾಹದ ಮೂಲಕ ತಾಯಂದಿರಲ್ಲಿ ಜಾಗೃತಿ ಮೂಡಿಸಲಾಗುವುದೆಂದು ಹೇಳಿದರು.

ಆರೋಗ್ಯ ಇಲಾಖೆಯಿಂದ ಆಯೋಜಿಸುವ ವಿವಿಧ ಆರೋಗ್ಯ ಅರಿವು ಕಾರ್ಯಕ್ರಮಗಳಲ್ಲಿ ಇನ್ನರ್ ವೀಲ್ಹ್ ಕ್ಲಬ್, ರೋಟರಿ ಕ್ಲಬ್, ಲಯನ್ ಸಂಸ್ಥೆ ಸಕ್ರಿಯವಾಗಿ ಪಾಲ್ಗೊಂಡು ಸಲಹೆ ಸಹಕಾರ ನೀಡುವಂತೆ ಮನವಿ ಮಾಡಿದರು.

ಜಿಲ್ಲಾ ಸರ್ಜನ್ ಡಾ. ಚಂದ್ರಶೇಖರ್ ಪ್ರಾಸ್ತಾವಿಕವಾಗಿ ಮಾತನಾಡಿ, ಮಗು ಜನಿಸಿದ 6 ತಿಂಗಳು ತಪ್ಪದೇ ಸ್ತನ್ಯಪಾನ ಕಡ್ಡಾಯವಾಗಿ ನೀಡಬೇಕು ಎಂಬುದನ್ನು ತಾಯಂದಿರಲ್ಲಿ ಸಪ್ತಾಹದ ಮೂಲಕ ಅರಿವು ಮೂಡಿಸುವ ಅಗತ್ಯ ಇದೆ ಎಂದರು.

ಇದನ್ನು ಮನಗಂಡ ವಿಶ್ವ ಆರೋಗ್ಯ ಸಂಸ್ಥೆ ಪ್ರತೀ ವರ್ಷ ಈ ಬಗ್ಗೆ ಅರಿವು ಮೂಡಿಸಲು ಸ್ತನ್ಯಪಾನ ಸಪ್ತಾಹವನ್ನು ಆಚರಿಸುತ್ತಿದೆ. 2025 ರಲ್ಲಿ 'ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ' ಎಂಬ ಘೋಷವಾಕ್ಯದೊಂದಿಗೆ ಶೇ.50 ರಷ್ಟು ಗುರಿ ತಲುಪಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಸ್ತನ್ಯಪಾನದಿಂದ ತಾಯಿ ಮತ್ತು ಮಗು ಇಬ್ಬರಿಗೂ ಪ್ರಯೋಜನವಿದೆ. ಚುಚ್ಚುಮದ್ದು ಕೊಡುವುದರಿಂದ ಹಲವಾರು ರೋಗಗಳನ್ನು ತಡೆಗಟ್ಟಲು ಅವಕಾಶವಿರುವಂತೆ ಮಗುವಿಗೆ ರೋಗಗಳು ಬರದಂತೆ ತಡೆಯುವ ಶಕ್ತಿ ಸ್ತನ್ಯಪಾನಕ್ಕಿದೆ ಎಂದು ಹೇಳಿದರು.

ಮಗು ಜನಿಸಿದ ಮೊದಲ ತಿಂಗಳಲ್ಲೇ ಮೃತಪಡುವುದು ಮತ್ತು ರೋಗಗಳಿಗೆ ತುತ್ತಾಗುವುದನ್ನು ತಡೆಯಲು ಸ್ತನ್ಯಪಾನದಿಂದ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ತಾಯಂದಿರು ಮಗು ಹಾರೈಕೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕಾಗಿದೆ ಎಂದು ಕಿವಿಮಾತು ಹೇಳಿದರು.

ಸ್ತನ್ಯಪಾನ ಮಾಡುವುದರಿಂದ ಮಹಿಳೆಯರ ಸೌಂದರ್ಯ ಹಾಳಾಗುತ್ತದೆಂಬ ಮೂಢನಂಬಿಕೆಯಿಂದ ಹೊರತರುವ ಕೆಲಸವನ್ನು ಈ ಸಪ್ತಾಹದ ಮೂಲಕ ತಾಯಂದಿರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಉದ್ದೇಶವಾಗಿದೆ ಎಂದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಮಂಜುನಾಥ್ ಮಾತನಾಡಿ, ಮಗು ಜನಿಸಿದ 6 ತಿಂಗಳವರೆಗೆ ಕಡ್ಡಾಯವಾಗಿ ಎದೆಹಾಲನ್ನು ನೀಡಿದರೆ ವಾಂತಿಭೇದಿ, ನ್ಯುಮೋನಿಯಾ ಮುಂತಾದವುಗಳಿಗೆ ತುತ್ತಾಗುವುದನ್ನು ತಡೆಯಬಹುದಾಗಿದೆ. ತಾಯಂದಿರಿಗೆ ಹಾಲುಣಿಸುವ ಬಗ್ಗೆ ಆರೋಗ್ಯ ಇಲಾಖೆಯ ಕಾರ್ಯಕರ್ತರು ಮನವರಿಕೆ ಮಾಡುತ್ತಿದ್ದಾರೆಂದು ಹೇಳಿದರು.

ಜಿಲ್ಲೆಯಲ್ಲಿ 2024–25 ರಲ್ಲಿ 12302 ಮಕ್ಕಳು ಜನಿಸಿದ್ದು, ಇದರಲ್ಲಿ 83 ಮಕ್ಕಳು ಮೊದಲ ಹುಟ್ಟುಹಬ್ಬವನ್ನೇ ನೋಡಿಲ್ಲ. ಕಾರಣ ಸ್ತನ್ಯಪಾನದಿಂದ ವಂಚಿತರಾಗಿ 18 ಮಕ್ಕಳು ಮೃತಪಟ್ಟಿರುವುದಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಡಾ. ಭಾರತಿ, ಡಾ. ಶಶಿಕಲಾ, ಶಿವರಾಜ್, ಸ್ತ್ರೀರೋಗ ತಜ್ಞ ಡಾ. ಪುಟ್ಟಪ್ಪ, ಮಕ್ಕಳ ತಜ್ಞರಾದ ಡಾ. ವರದಾ ವಿದ್ಯಾರಾಣಿ, ಡಾ. ಕಲ್ಪನ, ಇನ್ನರ್ ವೀಲ್ಹ್ ಕ್ಲಬ್, ನಯನ ಸಂತೋಷ್, ಶಾಲಿನ ನಾಗೇಶ್, ನಾಗೇಶ್ ಕೆಂಜಿಗೆ, ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಡಿ.ಎನ್.ಓ ರೇಣುಕ ಸ್ವಾಗತಿಸಿ, ಜಲಜಾಕ್ಷಿ ನಿರೂಪಿಸಿದರು.

# ರಸಗೊಬ್ಬರ ಸರಬರಾಜು ಮಾಡುವಂತೆ ಆಗ್ರಹಿಸಿ ಜಿಲ್ಲಾಡಳಿತಕ್ಕೆ ಜೆಡಿಎಸ್ ಮನವಿ



**ಚಿಕ್ಕಮಗಳೂರು:** ರೈತರಿಗೆ ಅಗತ್ಯವಾಗಿ ಬೇಕಾಗಿರುವ ಯೂರಿಯಾ–ಡಿಎಪಿ ರಸಗೊಬ್ಬರವನ್ನು ಅತೀ ಶೀಘ್ರ ವಿತರಣೆ ಮಾಡುವಂತೆ ಆಗ್ರಹಿಸಿ ಇಂದು ಜೆಡಿಎಸ್ ವತಿಯಿಂದ ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ನಂತರ ಮಾತನಾಡಿದ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ರಂಜನ್ ಅಜಿತ್ ಕುಮಾರ್, ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿರುವುದರಿಂದ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಿದ್ದು, ಈ ನಿಟ್ಟಿನಲ್ಲಿ ರೈತರಿಗೆ ಅಗತ್ಯವಾಗಿ ಬೇಕಾಗಿರುವ ಬಿತ್ತನೆ ಬೀಜ, ರಸಗೊಬ್ಬರ ಸೇರಿದಂತೆ ರೈತರಿಗೆ ಅಗತ್ಯ ಕೃಷಿ ಪರಿಕರಗಳನ್ನು ಕೂಡಲೇ ಸರಬರಾಜು ಮಾಡುವಂತೆ ಕೃಷಿ ಸಚಿವರನ್ನು ಒತ್ತಾಯಿಸಿದರು.

ಜಿಲ್ಲೆಯ ಜ್ವಲಂತ ಸಮಸ್ಯೆಗಳ ಬಗ್ಗೆ ಜೆಡಿಎಸ್ ಹೋರಾಟ ರೂಪಿಸಲಿದೆ. ಕಾಡು ಪ್ರಾಣಿಗಳು, ಮಾನವ ಸಂಘರ್ಷ ಒಂದೆಡೆ–ಯಾದರೆ, ಕಾಡಾನೆಗಳ ದಾಳಿಗೆ ತುತ್ತಾಗುತ್ತಿರುವ ಕಾರ್ಮಿಕರ ರಕ್ಷಣೆ ಮಾಡಬೇಕು, ಜೊತೆಗೆ ವೈಜ್ಞಾನಿಕ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ರೈತರನ್ನು ಒಕ್ಕಲೆಬ್ಬಿಸುವ ಸಲುವಾಗಿ ಮದಗದ ಕೆರೆ ಬಳಿ ಚಿರತೆ ತಂದುಬಿಟ್ಟು ಅರಣ್ಯ ಇಲಾಖೆ ಆ ಭಾಗದ ರೈತರಿಗೆ ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಮಲೆನಾಡು ಭಾಗದಲ್ಲಿ ಗಿಡ್ಡ ತಳಿ ಹಸುಗಳನ್ನು ಸಾಕಾಣೆ ಮಾಡಿದ್ದು, ಅರಣ್ಯ ಸಚಿವರು ಅರಣ್ಯದ ಒಳಭಾಗದಲ್ಲಿ ದನಗಳನ್ನು ಮೇಯಿಸಲು ಬಿಡಬಾರದು ಎಂದು ಆದೇಶ ಮಾಡಿರುವುದು ಸರಿಯಾದ ಕ್ರಮವಲ್ಲ. ಕೂಡಲೇ ಈ ಆದೇಶವನ್ನು ವಾಪಾಸ್ ಪಡೆಯುವಂತೆ ಹೇಳಿದರು.

# ಕೃಷಿ ಇಲಾಖೆಯಿಂದ ನೈಸರ್ಗಿಕ ಕೃಷಿ ಅಭಿಯಾನ

**ಚಿಕ್ಕಮಗಳೂರು, ಆ.5:** ಕೃಷಿ ಇಲಾಖೆಯಲ್ಲಿ ನೈಸರ್ಗಿಕ ಕೃಷಿ ಯೋಜನೆಯು ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಎಂಬ ಹೆಸರಿನಿಂದ 2025–26ನೇ ಸಾಲಿನಿಂದ ಅನುಷ್ಠಾನಗೊಳ್ಳುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಹೆಚ್.ಎಸ್.ಸುಜಾತ ಅವರು ತಿಳಿಸಿದ್ದಾರೆ.

ಈ ಕುರಿತು ಮಾಹಿತಿಯನ್ನು ಬಿಡುಗಡೆ ಮಾಡಿರುವ ಅವರು, ನೈಸರ್ಗಿಕ ಕೃಷಿಯು ಜಾನುವಾರು ಮತ್ತು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳ ಬಳಕೆಯ ಆಧಾರದ ಮೇಲೆ ಅವಲಂಬಿತವಾಗಿರುವ ರಾಸಾಯನಿಕ ಮುಕ್ತ ಕೃಷಿ ವ್ಯವಸ್ಥೆಯಾಗಿದ್ದು, ಭಾರತೀಯ ಸಂಪ್ರದಾಯದಲ್ಲಿ ಬೇರೂರಿರುವ ಸಮಗ್ರ ನೈಸರ್ಗಿಕ ಕೃಷಿ ಹಾಗೂ ವೈವಿಧ್ಯ ಬೆಳೆ ಪದ್ದತಿಯಾಗಿದೆ. ಮಣ್ಣಿನ ಫಲವತ್ತತೆ ಹಾಗೂ ಉತ್ಪಾದಕತೆ ಮಣ್ಣಿನ ಆರೋಗ್ಯದ ಮೇಲೆ ಅವಲಂಬಿಸಿದ್ದು ಸಸ್ಯ ಜನ್ಯ ಹಾಗೂ ಪ್ರಾಣಿಜನ್ಯ ಪದಾರ್ಥಗಳಿಂದ, ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳ ಸೂಕ್ತ ಬಳಕೆಯಿಂದ ಯಾವುದೇ ಕೃಷಿ ಪರಿಕರಗಳನ್ನು ಮಾರುಕಟ್ಟೆಯಿಂದ ಖರೀದಿಸದೆ ನೈಸರ್ಗಿಕ ತತ್ವಗಳ ಆಧಾರದ ಮೇಲೆ ರೈತರನ್ನು ಸ್ವಾವಲಂಬಿಯಾಗಿಸುವ ಪರಿಸರ ಸ್ನೇಹಿ ಬೇಸಾಯವೇ ನೈಸರ್ಗಿಕ ಕೃಷಿ ಎಂದು ತಿಳಿಸಿದ್ದಾರೆ.

ನೈಸರ್ಗಿಕ ಕೃಷಿಯು ವೈಜ್ಞಾನಿಕ ಹಾಗೂ ಕೌಶಲ್ಯಯುತವಾಗಿದ್ದು, ಸ್ಥಳೀಯವಾಗಿ ಲಭ್ಯವಿರುವ ತಂತ್ರಜ್ಞಾನ ಹಾಗೂ ಸುಸ್ಥಿರ ಬೇಸಾಯ ಪದ್ಧತಿಗಳನ್ನು ಅಳವಡಿಸಿಕೊಂಡು ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು, ನೀರು ಮತ್ತು ಜೀವ ವೈವಿಧ್ಯತೆಯನ್ನು ಸಂರಕ್ಷಿಸುವುದು ಮತ್ತು ಇವುಗಳ ಸಮರ್ಪಕ ಬಳಕೆಯಿಂದ ಆಹಾರ ಉತ್ಪಾದನೆ ಹೆಚ್ಚಿಸಬಹುದು.

ಮಣ್ಣಿನ ಫಲವತ್ತತೆ ಹಾಗೂ ಉತ್ಪಾದಕತೆ ಮಣ್ಣಿನ ಆರೋಗ್ಯದ ಮೇಲೆ ಅವಲಂಬಿಸಿದ್ದು, ಸಸ್ಯಜನ್ಯ ಹಾಗೂ ಪ್ರಾಣಿಜನ್ಯ ಪದಾರ್ಥಗಳಿಂದ ಮಣ್ಣಿನ ಭೌತಿಕ, ರಾಸಾಯನಿಕ ಹಾಗೂ ಜೈವಿಕ ಗುಣಧರ್ಮಗಳನ್ನು ಸುಧಾರಿಸಿ ಮಣ್ಣನ್ನು ಜೀವಂತಗೊಳಿಸುವುದು. ಸ್ಥಾನಿಕ ಕ್ರಿಯೆಗಳಾದ ಸಾರಜನಕ ಸ್ಥಿರೀಕರಣ, ಸಾವಯವ ಪದಾರ್ಥಗಳ ಕಳಿಸುವಿಕೆ, ಪೋಷಕಾಂಶಗಳ ಹಿಡಿದಿಟ್ಟುಕೊಳ್ಳುವಿಕೆ, ಅವುಗಳ ಚಲನಶೀಲತೆ ಮತ್ತು ಲಭ್ಯತೆಯನ್ನು ಹೆಚ್ಚಿಸಿ ಸಸ್ಯಗಳಿಗೆ ಪೂರೈಸುವುದು. ಕೃಷಿಯಲ್ಲಿ ಜೀವ ವೈವಿದ್ಯತೆಯನ್ನು ಹೆಚ್ಚಿಸಿ ನೈಸರ್ಗಿಕ ವಿಧಾನಗಳಿಂದ ಕಳೆ, ರೋಗ ಹಾಗೂ ಕೀಟಗಳ ನಿರ್ವಹಣೆ ಕೈಗೊಂಡು ಉತ್ತಮ ಗುಣಮಟ್ಟದ ಆಹಾರ ಉತ್ಪಾದನೆ ಮಾಡುವುದು. ಆಸಕ್ತ ರೈತರು ಯೋಜನೆಯ ಲಾಭ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**